ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು , ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 140

13–11–2025 ಗುರುವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 140

## ಕೆಂಪು ಕೋಟೆ ಬಳಿ ಕಾರು ಸ್ಫೋಟ 'ಭಯೋತ್ಪಾದಕ ದಾಳಿ'

### ಕೇಂದ್ರ ಸಚಿವ ಸಂಪುಟ ಸಭೆಯಲ್ಲಿ ಪುನರುಚ್ಚಾರ



**ನವದೆಹಲಿ:** ದೆಹಲಿಯ ಕೆಂಪು ಕೋಟೆ ಬಳಿ ಸೋಮವಾರ ಸಂಜೆ ನಡೆದ ಕಾರು ಸ್ಫೋಟವನ್ನು "ಭಯೋತ್ಪಾದಕ ದಾಳಿ" ಎಂದು ಬುಧವಾರ ಕೇಂದ್ರ ಸರ್ಕಾರ ಹೇಳಿದ್ದು, ತನಿಖಾ ಸಂಸ್ಥೆಗಳಿಗೆ "ಅತ್ಯಂತ ತುರ್ತಾಗಿ ಮತ್ತು ವೃತ್ತಿಪರತೆ"ಯಿಂದ ಪ್ರಕರಣವನ್ನು ನಿಭಾಯಿಸಲು ಹಾಗೂ ಅಪರಾಧಿಗಳನ್ನು ವಿಳಂಬವಿಲ್ಲದೆ ಬಂಧಿಸುವಂತೆ ನಿರ್ದೇಶಿಸಿದೆ.

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಭೂತಾನ್‌ನಿಂದ ಹಿಂದಿರುಗಿದ ನಂತರ ನಡೆದ ಕೇಂದ್ರ ಸಚಿವ ಸಂಪುಟ ಸಭೆಯಲ್ಲಿ, ಭಯೋತ್ಪಾದನೆಯ ವಿರುದ್ಧ ಶೂನ್ಯ ಸಹಿಷ್ಣುತೆಯ ನೀತಿಗೆ ಭಾರತದ ಅಚಲಬದ್ಧತೆಯನ್ನು ಪುನರುಚ್ಚರಿಸಲಾಯಿತು. ಸಚಿವ ಸಂಪುಟ ಸಭೆಯಲ್ಲಿ ಭಯೋತ್ಪಾದಕ ಘಟನೆಯಲ್ಲಿ ಸಾವನ್ನಪ್ಪಿದ ಅಮಾಯಕ ಜೀವಗಳಿಗೆ ಗೌರ ಸಲ್ಲಿಸಲು ಎರಡು ನಿಮಿಷ ಮೌನಾಚರಣೆ ಮಾಡಲಾಯಿತು. ಸಚಿವ ಸಂಪುಟವು, ಭಯೋತ್ಪಾದಕ ದಾಳಿಯಲ್ಲಿ ಮೃತಪಟ್ಟವರಿಗೆ ತೀವ್ರ ದುಃಖ ವ್ಯಕ್ತಪಡಿಸುವ ನಿರ್ಣಯ ಅಂಗೀಕರಿಸಿತು ಮತ್ತು ಸರ್ಕಾರದ ಉನ್ನತ ಮಟ್ಟದಲ್ಲಿ ಪರಿಸ್ಥಿತಿಯನ್ನು "ನಿಕಟವಾಗಿ ಮೇಲ್ವಿಚಾರಣೆ" ಮಾಡಲಾಗುತ್ತಿದೆ ಎಂದು ಸಚಿವ ಸಂಪುಟ ಸಭೆಯ ನಂತರ ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಸಂಪುಟ ಸಭೆಯ ಬಳಿಕ ಹೇಳಿದ್ದಾರೆ.

"ಈ ಹೇಡಿತನದ ಕೃತ್ಯವನ್ನು ಮೋದಿ ಸಂಪುಟ ಸ್ಪಷ್ಟವಾಗಿ ಖಂಡಿಸಿದೆ. ಭಯೋತ್ಪಾದನೆಯ ಎಲ್ಲಾ ರೂಪಗಳು ಮತ್ತು ಅಭಿವ್ಯಕ್ತಿಗಳ ಬಗ್ಗೆ ಶೂನ್ಯ ಸಹಿಷ್ಣುತೆಯ ನೀತಿಗೆ ಭಾರತದ ಅಚಲ ಬದ್ಧತೆಯನ್ನು ಸಂಪುಟ ಪುನರುಚ್ಚರಿಸುತ್ತದೆ" ಎಂದು ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ.

ಪ್ರಧಾನಿ ಮೋದಿ ಅವರು ಎರಡು ದಿನಗಳ ಭೂತಾನ್ ಭೇಟಿಯಿಂದ ಹಿಂದಿರುಗಿದ ಕೂಡಲೇ ಲೋಕ ನಾಯಕ್ ಜೈ ಪ್ರಕಾಶ್ ಆಸ್ಪತ್ರೆಗೆ ಭೇಟಿ ನೀಡಿ, ಉಗ್ರ ದಾಳಿಯಲ್ಲಿ ಗಾಯಗೊಂಡವರ ಆರೋಗ್ಯ ವಿಚಾರಿಸಿದರು. ನಂತರ ತಮ್ಮ ಅಧ್ಯಕ್ಷತೆಯಲ್ಲಿ ಭದ್ರತೆ ಕುರಿತ ಸಂಪುಟ ಸಮಿತಿಯ ಸಭೆ ನಡೆಸಿದರು.

## ಗ್ರೀಸ್ ವಿವಿಗೆ ಸಂದರ್ಶಕ ಪ್ರಾಧ್ಯಾಪಕರಾಗಿ ಪ್ರಸನ್ನಕುಮಾರ್



**ಶಿವಮೊಗ್ಗ.12 :** ದಾವಣಗೆರೆ ವಿಶ್ವವಿದ್ಯಾಲಯದ ಗಣಿತಶಾಸ್ತ್ರ ವಿಭಾಗದ ಪ್ರಾಧ್ಯಾಪಕರಾದ ಡಾ. ಬಿ ಸಿ ಪ್ರಸನ್ನಕುಮಾರ ಇವರನ್ನು ಗ್ರೀಸ್ ಅಥೆನ್ಸ್‌ನಲ್ಲಿ ಇರುವ ವೆಸ್ಟ್ ಅಟ್ಟಿಕಾ ವಿಶ್ವವಿದ್ಯಾಯಲಕ್ಕೆ (University of West Attica, Athens, Greece) ಸಂದರ್ಶಕ ಪ್ರಾಧ್ಯಾಪಕರಾಗಿ ಆಹ್ವಾನಿಸಲಾಗಿದೆ.

ನವೆಂಬರ್ 2025ರ 2 ಮತ್ತು 3ನೇ ವಾರದಲ್ಲಿ ನಿಗದಿಯಾಗಿರುವ ಈ ಭೇಟಿಯಲ್ಲಿ ವಿಶ್ವವಿದ್ಯಾಲಯದ ಮೆಕಾನಿಕಲ್ ಎಂಜಿನಿಯರಿಂಗ್ ವಿಭಾಗಕ್ಕೆ ಭೇಟಿ ನೀಡಿ ''Numerical simulation, Mathematical and Computer Modelling for Nonlinear Fluid Mechanics Problems" ಎಂಬ ವಿಷಯದ ಸಂಶೋಧನೆಗಳು ಮತ್ತು ಈ ಕ್ಷೇತ್ರದಲ್ಲಿನ ಅವಕಾಶಗಳ ಕುರಿತು ಚರ್ಚಿಸಲಿದ್ದಾರೆ.

ಎರಡು ದಿನ ಈ ಭೇಟಿಯಲ್ಲಿ ವಿಶ್ವವಿದ್ಯಾಲಯಗಳ ನಡುವಿನ ಶೈಕ್ಷಣಿಕ ವಿನಿಮಯಕ್ಕೆ ಉತ್ತೇಜನವನ್ನು ನೀಡಲಿದ್ದು, ವೆಸ್ಟ್ ಅಟ್ಟಿಕಾ ವಿಶ್ವವಿದ್ಯಾಲಯದ ಮೆಕಾನಿಕಲ್ ಎಂಜಿನಿಯರಿಂಗ್ ವಿಭಾಗದ ಪ್ರಾಧ್ಯಾಪಕರಾದ ಡಾ. ಐಯೋನಿಸ್ ಇ. ಸಾರಿಸ್ ಅವರ ಮತ್ತು ಅವರ ಸಂಶೋಧನಾ ತಂಡದೊಂದಿಗೆ ಉನ್ನತ ಮಟ್ಟದ ಚರ್ಚೆಗಳಲ್ಲಿ ತೊಡಗಿಕೊಳ್ಳಲಿದ್ದಾರೆ. ಹಾಗೂ ಮೇಲಿನ ವಿಷಯದ ಕುರಿತು ಸಂಶೋಧನಾ ಯೋಜನೆಯನ್ನು ಪೂರ್ಣಗೊಳಿಸುವುದರಲ್ಲಿ ಮಾರ್ಗದರ್ಶನವನ್ನು ಮಾಡಲಿದ್ದಾರೆ.

ಈ ಆಹ್ವಾನವು ಡಾ. ಬಿ ಸಿ ಪ್ರಸನ್ನಕುಮಾರರವರ ವೈಯಕ್ತಿಕ ಸಾಧನೆಗಳನ್ನು ಹಾಗೂ ದಾವಣಗೆರೆ ವಿಶ್ವವಿದ್ಯಾಲಯದ ಶೈಕ್ಷಣಿಕ ಸಮುದಾಯದ ಹೆಚ್ಚುತ್ತಿರುವ ಜಾಗತಿಕ ಪ್ರೊಫೈಲ್ ಅನ್ನು ಸಹ ಬಿಂಬಿಸಲಿದ್ದು, ಇವರಿಗೆ ದಾವಣಗೆರೆ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಬಿ ಡಿ ಕುಂಬಾರ್‌ರವರು. ವಿವಿಯ ಕುಲಸಚಿವರುಗಳು ತಮ್ಮ ತಂಡದೊಂದಿಗೆ ಡಾ. ಬಿ ಸಿ ಪ್ರಸನ್ನಕುಮಾರ ಇವರಿಗೆ ಈ ಪ್ರತಿಷ್ಠಿತ ಅವಕಾಶ ದೊರಕಿದ್ದಕ್ಕಾಗಿ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

## ಪ್ರಿಯಾಂಕ ಉಪೇಂದ್ರ ಅವರ ಮೊಬೈಲ್ ಹ್ಯಾಕ್ ಮಾಡಿದ್ದ ಸೈಬರ್ ವಂಚಕ ಬಲೆಗೆ



**ಬೆಂಗಳೂರು :** ನಟಿ ಪ್ರಿಯಾಂಕ ಉಪೇಂದ್ರ ಅವರ ಮೊಬೈಲ್ ಫೋನ್ ಹ್ಯಾಕ್ ಮಾಡಿ ವಂಚಿಸಿದ್ದ ಬಿಹಾರ ಮೂಲದ ಆರೋಪಿಯನ್ನು ಸದಾಶಿವನಗರ ಠಾಣೆ ಪೊಲೀಸರು ಬಂಧಿಸಿದ್ದಾರೆ. ಬಿ.ಕಾಂ ಪದವೀಧರ ಬಿಹಾರದ ವಿಕಾಸ್ ಕುಮಾರ್ (25) ಬಂಧಿತ ಸೈಬರ್ ವಂಚಕ. ನಟಿ ಪ್ರಿಯಾಂಕ ಉಪೇಂದ್ರ ಅವರು ಆನ್‌ಲೈನ್‌ನಲ್ಲಿ ವಸ್ತುವೊಂದನ್ನು ಬುಕ್ ಮಾಡಿದ್ದರು. ಸೆ.15 ರಂದು ಪ್ರಿಯಾಂಕ ಅವರ ಮೊಬೈಲ್‌ಗೆ ಕರೆ ಬಂದಿದ್ದು, ನೀವು ಮಾಡಿರುವ ಆರ್ಡರ್ ಡೆಲಿವರಿ ಮಾಡಲು ವಿಳಾಸ ಸಿಗುತ್ತಿಲ್ಲ. ನನ್ನ ಮೊಬೈಲ್‌ಗೆ ಕರೆ ಮಾಡಿ ಖಚಿತ ಪಡಿಸಿದರೆ ಡೆಲಿವರಿ ಮಾಡುತ್ತೇನೆ ಎಂದು ಹೇಳಿ ಹ್ಯಾಶ್‌ಟ್ಯಾಗ್ ಸಹಿತ ನಂಬರ್ ಕಳುಹಿಸಿದ್ದ. ಪ್ರಿಯಾಂಕ ಅವರು ಆ ವಸ್ತುಗಳನ್ನು ಡೆಲಿವರಿ ಮಾಡುವವರೇ ಕರೆ ಮಾಡಿರಬಹುದೆಂದು ತಿಳಿದು ಆ ವ್ಯಕ್ತಿ ಹೇಳಿದ ಮೊಬೈಲ್ ಸಂಖ್ಯೆಗೆ ಕರೆ ಮಾಡುತ್ತಿದ್ದಂತೆ ಪ್ರಿಯಾಂಕ ಅವರ ಮೊಬೈಲ್ ಹ್ಯಾಕ್ ಆಗಿದೆ. ಮೊದಲಿಗೆ ಅವರು ತನ್ನ ಮೊಬೈಲ್‌ನಲ್ಲಿ ಸಮಸ್ಯೆ ಇರಬಹುದೆಂದು ಎಂದು ಭಾವಿಸಿ ತಮ ಮಗನಿಂದ 50 ಸಾವಿರ ಹಣವನ್ನು ಹಾಕಿಸಿದ್ದಾರೆ. ನಂತರ ಪ್ರಿಯಾಂಕ ಅವರ ಮೊಬೈಲ್‌ನಲ್ಲಿದ್ದ ನಂಬರ್‌ಗಳಿಗೆ ಮೆಸೇಜ್ ಮಾಡಿ ವಂಚಕ ಹಣ ಕೇಳಿದ್ದಾನೆ. ಕೆಲವೇ ನಿಮಿಷಗಳಲ್ಲಿ ಉಪೇಂದ್ರ ಹಾಗೂ ಅವರಿಗೆ ಪರಿಚಯವಿರುವ ಮಹದೇವ್ ಎಂಬುವವರ ಮೊಬೈಲ್ ಫೋನ್ ಸಹ ಹ್ಯಾಕ್ ಆಗಿರುವುದು ಗಮನಿಸಿ ಸೈಬರ್ ವಂಚಕರ ಕೃತ್ಯವೆಂಬುವುದನ್ನು ಭಾವಿಸಿ ಪ್ರಿಯಾಂಕ ಅವರು ಪೊಲೀಸರಿಗೆ ದೂರು ನೀಡಿ–ದ್ದಾರೆ.

## ಭಾರತ ಬಹುತ್ವದ ರಾಷ್ಟ್ರ, ಎಂದಿಗೂ 'ಹಿಂದೂ' ರಾಷ್ಟ್ರ ಆಗಲ್ಲ– ಸಿಎಂ ಸಿದ್ದರಾಮಯ್ಯ

**ಮೈಸೂರು:** ಭಾರತ ಎಂದಿಗೂ ಹಿಂದೂ ರಾಷ್ಟ್ರ ಆಗಲ್ಲ ಎಂದು ಸಿಎಂ ಸಿದ್ದರಾಮಯ್ಯ ಮಂಗಳವಾರ ಹೇಳಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿ, ನಮ್ಮದು ಬಹುತ್ವದ ರಾಷ್ಟ್ರ. ಹಲವು ಕಲೆ, ಸಂಸ್ಕೃತಿ, ಭಾಷೆ, ಧರ್ಮಗಳಿರುವ ದೇಶ. ಆರ್‌ಎಸ್‌ಎಸ್ ಸಂಘಪರಿವಾರ ಬಹಳ ದಿನದಿಂದ ಹಿಂದೂ ರಾಷ್ಟ್ರದ ಬಗ್ಗೆ ಹೇಳುತ್ತಿದೆ. ಆದರೆ ಇದು ಎಂದಿಗೂ ಆಗುವುದಿಲ್ಲ ಎಂದು ಹೇಳಿದರು. ಇನ್ನು ಜಿ.ಟಿ.ದೇವೇಗೌಡರನ್ನು ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷ ಸ್ಥಾನದಿಂದ ಕೈ ಬಿಟ್ಟಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಅದು ಅವರ ಪಕ್ಷಕ್ಕೆ ಸೇರಿದ್ದು, ನಾನು ಯಾರನ್ನು ನಮ್ಮ ಪಕ್ಷಕ್ಕೆ ಬನ್ನಿ ಎಂದು ಕರೆಯುವುದಿಲ್ಲ. ಬಂದರೆ ಯಾಕೆ ಬಂದ್ರಿ ಎಂದು ಕೇಳುವುದಿಲ್ಲ. ಅದು ಅವರವರಿಗೆ ಬಿಟ್ಟದ್ದು. ನಾನು ಜಿ.ಟಿ ದೇವೇಗೌಡ ಒಂದೇ ಕ್ಷೇತ್ರದವರು. ಹೀಗಾಗಿ ಸ್ನೇಹ ಇದೇ ಅಷ್ಟೇ ಎಂದರು.

### ದಾವಣಗೆರೆಯಲ್ಲಿ ಐಟಿ, ಬಿಟಿ ಕಂಪನಿಗಳ ಆಹ್ವಾನಕ್ಕೆ ಕ್ರಮ

## 60 ದಿನಗಳಲ್ಲಿ 10ಕ್ಕಿಂತ ಹೆಚ್ಚು ಐಟಿ ಕಂಪನಿಗಳ ಆಗಮನದ ನಿರೀಕ್ಷೆ : ಡಾ.ಪ್ರಭಾ ಮಲ್ಲಿಕಾರ್ಜುನ್




**ದಾವಣಗೆರೆ :** ದಾವಣಗೆರೆಯಲ್ಲಿ ಐಟಿ, ಬಿಟಿ ಕಂಪನಿಗಳನ್ನು ಆಹ್ವಾನಿಸುವ ಮೂಲಕ ಸ್ಥಳೀಯವಾಗಿ ಜಿಲ್ಲೆಯ ಯುವ ಜನರಿಗೆ ಉದ್ಯೋಗ ದೊರಕಿಸಿಕೊಡಲು ದೇಶ, ವಿದೇಶದ ಕಂಪನಿಗಳೊಂದಿಗೆ ಮಾತುಕತೆ ನಡೆಸಲಾದ ಫಲವಾಗಿ ಮುಂದಿನ 60 ದಿನಗಳಲ್ಲಿ 10 ಕ್ಕೂ ಹೆಚ್ಚು ಕಂಪನಿಗಳು ಆಗಮಿಸುವ ನಿರೀಕ್ಷೆ ಮಾಡಲಾಗಿದೆ ಎಂದು ದಾವಣಗೆರೆ ಸಂಸದರಾದ ಡಾ; ಪ್ರಭಾ ಮಲ್ಲಿಕಾರ್ಜುನ್ ತಿಳಿಸಿದರು.

ಅವರು ಬುಧವಾರ ಜಿಲ್ಲಾಡಳಿತ ಭವನದ ಸ್ಮಾರ್ಟ್‌ಸಿಟಿ ಕಚೇರಿಯಲ್ಲಿ ವಿವಿಧ ಐಟಿ, ಬಿಟಿ ಕಂಪನಿಗಳ ಸಿಇಓ, ಇಂಜಿನಿಯರಿಂಗ್ ಕಾಲೇಜುಗಳ ಪ್ರಾಂಶುಪಾಲರೊಂದಿಗೆ ಟೆಕ್‌ರೈಸ್ ಸಭೆ ನಡೆಸಿ ನಂತರ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದರು. ಐಟಿ, ಬಿಟಿ ಕಂಪನಿಗಳಿಗೆ ಬೇಕಾದ ಮೂಲಭೂತ ಸೌಕರ್ಯ ಸೇರಿದಂತೆ ಸ್ಥಳಾವಕಾಶವನ್ನು ಒದಗಿಸಿಕೊಡಲಾಗುತ್ತದೆ. ತಾತ್ಕಾಲಿಕವಾಗಿ ಈಗಿರುವ ನೂತನ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಮೊದಲ, ಎರಡನೇ, ಮೂರನೇ ಮಹಡಿಯಲ್ಲಿ ಕಂಪನಿಗಳಿಗೆ ಬೇಕಾದ ಮೂಲಭೂತ ಸೌಕರ್ಯ ಒದಗಿಸಲಾಗುತ್ತದೆ. ಈಗಾಗಲೇ ಇಲ್ಲಿ ಅತ್ಯಾಧುನಿಕವಾಗಿ ಸೌಲಭ್ಯಗಳಿದ್ದು ಐಟಿ ಕಂಪನಿಗಳಿಗೆ ಅಗತ್ಯವಿರುವ ವ್ಯವಸ್ಥೆಗಳು ಇಲ್ಲಿವೆ. ಹೋಗಿ ಬರಲು ಬಸ್ ಸೌಕರ್ಯ ಸೇರಿದಂತೆ ದಾವಣಗೆರೆಯಲ್ಲಿ ಸ್ಟಾರ್ ಹೋಟೆಲ್‌ಗಳಿಂದ ಮೆಡಿಕಲ್ ಕಾಲೇಜು, ವೈದ್ಯಕೀಯ ಸೌಕರ್ಯ ಸೇರಿದಂತೆ ಕಾನೂನು ಸುವ್ಯವಸ್ಥೆ, ಶಾಂತತೆ, ಸ್ವಚ್ಛತೆ ಇಲ್ಲಿದೆ ಎಂದರು.

ಐಟಿ, ಬಿಟಿ ಕಂಪನಿಗಳನ್ನು ಸ್ಥಾಪನೆ ಮಾಡಲು ಕೇಂದ್ರದ ಎಸ್‌ಟಿಪಿಐ, ಕರ್ನಾಟಕ ಡಿಜಿಟೆಲ್ ಎಕನಾಮಿ ಮಿಷನ್ ಸಹಕಾರದಲ್ಲಿ ಜಿಲ್ಲಾಡಳಿತ ನೆರವಿನಿಂದ ಜೂನ್‌ನಲ್ಲಿ ದಾವಣಗೆರೆ ವಿಷನ್ ಗ್ರೂಪ್ ರಚಿಸಲಾಗಿದೆ. ಬೆಂಗಳೂರಿನ ಪ್ರತಿಷ್ಠಿತ ಕಂಪನಿಗಳು ಸೇರಿದಂತೆ ವಿವಿಧ ರಾಜ್ಯಗಳಿಗೆ ಈ ತಂಡವು ಭೇಟಿ ಮಾಡಿ ಅಧ್ಯಯನ ಮಾಡಿ ಕಂಪನಿಗಳೊಂದಿಗೆ ಮಾತುಕತೆ ನಡೆಸಿ ಕಂಪನಿಗಳ ಸಿಇಓಗಳ ಸಭೆ ಮಾಡುವ ಸ್ಥಾಪಿಸುವ ಹಂತಕ್ಕೆ ತಲುಪಿದ್ದು ಮುಂದಿನ 60 ದಿನಗಳಲ್ಲಿ ಕಂಪನಿಗಳನ್ನು ಸ್ಥಾಪಿಸುವ ಗುರಿ ಇಟ್ಟುಕೊಂಡು ಕೆಲಸ ಮಾಡಲಾಗುತ್ತಿದೆ ಎಂದರು.

ದಾವಣಗೆರೆಯಲ್ಲಿ ಇಂಜಿನಿಯರಿಂಗ್ ವ್ಯಾಸಂಗ ಮಾಡಿದ ಅನೇಕ ವಿದ್ಯಾರ್ಥಿಗಳು ಬಹುರಾಷ್ಟ್ರೀಯ ಕಂಪನಿಗಳಲ್ಲಿ ಸಿಇಓಗಳಾಗಿದ್ದು ಅವರ ಮೂಲಕವೂ ಕಂಪನಿಗಳನ್ನು ಇಲ್ಲಿಗೆ ಆಕರ್ಷಿಸಲು ಪ್ರಯತ್ನಿಸಲಾಗುತ್ತದೆ. ಜಿಲ್ಲೆಯಲ್ಲಿ ವೃತ್ತಿ ಶಿಕ್ಷಣ ಸೇರಿದಂತೆ ಡಿಪ್ಲೊಮಾ, ಮಾನವಿಕ ವಿಜ್ಞಾನಗಳು ಸೇರಿ ಪ್ರತಿ ವರ್ಷ 10 ಸಾವಿರಕ್ಕಿಂತ ಹೆಚ್ಚು ವಿದ್ಯಾರ್ಥಿಗಳು ವಿವಿಧ ಕೋರ್ಸ್‌ಗಳಲ್ಲಿ ಉತ್ತೀರ್ಣರಾಗುತ್ತಿದ್ದಾರೆ. ಸ್ಥಳೀಯವಾಗಿ ವಿವಿಧ ಕಂಪನಿಗಳನ್ನು ಸ್ಥಾಪನೆ ಮಾಡುವುದರಿಂದ ಉದ್ಯೋಗಾವಕಾಶಗಳು ದೊರೆಯಲಿದೆ. ಪ್ರತಿಷ್ಠಿತ ಕಂಪನಿಗಳು ಇಲ್ಲಿ ಬಂದು ಕೆಲಸ ಮಾಡಲು ಬೇಕಾದ ಎಲ್ಲಾ ನೆರವು ನೀಡಲಾಗುತ್ತದೆ. ಜೊತೆಗೆ ಈಗಾಗಲೇ ದಾವಣಗೆರೆ ರಾಜ್ಯ ಮತ್ತು ದೇಶದಲ್ಲಿ ಸ್ವಚ್ಛ ನಗರವಾಗಿ ಹೊರಹೊಮ್ಮಿದೆ ಎಂದರು.

ದಾವಣಗೆರೆಯಲ್ಲಿ ಸ್ಟಾಟಪ್ ಕಂಪನಿಗಳನ್ನು ಸ್ಥಾಪಿಸುವವರಿಗೆ ಮೂಲಭೂತ ಸೌಕರ್ಯದ ಜೊತೆಗೆ ಆರ್ಥಿಕವಾಗಿ ಬ್ಯಾಂಕ್‌ಗಳಿಂದ ಸಾಲ, ಸೌಲಭ್ಯಗಳು ಅಗತ್ಯವಿದ್ದಲ್ಲಿ ಬ್ಯಾಂಕ್‌ಗಳ ಮೂಲಕ ಸಾಲ ಒದಗಿಸಲು ಬ್ಯಾಂಕರ್ಸ್‌ಗಳೊಂದಿಗೂ ಸಭೆ ನಡೆಸಲಾಗಿದೆ ಎಂದರು.

ಕರ್ನಾಟಕ ಡಿಜಿಟಲ್ ಎಕಾಮಿ ಮಿಷನ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸಂಜೀವ್ ಗುಪ್ತಾ ಮಾತನಾಡಿ ಐಟಿ, ಬಿಟಿ ಕಂಪನಿಗಳನ್ನು ಬೆಂಗಳೂರಿನಿಂದ ಹೊರಗಡೆ ಸ್ಥಾಪಿಸಬೇಕೆಂದು ಕಲಬುರಗಿ, ಮೈಸೂರು, ಶಿವಮೊಗ್ಗ, ಹುಬ್ಬಳ್ಳಿ ಜಾಗತಿಕ ಆರ್ಥಿಕ ವಲಯಗಳನ್ನಾಗಿ ಗುರುತಿಸಲಾಗಿದ್ದು ದಾವಣಗೆರೆಯು ಸೇರಲಿದೆ. ಇಲ್ಲಿ ಅಗತ್ಯವಿರುವ ಮೂಲಭೂತ ಸೌಕರ್ಯ ಈಗಾಗಲೇ ನಿರ್ಮಿಸಲಾಗಿದೆ.

## ಕಾಲ್ತುಳಿತ ಪ್ರಕರಣ: ಆರ್‌ಸಿಬಿ ಮಾರ್ಕೆಟಿಂಗ್ ಮುಖ್ಯಸ್ಥ ನಿಖಿಲ್ ಸೋಸಲೆಗೆ ಬಿಗ್ ರಿಲೀಫ್; ಷರತ್ತು ಸಡಿಲಿಸಿದ ಹೈಕೋರ್ಟ್



**ಬೆಂಗಳೂರು:** ಚಿನ್ನಸ್ವಾಮಿ ಕ್ರೀಡಾಂಗಣದ ಹೊರಗೆ ಸಂಭವಿಸಿದ ಕಾಲ್ತುಳಿತ ಪ್ರಕರಣದ ಆರೋಪಿಗಳಲ್ಲಿ ಒಬ್ಬರಾಗಿರುವ ಐಪಿಎಲ್ ತಂಡ ರಾಯಲ್ ಚಾಲೆಂಜರ್ಸ್ ಬೆಂಗಳೂರು (ಆರ್‌ಸಿಬಿ)ನ ಮಾರ್ಕೆಟಿಂಗ್ ಮುಖ್ಯಸ್ಥ ನಿಖಿಲ್ ಸೋಸಲೆ ಅವರ ಜಾಮಿನಿಗೆ ವಿಧಿಸಲಾಗಿದ್ದ ಪ್ರಮುಖ ಷರತ್ತನ್ನು ಕರ್ನಾಟಕ ಹೈಕೋರ್ಟ್ ಬುಧವಾರ ಸಡಿಲಿಸಿದೆ.

ಕಾಲ್ತುಳಿತ ಪ್ರಕರಣದಲ್ಲಿ ಜೂನ್ 6 ರಂದು ಸೋಸಲೆ ಅವರನ್ನು ಬಂಧಿಸಲಾಗಿತ್ತು. ಅದಾದ ಆರು ದಿನಗಳ ನಂತರ ಅವರು ಜಾಮೀನಿನ ಮೇಲೆ ಬಿಡುಗಡೆಯಾಗಿದ್ದರು. ಈ ವೇಳೆ ಸೋಸಲೆ ಅವರಿಗೆ ಬೆಂಗಳೂರು ಬಿಟ್ಟು ಹೋಗದಂತೆ

## ಉತ್ತರ ಕರ್ನಾಟಕ ಪ್ರತ್ಯೇಕ ರಾಜ್ಯವಾಗಬೇಕು: ರಾಷ್ಟ್ರಪತಿ, ಪ್ರಧಾನಿ, ಸಿಎಂಗೆ ಕಾಂಗ್ರೆಸ್ ಶಾಸಕ ರಾಜು ಕಾಗೆ ಪತ್ರ



**ಬೆಳಗಾವಿ:** ಉತ್ತರ ಕರ್ನಾಟಕ ಪ್ರತ್ಯೇಕ ರಾಜ್ಯದ ಕೂಗು ಹಲವು ವರ್ಷಗಳಿಂದ ಕೇಳಿಬರುತ್ತಿದೆ. ಇದೀಗ ಆಡಳಿತ ಪಕ್ಷ ಕಾಂಗ್ರೆಸ್‌ನ ಶಾಸಕ ರಾಜು ಕಾಗೆಯವರೇ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಗೆ ಪತ್ರ ಬರೆದು ಸುದ್ದಿಯಾಗಿದ್ದಾರೆ.

ರಾಜು ಕಾಗೆ ಪತ್ರದ ಬೆನ್ನಲ್ಲೇ ಉತ್ತರ ಕರ್ನಾಟಕ ಹೋರಾಟ ಸಮಿತಿ, ಉತ್ತರ ಕರ್ನಾಟಕ ವಿಕಾಸ ವೇದಿಕೆಯಿಂದ ಮೂರು ಬೇಡಿಕೆಗಳಿಗೆ ಆಗ್ರಹ ವ್ಯಕ್ತವಾಗಿದೆ. ಬೆಳಗಾವಿಯಲ್ಲಿ ನಡೆಯುವ ಚಳಿಗಾಲದ ಅಧಿವೇಶನದಲ್ಲಿ ಇವನ್ನು ಈಡೇರಿಸದಿದ್ದರೆ ಸುವರ್ಣ ವಿಧಾನಸೌಧದ ಮೇಲೆ ಪ್ರತ್ಯೇಕ ರಾಜ್ಯದ ಧ್ವಜಾರೋಹಣ ಎಚ್ಚರಿಕೆ ನೀಡಲಾಗಿದೆ.

## ಬಿಹಾರ: ಎನ್‌ಡಿಎ ಅಧಿಕಾರಕ್ಕೆ ಸಮೀಕ್ಷೆ ಬಹಿರಂಗ



**ನವದೆಹಲಿ:** ಚುನಾವಣೋತ್ತರ ಸಮೀಕ್ಷೆಗಳ ಪ್ರಕಾರ ಎನ್‌ಡಿಎ ಬಿಹಾರ ವಿಧಾನಸಭೆಯಲ್ಲಿ ಗೆಲುವು ಸಾಧಿಸುವ ಸಾಧ್ಯತೆಗಳು ದಟ್ಟವಾಗಿ ಎಂದು ಗೋಚರಿಸುತ್ತಿದೆ. ಅದರಲ್ಲೂ ಐದು ವರ್ಷಗಳ ಹಿಂದಿಗಿಂತಲೂ ಹೆಚ್ಚು ಆರಾಮದಾಯಕ ಬಹುಮತದೊಂದಿಗೆ ಚುನಾವಣೆಯನ್ನು ಗೆಲ್ಲುತ್ತದೆ ಎಂದು ಸರ್ವಾನುಮತದಿಂದ ಸಮೀಕ್ಷೆಗಳು ಹೇಳಿವೆ.

243 ಸದಸ್ಯರ ವಿಧಾನಸಭೆಯಲ್ಲಿ ಮೂರನೇ ಎರಡರಷ್ಟು ಬಹುಮತವನ್ನು ಪಡೆಯಬಹುದು ಎಂದು ಕೆಲವರು ಊಹಿಸಿದ್ದಾರೆ. ಪ್ರಶಾಂತ್ ಕಿಶೋರ್ ಅವರ ಹೊಸ ಪಕ್ಷ ಜನ ಸುರಾಜ್ ಕನಿಷ್ಠ ವಿಧಾನಸಭಾ ಸ್ಥಾನಗಳನ್ನು ಗೆಲ್ಲುವ ವಿಷಯದಲ್ಲಿ ಸೀಮಿತ ಪರಿಣಾಮ ಬೀರುತ್ತದೆ ಎಂದು ಸಮೀಕ್ಷೆಗಳು ಸುಳಿವು ನೀಡಿವೆ.

ಚುನಾವಣೋತ್ತರ ಸಮೀಕ್ಷೆಗಳು ಸರಿಯಾಗಿದ್ದರೆ, ಮುಖ್ಯಮಂತ್ರಿ ನಿತೀಶ್‌ಕುಮಾರ್ ಅವರು ಸುಮಾರು 20 ವರ್ಷ, 9 ತಿಂಗಳ ಅಂತರದಲ್ಲೂ ತಮ್ಮ ಜನಪ್ರಿಯತೆಯನ್ನು ಕಾಯ್ದುಕೊಂಡಿದ್ದಾರೆ ಎಂದು ಮತ್ತೊಮ್ಮೆ ಬಿಂಬಿತವಾಗಲಿದೆ. ಇದು ಯಾವುದೇ ಮಾನದಂಡಗಳಿಂದ ಗಮನಾರ್ಹ ಸಾಧನೆಯಾಗಿದೆ. ಇದು ಮುಂದಿನ ವರ್ಷ ನಿರ್ಣಾಯಕ ಇತರ ವಿಧಾನಸಭಾ ಚುನಾವಣೆಗೆ ಹೋಗುವ ಎನ್ ಡಿಎಗೆ ಗಮನಾರ್ಹ ಉತ್ತೇಜನವನ್ನು ದೊರೆತಂತಾಗುತ್ತದೆ.

ಎನ್ ಡಿಎ 145 ರಿಂದ 160 ಸ್ಥಾನಗಳನ್ನು ಗೆಲ್ಲುವ ನಿರೀಕ್ಷೆಯಲ್ಲಿದ್ದು, ಆರ್ ಜೆಡಿ ನೇತೃತ್ವದ ಮಹಾಘಟಬಂಧನ್ 73–102 ಸ್ಥಾನಗಳಲ್ಲಿ ಹಿಂದುಳಿದಿದೆ ಮತ್ತು ಇತರರು 5 ರಿಂದ 10 ಸ್ಥಾನಗಳ ನಡುವೆ ಗೆಲ್ಲುತ್ತಾರೆ ಎಂದು ದೈನಿಕ್ ಭಾಸ್ಕರ್ ಅಂದಾಜಿಸಿದೆ.

ಮ್ಯಾಟ್ರಿಜ್–ಐಎಎನ್‌ಎಸ್ ಸಮೀಕ್ಷೆಯಲ್ಲಿ ಎನ್ ಡಿಎ 147–167, ಎಂಜಿಬಿ 70–90 ಮತ್ತು ಇತರರು ಎರಡರಿಂದ ಆರು ಸ್ಥಾನಗಳನ್ನು ಗೆಲ್ಲುವ ನಿರೀಕ್ಷೆಯಿದೆ. ಎನ್ ಡಿಎ 135–159, ಎಂಜಿಬಿ 75–101 ಮತ್ತು ಇತರರು ಎರಡ–ರಿಂದ ಎಂಟು ಸ್ಥಾನಗಳನ್ನು ಗೆಲ್ಲುವ ನಿರೀಕ್ಷೆಯೊಂದಿಗೆ ಪೀಪಲ್ಸ್ ಪಲ್ಸ್ ಸ್ವಲ್ಪ ಭಿನ್ನವಾದ ಅಕ್ಷೇಪಗಳನ್ನು ಹೊಂದಿದೆ.

ಬಿಹಾರ ವಿಧಾನಸಭೆಯಲ್ಲಿ ಬಹುಮತ 122 ಆಗಿದ್ದರೆ, 162 ಮೂರನೇ ಎರಡರಷ್ಟು ಅಂಕಗಳನ್ನು ಪ್ರತಿನಿಧಿಸುತ್ತದೆ. ಕಳೆದ ಎರಡು ದಶಕಗಳಲ್ಲಿ ಎರಡು ಬಾರಿ ಗೆದ್ದ ಮೈತ್ರಿಕೂಟವು ಆ ಗುರುತನ್ನು ಸಾಧಿಸಿದೆ.

2010ರಲ್ಲಿ ಎನ್ ಡಿಎ 206 ಸ್ಥಾನಗಳನ್ನು ಗೆದ್ದಿದ್ದರೆ, 2015ರಲ್ಲಿ ಆರ್ ಜೆಡಿ, ಜೆಡಿಯು ಮತ್ತು ಕಾಂಗ್ರೆಸ್ ಸೇರಿದಂತೆ ಮಹಾಘಟಬಂಧನ್ 178 ಸ್ಥಾನಗಳನ್ನು ಗೆದ್ದಿತ್ತು. 2020 ರಲ್ಲಿ ಎನ್ ಡಿಎ 125 ಸ್ಥಾನಗಳನ್ನು ಗೆದ್ದರೆ, ಎಂಜಿಬಿ 110 ಸ್ಥಾನಗಳನ್ನು ಗೆದ್ದಿದೆ.

ಆಕ್ಸಿಸ್ ಮೈ ಇಂಡಿಯಾ ಮತ್ತು ಟುಡೇಸ್ ಚಾಣಕ್ಯ ಎಂಬ ಎರಡು ಪ್ರಮುಖ ಸಮೀಕ್ಷೆಗಳು ಇಂದು ತಮ್ಮ ಅಂದಾಜುಗಳನ್ನು ಬಹಿರಂಗಪಡಿಸಲಿವೆ. ಫಲಿತಾಂಶ ಶುಕ್ರವಾರ (ನ.14) ಬಹಿರಂಗವಾಗಲಿದೆ.

## ಧರ್ಮಸ್ಥಳ ಪ್ರಕರಣ; ಎಸ್‌ಐಟಿ ತನಿಖೆಗೆ ನೀಡಿದ್ದ ಮಧ್ಯಂತರ ತಡೆಯಾಜ್ಞೆ ತೆರವು ಮಾಡಿದ ಹೈಕೋರ್ಟ್




**ಬೆಂಗಳೂರು:** ಧರ್ಮಸ್ಥಳದಲ್ಲಿ ನೂರಾರು ಶವಗಳನ್ನು ಹೂತಿಡಲಾಗಿದೆ ಎನ್ನಲಾದ ಪ್ರಕರಣದ ಬಗ್ಗೆ ಎಸ್‌ಐಟಿ ತನಿಖೆಗೆ ನೀಡಿ–ದ್ದ ಮಧ್ಯಂತರ ತಡೆಯಾಜ್ಞೆಯನ್ನು ಹೈಕೋರ್ಟ್ ತೆರವುಗೊಳಿಸಿದೆ. ಇದರಿಂದ ಈ ಪ್ರಕರಣದಲ್ಲಿ ಎಸ್‌ಐಟಿ ತನಿಖೆ ಮುಂದುವರಿಯಲಿದ್ದು, ಪಿತೂರಿ ನಡೆಸಿದ ಆರೋಪ ಎದುರಿಸುತ್ತಿದ್ದ ವಿಠಲಗೌಡ, ಗಿರೀಶ್ ಮಟ್ಟಣ್ಣವರ್, ಮಹೇಶ್ ತಿಮರೋಡಿ ಮತ್ತು ಟಿ. ಜಯಂತ್ ಅವರು ಎಸ್‌ಐಟಿ ಮುಂದೆ ವಿಚಾರಣೆಗೆ ಹಾಜರಾಗಬೇಕಾಗಿದೆ.

ಧರ್ಮಸ್ಥಳ ಪೊಲೀಸ್ ಠಾಣೆಯಲ್ಲಿ ತಮ್ಮ ವಿರುದ್ಧ ದಾಖಲಿಸಿರುವ ಪ್ರಕರಣ ಸಂಬಂಧ ವಿಚಾರಣೆಗೆ ಹಾಜರಾಗುವಂತೆ ಬೆಳ್ತಂಗಡಿ ಪೊಲೀಸರು ಜಾರಿ ಮಾಡಿದ್ದ ನೋಟಿಸ್ ಪ್ರಶ್ನಿಸಿ, ಗಿರೀಶ್ ಮಟ್ಟಣ್ಣವರ್, ಮಹೇಶ್ ಶೆಟ್ಟಿ ತಿಮರೋಡಿ, ಟಿ. ಜಯಂತ್ ಮತ್ತು ವಿಠಲ್‌ಗೌಡ ಅರ್ಜಿ ಸಲ್ಲಿಸಿದ್ದರು. ಈ ಅರ್ಜಿಯ ವಿಚಾರಣೆ ನಡೆಸಿದ ನ್ಯಾ. ಪಿ. ಎಂ. ನವಾಜ್ ಅವರಿದ್ದ ಪೀಠ ತಡೆಯಾಜ್ಞೆ ತೆರವುಗೊಳಿಸಿ ಆದೇಶಿಸಿದೆ.

ವಿಚಾರಣೆ ವೇಳೆ ಸರ್ಕಾರದ ಪರ ವಕೀಲರು, ಅರ್ಜಿದಾರರಿಗೆ ಈ ಹಿಂದೆ ಹಲವು ಬಾರಿ ನೋಟಿಸ್ ನೀಡಿ, 150 ತಾಸು ವಿಚಾರಣೆ ನಡೆಸುವುದಾಗಿ ತಿಳಿಸಿದ್ದಾರೆ. ಆದರೆ, ಆ ನೋಟಿಸ್ ಮತ್ತು ವಿಚಾರಣೆ ನಡೆಸಿರುವ ಸಂದರ್ಭದಲ್ಲಿ ಅರ್ಜಿದಾರರನ್ನು ಸಾಕ್ಷಿಗಳನ್ನಾಗಿ ಪರಿಗಣಿಸಲಾಗಿತ್ತು. ಇದೀಗ ಅರ್ಜಿದಾರರನ್ನು ಆರೋಪಿಗಳನ್ನಾಗಿ ಪರಿಗಣಿಸಿ ವಿಚಾರಣೆಗೆ ಹಾಜರಾಗುವಂತೆ ನೋಟಿಸ್ ನೀಡಲಾಗಿದೆ ಎಂದು ಪೀಠಕ್ಕೆ ವಿವರಿಸಿದರು. ವಾದ ಆಲಿಸಿದ ಪೀಠ, ತಡೆಯಾಜ್ಞೆ ತೆರವುಗೊಳಿಸಿ ವಿಚಾರಣೆಯನ್ನು ಮುಂದೂಡಿತು.

ಈ ಹಿಂದೆ ಅರ್ಜಿಯ ಸಂಬಂಧ ವಿಚಾರಣೆ ನಡೆದ ಸಂದರ್ಭದಲ್ಲಿ ಅರ್ಜಿದಾರರ ಪರ ವಕೀಲರು, 'ಅರ್ಜಿದಾರರಿಗೆ ಈಗಾಗಲೇ 9 ಬಾರಿ ನೋಟಿಸ್ ಜಾರಿಗೊಳಿಸಿ ವಿಚಾರಣೆ ನಡೆಸಿದ್ದಾರೆ. ಆದರೆ ಎಫ್‌ಐಆರ್‌ನಲ್ಲಿ ಅವರನ್ನು ಆರೋಪಿಗಳೆಂದು ಉಲ್ಲೇಖಿಸಿಲ್ಲ. ಖುದ್ದಾಗಿ ನೋಟಿಸ್ ಜಾರಿ ಮಾಡದೇ ವಾಟ್ಸ್ಆ?ಯಪ್, ಇಮೇಲ್ ಮೂಲಕ ಜಾರಿ ಮಾಡಿದ್ದಾರೆ. ಬಿಎನ್‌ಎಸ್‌ಎಸ್ ಸೆಕ್ಷನ್ 35(3) ಅಡಿ ಸಮನ್ಸ್ ನೀಡಲಾಗಿದೆ. ಎಸ್‌ಐಟಿ ಸಮನ್ಸ್ ನೀಡಿರುವುದು ಕಾನೂನುಬಾಹಿರ. ಅರ್ಜಿದಾರರು ಆರೋಪಿಗಳೂ ಅಲ್ಲ, ಸಾಕ್ಷಿಗಳೂ ಅಲ್ಲ. ಹಾಗಾಗಿ, ನೋಟಿಸ್ ರದ್ದುಗೊಳಿಸಬೇಕು ಎಂದು ಮನವಿ ಮಾಡಿದ್ದರು. ಅಲ್ಲದೇ, ರಾಜಕೀಯ ವೈರತ್ವ, ಧಾರ್ಮಿಕ ವೈರತ್ವ, ಸಂಘಟನಾತ್ಮಕ ವೈರತ್ವದಿಂದ ನೋಟಿಸ್‌ಗಳನ್ನು ನೀಡಲಾಗಿದೆ. ಇದೀಗ 10ನೇ ನೋಟಿಸ್ ನೀಡಿ ಬೆಳಗ್ಗೆಯಿಂದ ಮಧ್ಯರಾತ್ರಿವರೆಗೆ ಕೂರಿಸುತ್ತಾರೆ. ಈಗಾಗಲೇ 150 ಗಂಟೆಗೂ ಅಧಿಕ ಕಾಲ ದೂರುದಾರರನ್ನು ವಿಚಾರಣೆ ನಡೆಸಲಾಗಿದೆ. ಆರಂಭದಲ್ಲಿ 211(ಎ) ಅಡಿ ಎಫ್‌ಐಆರ್ ದಾಖಲಿಸಿ ಬಳಿಕ ಇತರ ಸೆಕ್ಷನ್‌ಗಳನ್ನು ಸೇರ್ಪಡೆ ಮಾಡಿದ್ದಾರೆ. ಅದೂ ಎರಡೂವರೆ ತಿಂಗಳ ನಂತರ ಹೊಸ ಸೆಕ್ಷನ್‌ಗಳನ್ನು ಸೇರ್ಪಡೆ ಮಾಡಲಾಗಿದೆ ಎಂದು ಪೀಠಕ್ಕೆ ತಿಳಿಸಿದ್ದರು.

ಎಸ್‌ಐಟಿ ಪರ ವಕೀಲರು, ಅರ್ಜಿದಾರರ ಪ್ರಚೋದನೆ ಮೇಲೆಯೇ ಚಿನ್ನಯ್ಯ ದೂರು ನೀಡಿದ್ದಾರೆ.

## ವಿದ್ಯಾವಂತ ಮುಸ್ಲಿಮರು ಭಯೋತ್ಪಾದಕರಾಗಿರುವುದು ಅಪಾಯಕಾರಿ: ಪ್ರತಾಪ್



**ಮೈಸೂರು:** ಮುಸ್ಲಿಂ ಯುವಕರು ಬಡತನ, ನಿರುದ್ಯೋಗ ಇತ್ಯಾದಿಗಳಿಂದಾಗಿ ಭಯೋತ್ಪಾದನೆಯ ಹಾದಿ ಹಿಡಿಯುತ್ತಿದ್ದಾ–ರೆ ಎಂದು ಕತೆ ಕಟ್ಟಬೇಡಿ. ದಿಲ್ಲಿ ಕಾರು ಸ್ಫೋಟದ ರೂವಾರಿಗಳೆಲ್ಲರೂ ವಿದ್ಯಾವಂತರಾಗಿದ್ದು, ಡಾಕ್ಟರ್ಸ್ ಆಗಿದ್ದಾರೆ. ವಿದ್ಯಾವಂತ ಮುಸ್ಲಿಮರು ಭಯೋತ್ಪಾದಕರಾಗಿ ಬದಲಾಗುತ್ತಿರೋದು ಬಹಳ ಅಪಾಯಕಾರಿ ಎಂದು ಮಾಜಿ ಸಂಸದ, ಬಿಜೆಪಿ ನಾಯಕ ಪ್ರತಾಪ್ ಸಿಂಹ ಹೇಳಿದ್ದಾರೆ.

ದೆಹಲಿಯ ಕೆಂಪುಕೋಟೆ ಬಳಿ 9 ಮಂದಿಯನ್ನು ಬಲಿ ಪಡೆದ ಐ20 ಕಾರು ಸ್ಫೋಟ ಪ್ರಕರಣಕ್ಕೆ ಸಂಬಂಧಿಸಿ ಮೈಸೂರಿನಲ್ಲಿ ಪ್ರತಾಪ್ ಸಿಂಹ ವಾಗ್ದಾಳಿ ನಡೆಸಿದರು. ಮುಸ್ಲಿಂ ವಿದ್ಯಾವಂತರೇ ಭಯೋತ್ಪಾದಕರಾಗಿ ಬದಲಾಗುತ್ತಿರೋದು ಬಹಳ ಅಪಾಯಕಾರಿ. ಮುಸ್ಲಿಮರ ಸಮಸ್ಯೆ ಬಡತನ ಅಲ್ಲ, ಅವರ ಒಳಗಿನ ಧರ್ಮಾಂಧತೆ, ಅವರ ಮನಃಸ್ಥಿತಿಯೇ ಇಂತಹ ಘಟನೆಗಳಿಗೆ ಕಾರಣ. ಪುರಸೊತ್ತಿಲ್ಲದೆ ಮಕ್ಕಳನ್ನು ಹುಟ್ಟಿಸುವುದಷ್ಟೇ ಅವರ ಕೆಲಸವಾಗಿದೆ. ವಿದ್ಯಾವಂತ ಮುಸ್ಲಿಮರು ಉಗ್ರರಾದರೆ ಅವರನ್ನು ಪತ್ತೆ ಹಚ್ಚುವುದು ಹೇಗೆ ನಿಮ್ಮ ನೆರೆಹೊರೆಯಲ್ಲಿರಬಹುದಾದ ಇಂಥ ವಿದ್ಯಾವಂತ ಧರ್ಮಾಂಧರ ಬಗ್ಗೆಯೂ ಹುಷಾರಾಗಿರಿ ಎಂದು ಅವರು ಎಚ್ಚರಿಸಿದ್ದಾರೆ.

ಹಿಂದೂ ರಾಷ್ಟ್ರ ಆಗಲು ಬಿಡಲ್ಲ ಎಂದಿರುವ ಸಿಎಂ ಸಿದ್ದರಾಮಯ್ಯ, ಈ ದೇಶವನ್ನು ಮುಸ್ಲಿಂ ರಾಷ್ಟ್ರ ಏನಾದರೂ ಮಾಡುತ್ತಾರಾ? ಇಂತಹ ನಾಯಕರು ಇರೋವರೆಗೆ ಈ ಪರಿಸ್ಥಿತಿಯನ್ನು ಎದುರಿಸಬೇಕು ಎಂದು ಪ್ರತಾಪ್‌ಸಿಂಹ ಟೀಕಿಸಿದ್ದಾರೆ.

## ಭಾರತದಲ್ಲಿ ಮತಾಂಧತೆ, ಸಾಮೂಹಿಕ ನರಮೇಧಕ್ಕೆ ಸುದೀರ್ಘ ಇತಿಹಾಸ–ಸಿ.ಟಿ.ರವಿ

**ಬೆಂಗಳೂರು:** ಭಾರತದಲ್ಲಿ ಮತಾಂಧತೆ ಮತ್ತು ಸಾಮೂಹಿಕ ನರಮೇಧಕ್ಕೆ ಬಹಳ ದೀರ್ಘವಾದ ಇತಿಹಾಸ ಇದೆ ಎಂದು ಬಿಜೆಪಿ ರಾಷ್ಟ್ರೀಯ ಮಾಜಿ ಪ್ರಧಾನ ಕಾರ್ಯದರ್ಶಿ ಹಾಗೂ ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ (ಅಖಿ ಖಚಿತು) ತಿಳಿಸಿದ್ದಾರೆ. ಮಾಧ್ಯಮಗಳ ಜತೆ ಬುಧವಾರ ಅವರು ಮಾತನಾಡಿದರು. ಬ್ರಿಟಿಷರ ಆಳ್ವಿಕೆ ಕಾಲದಲ್ಲೇ ಮಾಪ್ಲಾ ದಂಗೆ ನಡೆದಿತ್ತು. ಕೇರಳದ ಮಲಬಾರ್‌ನಲ್ಲಿ ಇದು ಆಗಿತ್ತು ಎಂದು ತಿಳಿಸಿದ ಅವರು, ನರಮೇಧಕ್ಕೆ ತುತ್ತಾದವರು ಹಿಂದೂಗಳು ಎಂದು ಹೇಳಿದರು. ಪಶ್ಚಿಮ ಬಂಗಾಲದಲ್ಲಿ ನೇರ ಕಾರ್ಯಾಚರಣೆ ಹೆಸರಿನಲ್ಲಿ ದೊಡ್ಡ ನರಮೇಧ ನಡೆದಿತ್ತು. ಸ್ವಾತಂತ್ರ್ಯ ನಂತರ ರಜಾಕಾರರ ಚಳವಳಿ ಹೆಸರಿನಲ್ಲಿ ನಡೆದಿದ್ದೂ ನರಮೇಧವೇ ಎಂದು ತಿಳಿಸಿದ ಅವರು, ಇವತ್ತಿನ ಎಐಸಿಸಿ ಅಧ್ಯಕ್ಷರ ಕುಟುಂಬದವರೂ ಸಂತ್ರಸ್ತರಾಗಿತ್ತು. ಅವರು ತಾಯಿ, ಸಹೋದರಿಯನ್ನು ಕಳಕೊಳ್ಳಬೇಕಾಗಿತ್ತು. ಸ್ವಾತಂತ್ರ್ಯ ನಂತರ ದೇಶದ ಉದ್ದಗಲಕ್ಕೆ ಸಾವಿರಾರು ಬಾಂಬ್ ಸ್ಫೋಟ ನಡೆದಿತ್ತು ಎಂದು ನೆನಪಿಸಿದರು.

ಅದರಲ್ಲಿ ಶೇ. 90ರಷ್ಟು ಇಸ್ಲಾಂ ಸಿದ್ಧಾಂತದಿಂದ ಪ್ರಚೋದನೆ ಪಡೆದ ಭಯೋತ್ಪಾದಕರು, ಶೇ.10ರಷ್ಟು ಮಾವೋ ಮತ್ತು ಕಾರ್ಲ್ ಮಾರ್ಕ್ಸ್ ಸಿದ್ಧಾಂತದಿಂದ ಪ್ರಚೋದನೆ ಪಡೆದ ಭಯೋತ್ಪಾದಕರು. ಇದೆಲ್ಲದರ ಉದ್ದೇಶ ಹಿಂಸೆ, ನರಮೇಧ, ಭೀತಿ ಉಂಟು ಮಾಡುವುದು. ಆ ಭಯದ ಮೂಲಕ ಭಾರತವನ್ನು ಮಣಿಸುವ ಷಡ್ಯಂತ್ರದ ಭಾಗವಾಗಿಯೇ ನಡೆದಿದೆ ಎಂದು ತಿಳಿಸಿದರು.

# ರಾಶಿ ಭವಿಷ್ಯ

### ಮೇಷ ರಾಶಿ

ಮಕ್ಕಳ ನಿಮ್ಮ ಸಂಜೆಯನ್ನು ಉಲ್ಲಾಸಮಯವಾಗಿಸುತ್ತಾರೆ. ಮಂಕು ಕವಿದ ಮತ್ತು ಒತ್ತಡದ ದಿನಕ್ಕೆ ಮಂಗಳ ಹಾಡಲು ಒಂದು ಸಂತೋಷಕೂಟವನ್ನು ಯೋಜಿಸಿ. ಮಕ್ಕಳ ಸಾಂಗತ್ಯ ನಿಮ್ಮ ದೇಹವನ್ನು ಪುನಃಶ್ಚೇತನಗೊಳಿಸುತ್ತದೆ. ನೀವು ನಿಮ್ಮ ತಂತ್ರಗಳನ್ನು ಅಳವಡಿಸಿದಲ್ಲಿ ಇಂದು ಸ್ವಲ್ಪ ಹೆಚ್ಚುವರಿ ಹಣ ಸಂಪಾದಿಸುತ್ತೀರಿ. ನಿಮ್ಮ ಅತಿಥಿಗಳ ಜೊತ ಒರಟಾಗಿ ನಡೆದುಕೊಳ್ಳಬೇಡಿ.

### ವೃಷಭ ರಾಶಿ

ನಿಮ್ಮ ನಿರೀಕ್ಷೆಗಳನ್ನು ಪೂರೈಸಲು ವೈಯಕ್ತಿಕ ಸಂಬಂಧಗಳನ್ನು ದುರ್ಬಳಕೆ ಮಾಡುವುದು ನಿಮ್ಮ ಪತ್ನಿಗೆ ಕೋಪ ಬರಿಸುತ್ತದೆ. ನೀವು ವಿವಾಹಿತರಾಗಿದ್ದರೆ ನಿಮ್ಮ ಮಕ್ಕಳ ಬಗ್ಗೆ ವಿಶೇಷ ಕಾಳಜಿ ವಹಿಸಿ ಏಕೆಂದರೆ ನೀವು ಅದನ್ನು ಮಾಡದಿದ್ದರೆ ಅವರ ಆರೋಗ್ಯವು ಹದಗೆಡಬಹುದು ಮತ್ತು ಅವರ ಆರೋಗ್ಯದ ಮೇಲೆ ಬಹಳಷ್ಟು ಹಣವನ್ನು ಖರ್ಚು ಮಾಡಬೇಕಾಗುತ್ತದೆ.

### ಮಿಥುನ ರಾಶಿ

ಮಾತನಾಡುವ ಮುನ್ನ ಯೋಚಿಸಿ. ತಿಳಿಯದೆ ನಿಮ್ಮ ಅಭಿಪ್ರಾಯಗಳು ಬೇರೊಬ್ಬರ ಭಾವನೆಗಳಿಗೆ ಧಕ್ಕೆಯುಂಟು ಮಾಡಬಹುದು. ಇಂದು ವ್ಯಾಪಾರದಲ್ಲಿ ಉತ್ತಮ ಲಾಭವನ್ನು ಗಳಿಸುವ ಸಾಧ್ಯತೆ ಇದೆ. ಇಂದಿನ ದಿನ ನೀವು ನಿಮ್ಮ ವ್ಯಾಪಾರಕ್ಕೆ ಹೊಸ ಎತ್ತರವನ್ನು ನೀಡಬಹುದು. ನಿಮ್ಮ ಮನೆಯ ಪರಿಸರದಲ್ಲಿ ಒಳ್ಳೆಯ ಬದಲಾವಣೆಗಳನ್ನು ಮಾಡುತ್ತೀರಿ. ಮೊಂಬತ್ತಿ ಬೆಳಕಿನಲ್ಲಿ ಪ್ರೀತಿಪಾತ್ರರ ಜೊತೆ ಆಹಾರ ಹಂಚಿಕೊಳ್ಳುವುದು.

### ಕರ್ಕ ರಾಶಿ

ನೀವು ಇದು ಒಳ್ಳೆಯ ಆರೋಗ್ಯ ಹೊಂದಿರುವುದರಿಂದ ಅದು ನಿಮಗೆ ಯಶಸ್ಸು ನೀಡುವ ಸಾಧ್ಯತೆಯಿದೆ. ಆದರೆ ನಿಮ್ಮ ಶಕ್ತಿಯನ್ನು ನಾಶಪಡಿಸುವ ಎಲ್ಲವನ್ನೂ ನೀವಿಂದು ತಪ್ಪಿಸಬೇಕು.
ತನ್ನ ಹಣವನ್ನು ಹೇಗೆ ಸಂಗ್ರಹಿಸುವುದು ಎಂಬ ಈ ಕೌಶಲ್ಯವನ್ನು ಇಂದು ನೀವು ಕಲಿಯಬಹುದು ಮತ್ತು ಈ ಕೌಶಲ್ಯವನ್ನು ಕಲಿತು ನೀವು ನಿಮ್ಮ ಹಣವನ್ನು ಉಳಿಸಬಹುದು. ದೂರದ ಸಂಬಂಧಿಗಳಿಂದ ಅನಿರೀಕ್ಷಿತವಾದ ಒಳ್ಳೆಯ ಸುದ್ದಿ ಇಡೀ ಕುಟುಂಬಕ್ಕೆ ಸಂತೋಷದ ಕ್ಷಣಗಳನ್ನು ತರುವುದು.

### ಸಿಂಹ ರಾಶಿ

ಇಂದು ನೀವು ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸ ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ ಹಣದ ಲಾಭ ನಿಮ್ಮ ನಿರೀಕ್ಷೆಯಂತಿರುವುದಿಲ್ಲ.
ಅಗತ್ಯವಿದ್ದರೆ ಸ್ನೇಹಿತರು ನಿಮ್ಮ ನೆರವಿಗೆ ಬರುತ್ತಾರೆ. ಇಂದು ನೀವು ಕುರುಡುಪ್ರೀತಿಯನ್ನು ಪಡೆಯಲು ಸಾಧ್ಯವಾಗುತ್ತದೆ. ಯಾರಾದರೂ ಇಂದು ಕೆಲಸದಲ್ಲಿ ನಿಮಗೆ ಸಂತೋಷವಾಗುವ ಏನನ್ನಾದರೂ ಮಾಡಬಹುದು. ಇಂದು ನೀವು ಮನೆಯ ಕಿರಿಯ ಸದಸ್ಯರೊಂದಿಗೆ ಉದ್ಯಾನವನ ಅಥವಾ ಶಾಪಿಂಗ್ ಮಾಲ್‌ಗೆ ಹೋಗಬಹುದು.

### ಕನ್ಯಾ ರಾಶಿ

ದುಃಖಿತರಾಗಿ ಮತ್ತು ಖಿನ್ನರಾಗಿರಬೇಡಿ. ನಿಮ್ಮ ಅವಾಸ್ತವಿಕ ಯೋಜನೆ ಹಣದ ಕೊರತೆಗೆ ಕಾರಣವಾಗುತ್ತದೆ. ನಿಮ್ಮ ಕುಟುಂಬದ ಸದಸ್ಯರು ನಿಮ್ಮ ಪ್ರಯತ್ನ ಮತ್ತು ಸಮರ್ಪಣೆಯನ್ನು ಪ್ರಶಂಸಿಸುತ್ತಾರೆ ನಿಮ್ಮ ಪ್ರೇಮಿಯೆಡೆಗೆ ಸೇಡು ಹೊಂದುವುದು ಯಾವುದೇ ಫಲ ತರುವುದಿಲ್ಲ ಅದರ ಬದಲಿಗೆ ನೀವು ಶಾಂತರಾಗಿರಬೇಕು ಮತ್ತು ನಿಮ್ಮ ಪ್ರೇಮಿಗೆ ನಿಮ್ಮ ನಿಜವಾದ ಪ್ರೀತಿಯನ್ನು ವಿವರಿಸಬೇಕು.

### ತುಲಾ ರಾಶಿ

ಮಾತನಾಡುವ ಮುನ್ನ ಯೋಚಿಸಿ. ತಿಳಿಯದೆ ನಿಮ್ಮ ಅಭಿಪ್ರಾಯಗಳು ಬೇರೊಬ್ಬರ ಭಾವನೆಗಳಿಗೆ ಧಕ್ಕೆಯುಂಟು ಮಾಡಬಹುದು. ನಿಮ್ಮ ವೆಚ್ಚಗಳನ್ನು ನಿಯಂತ್ರಿಸಲು ಪ್ರಯತ್ನಿಸಿ ಮತ್ತು ಇಂದು ತುಂಬಾ ಖರ್ಚು ಮಾಡಬೇಡಿ. ಕುಟುಂಬ ಮತ್ತು ಸ್ನೇಹಿತರೊಂದಿಗೆ ಆಹ್ಲಾದಕರ ಸಮಯ ಇಂದು ನಿಮ್ಮ ಪ್ರೀತಿಪಾತ್ರರು ತನ್ನ ಮನಸ್ಥಿತಿಯನ್ನು ನಿಮ್ಮ ಮುಂದೆ ಇಡಲು ಸಾಧ್ಯವಾಗುವುದಿಲ್ಲ ಇದರಿಂದಾಗಿ ನೀವು ಅಸಮಾಧಾನಗೊಳ್ಳಬಹುದು.

### ವೃಶ್ಚಿಕ ರಾಶಿ

ನಿಮ್ಮ ಜೀವನವನ್ನು ಲಘುವಾಗಿ ತೆಗೆದುಕೊಳ್ಳಬೇಡಿ ನೆನಪಿಡಿ, ಬದುಕಿನ ರಕ್ಷಣೆ ನಿಜವಾದ ಆಣೆ. ನಿಮ್ಮ ತಾಯಿಯ ಬದಿಯಿಂದ ಇಂದು ಹಣಕಾಸಿನ ಲಾಭವನ್ನು ಪಡೆಯುವ ಪೂರ್ಣ ಸಾಧ್ಯತೆ ಇದೆ.ನಿಮ್ಮ ಮಾಮ ಅಥವಾ ತಾತ ನಿಮಗೆ ಆರ್ಥಿಕ ಬೆಂಬಲ ಮಾಡಬಹುದು. ಯುವಕರನ್ನು ಹೊಂದಿರುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಒಳ್ಳೆಯ ಸಮಯ. ಮನ್ಮಥನು ನಿಮ್ಮ ಜೀವನದಲ್ಲಿ ಪ್ರೀತಿಯ ಮಳೆ ಸುರಿಸುತ್ತ ನಿಮ್ಮೆಡೆಗೆ ನುಗ್ಗುತ್ತಿದ್ದಾನೆ.

### ಧನು ರಾಶಿ

ಅಭದ್ರತೆ / ದಿಗ್ಭ್ರಮೆಯ ಭಾವನೆ ತಲೆತಿರುಗುವಿಕೆಯನ್ನು ಉಂಟುಮಾಡಬಹುದು. ಹಣದ ಪ್ರಾಮುಖ್ಯತೆ ನಿಮಗೆ ಚೆನ್ನಾಗಿ ಗೊತ್ತಿದೆ, ಆದ್ದರಿಂದ ಇಂದು ನಿಮ್ಮ ಮೂಲಕ ಉಳಿಸಲಾಗಿರುವ ಹಣ ನಿಮ್ಮ ತುಂಬಾ ಕೆಲಸಕ್ಕೆ ಬರಬಹುದು ಮತ್ತು ನೀವು ಯಾವುದೇ ದೊಡ್ಡ ಸಮಸ್ಯೆಯಿಂದ ಹೊರಬರಬಹುದು. ಮಕ್ಕಳ ಅವರ ಸಾಧನೆಗಳಿಂದ ನೀವು ಹೆಮ್ಮೆ ಪಡುವಂತೆ ಮಾಡಬಹುದು.

### ಮಕರ ರಾಶಿ

ವಿಶ್ರಾಂತಿ ತೆಗೆದುಕೊಳ್ಳಿ ಮತ್ತು ಕೆಲಸದ ನಡುವೆ ಸಾಧ್ಯವಾದಷ್ಟೂ ವಿಶ್ರಾಂತಿ ಪಡೆಯಲು ಪ್ರಯತ್ನಿಸಿ.
ನೀವು ನಿಮ್ಮ ಕೋಪವನ್ನು ನಿಯಂತ್ರಿಸಿ ಮತ್ತು ಕಚೇರಿಯಲ್ಲಿ ಎಲ್ಲರೊಂದಿಗೆ ಉತ್ತಮವಾಗಿ ವರ್ತಿಸಿ., ಆಗೇ ನೀವು ಮಾಡದಿದ್ದರೆ ನಿಮ್ಮ ಕೆಲಸ ಹೋಗಬಹುದು. ಸ್ನೇಹಿರೊಂದಿಗಿನ ಸಂಜೆ ಹೆಚ್ಚು ಮನರಂಜನೀಯವಾಗಿರುತ್ತದೆ ಮತ್ತು ಸಂತೋಷದಿಂದ ತುಂಬಿರುತ್ತದೆ. ಇಡೀ ಬ್ರಹ್ಮಾಂಡದ ಭಾವಪರವಶತೆ ಪ್ರೀತಿಯಲ್ಲಿರುವವರ ನಡುವೆ ನಡೆಯುತ್ತದೆ. ಹೌದು,ನೀವು ಅದೃಷ್ಟವಂತರು.

### ಕುಂಭ ರಾಶಿ

ನೀವು ಧೀರ್ಘಕಾಲೀನ ಅನಾರೋಗ್ಯದಿಂದ ಬಳಲಬಹುದು. ನಿಕಟ ಸಂಬಂಧಿಗಳ ಮನೆಗೆ ಹೋಗುವುದರಿಂದ ಇಂದು ನಿಮ್ಮ ಆರ್ಥಿಕ ಪರಿಸ್ಥಿತಿ ಹಾಳಾಗಬಹುದು. ಮಕ್ಕಳು ನಿಮ್ಮ ನಿರೀಕ್ಷೆಗಳನ್ನು ಪೂರೈಸಲು ವಿಫಲವಾಗಿ ನಿಮಗೆ ನಿರಾಶೆಯುಂಟುಮಾಡಬಹುದು. ನಿಮ್ಮ ಕನಸು ನನಸಾಗಿಸಲು ನೀವು ಅವರನ್ನು ಪ್ರೋತ್ಸಾಹಿಸಬೇಕು. ನಿಮ್ಮ ಸಂಬಂಧದ ಆ ಎಲ್ಲಾ ದೂರುಗಳು ಮತ್ತು ದ್ವೇಷಗಳು ಈ ಅದ್ಭುತವಾದ ದಿನದಂದು ಕಣ್ಮರೆಯಾಗುತ್ತವೆ.

### ಮೀನ ರಾಶಿ

ಮೋಜಿಗಾಗಿ ಹೊರಹೋಗುವವರಿಗೆ ಸಂತೋಷ ಮತ್ತು ಆನಂದವನ್ನು ಹಂಚಿಕೊಳ್ಳಿ. ಇಂದು ಷೇರು ಮಾರುಕಟ್ಟೆಯಲ್ಲಿ ಹಣವನ್ನು ಹೂಡಿಕೆ ಮಾಡುವವರು ತಮ್ಮ ಹಣವನ್ನು ಕಳೆದುಕೊಳ್ಳಬಹುದು.
ಸಮಯಕ್ಕೆ ನೀವು ಜಾಗರೂಕರಾಗಿದ್ದರೆ ಅದು ನಿಮಗೆ ಉತ್ತಮವಾಗಿರುತ್ತದೆ. ಕುಟುಂಬದ ಸದಸ್ಯರು ಬೆಂಬಲ ನೀಡಿದರೂ ತುಂಬ ಬೇಡಿಕೆಯಿಡುತ್ತಾರೆ. ನಿಮ್ಮ ಕಣ್ಣೀರನ್ನು ಒಬ್ಬ ವಿಶೇಷ ಸ್ನೇಹಿತ ಒರೆಸಬಹುದು. ಕೆಲವರಿಗೆ ವ್ಯಾಪಾರ ಮತ್ತು ಶಿಕ್ಷಣ ಪ್ರಯೋಜನ ತರುತ್ತದೆ. ಸಂತಸದ ಪ್ರಯಾಣ ತೃಪ್ತಿಕರವಾಗಿರುತ್ತದೆ

## ದಾವಣಗೆರೆಯಿಂದ ಶ್ರೀಶೈಲಂಗೆ ನೂತನ ಬಸ್ ಮಾರ್ಗಕ್ಕೆ ಎಸ್.ಎಸ್.ಮಲ್ಲಿಕಾರ್ಜುನ್ ಚಾಲನೆ



**ದಾವಣಗೆರೆ:** ದಾವಣಗೆರೆ ಕೆ.ಎಸ್.ಆರ್.ಟಿ.ಸಿ. ಯಿಂದ ಹರಿಹರ, ಹೊಸಪೇಟೆ, ಬಳ್ಳಾರಿ, ಕರ್ನೂಲು ಮಾರ್ಗವಾಗಿ ಶ್ರೀಶೈಲಂ ಗೆ ನಾನ್ ಎಸಿ ಪಲ್ಲಕ್ಕಿ ನೂತನ ಬಸ್ ಸೇವೆಗೆ ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ಅವರು ನಗರದ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣದಲ್ಲಿ ಮಂಗಳವಾರ ನೂತನ ನಾನ್ ಎಸಿ ಪಲ್ಲಕ್ಕಿ ಬಸ್ ಸೇವೆಗೆ ಚಾಲನೆ ನೀಡಿದರು.

ಮಾರ್ಗದ ವಿವರ:

ದಾವಣಗೆರೆ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣದಿಂದ ಸಂಜೆ 5.15 ಕ್ಕೆ ಹೊರಟು ಹರಿಹರ, ಹರಪನಹಳ್ಳಿ, ಹೊಸಪೇಟೆ, ಬಳ್ಳಾರಿ ಮಾರ್ಗದ ಮೂಲಕ ಬೆಳಗ್ಗೆ 7ಗಂಟೆಗೆ ಶ್ರೀಶೈಲಂ ತಲುಪಲಿದೆ. ಈ ಮಾರ್ಗವೂ 567 ಕಿ.ಮೀ ಪ್ರಯಾಣ ದೂರವಿದ್ದು, ರೂ.1216 ಪ್ರಯಾಣ ದರ ನಿಗದಿಪಡಿಸಲಾಗಿದೆ. ಪುನಃ ಶ್ರೀಶೈಲಂನಿಂದ ಸಂಜೆ 7.15 ಕ್ಕೆ ಹೊರಟು ಅದೇ ಮಾರ್ಗವಾಗಿ ಬೆಳಗ್ಗೆ 7ಕ್ಕೆ ದಾವಣಗೆರೆ ಬಸ್ ನಿಲ್ದಾಣ ತಲುಪಲಿದೆ ಎಂದು ಸಚಿವರು ಮಾಹಿತಿ ನೀಡಿದರು.

ಈ ವೇಳೆ ಜಿಲ್ಲಾಧಿಕಾರಿ ಜಿ. ಎಂ. ಗಂಗಾಧರಸ್ವಾಮಿ, ಜಿಲ್ಲಾ ಪಂಚಾಯತ್ ಸಿಇಓ ಗಿತ್ತೆ ಮಾಧವ ವಿಠಲ ರಾವ್, ವಿಭಾಗೀಯ ನಿಯಂತ್ರಧಿಕಾರಿ ಬಿ.ಎಸ್.ಶಿವಕುಮಾರಯ್ಯ, ಮಾರ್ಗ ನಿಯಂತ್ರಣಾಧಿಕಾರಿ ಫಕ್ರುದ್ದೀನ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# 44ನೇ ರಾಜ್ಯ ಮಟ್ಟದ ನೇತ್ರ ವೈದ್ಯರ ಸಮ್ಮೇಳನ



**ದಾವಣಗೆರೆ:** ನಗರದ ಜಜಮು ವೈದ್ಯಕೀಯ ಮಹಾವಿದ್ಯಾಲಯ, ಎಸ್.ಎಸ್. ವೈದ್ಯಕೀಯ ಮಹಾವಿದ್ಯಾಲಯ ಮತ್ತು ದಾವಣಗೆರೆ ನೇತ್ರತಜ್ಞರ ಸಂಘದ ಸಂಯುಕ್ತಾಶ್ರಯದಲ್ಲಿ ನ.14 ದಿಂದ 16ರ ವರೆಗೆ ಜಜಮು ವೈದ್ಯಕೀಯ ಕಾಲೇಜಿನಲ್ಲಿ 44ನೇ ರಾಜ್ಯಮಟ್ಟದ ನೇತ್ರ ವೈದ್ಯರ ಸಮ್ಮೇಳನ ಹಮ್ಮಿಕೊಳ್ಳಲಾಗಿದೆ ಎಂದು ಜಜಮು ವೈದ್ಯಕೀಯ ಕಾಲೇಜಿನ ಕಣ್ಣಿನ ವಿಭಾಗದ ಮುಖ್ಯಸ್ಥ ಡಾ.ರವೀಂದ್ರ ಬಣಕಾರ್ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಮಧ್ಯಾಹ್ನ 12ಗಂಟೆಗೆ ಬಾಪೂಜಿ ವಿದ್ಯಾಸಂಸ್ಥೆಯ ಗೌರವ ಕಾರ್ಯದರ್ಶಿಗಳು, ಶಾಸಕರು ಆದ ಶಾಮನೂರು ಶಿವಶಂಕರಪ್ಪ ಸಮ್ಮೇಳನ ಉದ್ಘಾಟನೆ ಮಾಡಿಲಿದ್ದು, ಮುಖ್ಯ ಅತಿಥಿಗಳಾಗಿ ಜಿಲ್ಲಾ ಉಸ್ತುವಾರಿ ಸಚಿವ ಎಸ್. ಎಸ್.ಮಲ್ಲಿಕಾರ್ಜುನ್ ಮತ್ತು ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಹಾಗೂ ಕೂಡ್ಲಗಿ ಶಾಸಕ ಡಾ.ಎನ್.ಟಿ.ಶ್ರೀನಿವಾಸ್ ಆಗಮಿಸಲಿದ್ದಾರೆ ಎಂದು ತಿಳಿಸಿದರು.

ಈ ಸಮ್ಮೇಳನದಲ್ಲಿ ಸುಮಾರು ಸಾವಿರಕ್ಕೂ ಅಧಿಕ ಪ್ರತಿನಿಧಿಗಳು ಈಗಾಗಲೇ ನೊಂದಾಯಿಸಿದ್ದು ಸುತ್ತಮುತ್ತಲಿನ ಐದು ರಾಜ್ಯಗಳಿಂದ ವೈದ್ಯ ಪ್ರತಿನಿಧಿಗಳು ಭಾಗವಹಿಸುತ್ತಿದ್ದಾರೆ. ಖ್ಯಾತ ತಜ್ಞ ವೈದ್ಯರುಗಳು ಎಮ್ಸ್ ದೆಹಲಿ, ಕಲ್ಕತ್ತಾ, ಚೆನ್ನೈ, ಹೈದರಾಬಾದ್ ನಗರಗಳಿಂದ ಬರುತ್ತಿದ್ದು ಉಪನ್ಯಾಸ ಮತ್ತು ಪ್ರಬಂಧವನ್ನು ಮಂಡಿಸಲಿದ್ದಾರೆ ಹಾಗೂ ತಮ್ಮ ಅನುಭವಗಳನ್ನು ಹಂಚಿಕೊಳ್ಳಲಿದ್ದಾರೆ ಎಂದರು.

ಈ ಮೂರು ದಿನದ ಸಮ್ಮೇಳನದಲ್ಲಿ ರೆಟಿನಾ, ಕಾರ್ನಿಯಾ, ಗ್ಲಾಕೋಮಾ, ಮಕ್ಕಳ ಕಣ್ಣಿನ ಖಾಯಿಲೆಗೆ ಸಂಬಂಧಪಟ್ಟಂತೆ 50ಕ್ಕೂ ಹೆಚ್ಚು ಅಧಿವೇಶನಗಳನ್ನು ಆಯೋಜಿಸಲಾಗಿದ್ದು, ಪ್ರತಿಷ್ಠಿತ ಹಿರಿಯ ತಜ್ಞ ವೈದ್ಯರು, ಪ್ರಾಧ್ಯಾಪಕರು, ಹಾಗೂ ಸಂಶೋಧಕರು ಉಪನ್ಯಾಸ ನೀಡಲಿದ್ದಾರೆ. ಈ ಸಮ್ಮೇಳನವು ಕರ್ನಾಟಕ ವೈದ್ಯರ ಚಟುವಟಿಕೆಗೆ ಮಾತ್ರ ಸೀಮಿತವಾಗಿಲ್ಲದೆ

ನೇತ್ರದಾನ, ದೃಷ್ಟಿರಕ್ಷಣೆ, ದೃಷ್ಟಿಹೀನರ ಪುನರಶ್ಚತನ ಕುರಿತು ಜನಜಾಗೃತಿ ಮೂಡಿಸುವ ಸಾಮಾಜಿಕ ಕಾರ್ಯಕ್ರಮವಾಗಲಿದೆ. ಕೊನೆಯಲ್ಲಿ ನಗರದ ಹಿರಿಯ ವೈದ್ಯರುಗಳಾದ ಡಾ॥ ಮಾಧವ್ ಹೊನ್ನತ್ತಿ, ಡಾ.ಸಿ.ಎಸ್. ಹಿರೇಮಠ್ ಹಾಗೂ ಡಾ॥ ಸುರೇಂದ್ರ, ಎಸ್. ಶೆಟ್ಟಿ, ಇವರುಗಳ ಸೇವೆಯನ್ನು ಗುರುತಿಸಿ ಈ ಸಮ್ಮೇಳನದಲ್ಲಿ ಸನ್ಮಾನ ಮಾಡಲಾಗುತ್ತದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಕಣ್ಣಿನ ತಜ್ಞರಾದ ಡಾ.ಹೆಚ್. ಎಂ.ರವೀಂದ್ರನಾಥ್, ಡಾ.ಎ.ವಿ.ಸೂರ್ಯಪ್ರಕಾಶ್, ಡಾ.ಸುನೀಲ್ ಜಿ., ಡಾ.ಉಮೇಶ್ ಜಿ.ಎಸ್., ಡಾ.ಅಜೇಯ್ ಹತ್ತಿ, ಡಾ.ಬಿ.ಹೆಚ್.ಮಂಜುನಾಥ್, ಡಾ.ಎ.ಆರ್. ಸುರೇಶ್, ಡಾ.ಸುರೇಂದ್ರ ಎಸ್.ಶೆಟ್ಟಿ ಇದ್ದರು.

# ಪೌರಕಾರ್ಮಿಕರ ವಸತಿ ನಿರ್ಮಾಣ 14 ಕೋಟಿ ರೂ ಅನುದಾನ ದುರುಪಯೋಗ

**ಹಾಸನ** : ಜಿಲ್ಲೆಯ ಸಕಲೇಶಪುರ ಪಟ್ಟಣದಲ್ಲಿ ಕಳೆದ 8 ವರ್ಷಗಳ ಹಿಂದೆ ಪೌರಕಾರ್ಮಿಕರಿಗಾಗಿ ಸುಮಾರು 14 ಕೋಟಿ ರೂ ಅನುದಾನದಲ್ಲಿ ಆರಂಭವಾದ ನಿವೇಶನ ಕಟ್ಟಡದ ಕಾಮಗಾರಿ ನೆನೆಗುದಿಗೆ ಬಿದ್ದಿದ್ದು, ಇದರಲ್ಲಿ ಭಾರಿ ಅವ್ಯವಹಾರ ನಡೆದಿದೆ ಎಂದು ಜಿಲ್ಲಾ ಕಾಂಗ್ರೆಸ್ ವಕ್ತಾರರು ಹಾಗೂ ಹಾಗೂ ಮಾಜಿ ಜಿ.ಪಂ ಸ್ಥಾಯಿ ಸಮಿತಿ ಅಧ್ಯಕ್ಷರಾದ ಡಿ.ಸಿ ಸಣ್ಣಸ್ವಾಮಿ ಅವರು ಗಂಭೀರ ಆರೋಪ ಮಾಡಿದ್ದಾರೆ.



ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಪಟ್ಟಣದ ಕುಶಾಲನಗರ ಬಡಾವಣೆಯ ಕಾಲೋನಿಯಲ್ಲಿ ಬದುಕುತ್ತಿದ್ದ ಸುಮಾರು 45 ಕುಟುಂಬಗಳ (200 ಕ್ಕೂ ಹೆಚ್ಚು ಜನರು ವಾಸವಿದ್ದ) ಮನೆಗಳು ಶಿಥಿಲವಾಗಿದ್ದವು. ವಸತಿ ಸಮಸ್ಯೆಯನ್ನು ಬಗೆಹರಿಸಿಕೊಡಿ ಎಂದ ನಂತರ ಕೊಳಚೆ ನಿರ್ಮೂಲನ ಮಂಡಳಿಯಿಂದ ವಸತಿ ಯೋಜನೆ ಘೋಷಿಸಲಾಯಿತು. 2018–2019 ನೇ ಸಾಲಿನಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ 14 ಕೋಟಿ ಅನುದಾನದಲ್ಲಿ ಪೌರಕಾರ್ಮಿಕರಿಗಾಗಿ ಪ್ರಾರಂಭವಾದ ನಿವೇಶನ ಕಟ್ಟಡದ ಕಾಮಗಾರಿ ಇನ್ನೂ ಸಹ ನೆನೆಗುದಿಗೆ ಬಿದ್ದಿದ್ದು, ಪೌರಕಾರ್ಮಿಕರು ಇನ್ನಿಲ್ಲದ ಸಂಕಷ್ಟವನ್ನು ಎದುರಿಸುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ನಿವೇಶನಗಳ ಕಾಮಗಾರಿ ವಿಳಂಬಕ್ಕೆ ಕಾರಣಗಳು ಹಲವು : 21 ಪೌರಕಾರ್ಮಿಕರಿಗೆ ಫಲಾನುಭವಿಗಳಿಗೆ ಮನೆ ನಿರ್ಮಾಣ ಮಾಡಬೇಕು ಎಂದು ರಾಜಕೀಯ ಒತ್ತಡದಿಂದ ಆರ್ಥಿಕವಾಗಿ ಸದೃಢವಾಗಿ ಇದ್ದಂತಹ ಫಲಾನುಭವಿಗಳಿಗೆ ಮನೆ ನಿರ್ಮಾಣ ತೀರ್ಮಾನಿಸಲಾಯಿತು. ಇದಕ್ಕೆ ಸಾರ್ವಜನಿಕರು ವಿರೋಧ ವ್ಯಕ್ತಪಡಿಸಿದ ನಂತರ ಉಳ್ಳವರ ಪಾಲಾಗಿದ್ದ ನಿವೇಶನ ಕಾಮಾಗಾರಿ ಸ್ಥಗಿತಗೊಂಡವು. ಇದಕ್ಕೆ ಈ ಹಿಂದೆ ಇದ್ದಂತ 2018–19 ಸಾಲಿನಲ್ಲಿ ಇದ್ದಂತ ಜನಪ್ರತಿನಿಧಿ ಕೂಡ ಕಾರಣಕರ್ತರು. 14 ಕೋಟಿ ಅನುದಾನದಲ್ಲಿ ಗುತ್ತಿಗೆದಾರನ ಹಣದ ದುರಾಸೆ ಹಾಗೂ ಅಧಿಕಾರಿಗಳ ನಿರ್ಲಕ್ಷ್ಯ ಮತ್ತು ಪುರಸಭೆಯ ಸದಸ್ಯರು ಹಾಗೂ ಅಧಿಕಾರಿಗಳೂ ಈ ವಿಷಯದ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳದಿರುವುದು ಇದಕ್ಕೆ ಪ್ರಮುಖ ಕಾರಣ ಎಂದು ಆರೋಪಿಸಿದ್ದಾರೆ.

ಭ್ರಷ್ಟರ ವಿರುದ್ಧ ಕ್ರಮಕ್ಕೆ ಒತ್ತಾಯ : ಸರಕಾರದ ವಸತಿಯೋಜನೆಯಿಂದ ವಂಚಿತರಾಗಿರುವ ಪೌರಕಾರ್ಮಿಕರಿಗೆ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಲೋಪಗಳನ್ನು ಸರಿ ಪಡಿಸಿ ಕ್ರಮ ಕೈಗೊಳ್ಳಬೇಕಿದೆ. ಪೌರಕಾರ್ಮಿಕರ ಕನಿಷ್ಠ ನಿವೇಶವನ್ನು ನೀಡದೆ ಸತಾಯಿಸುತ್ತಿರುವ ಅಧಿಕಾರಿಗಳ ವಿರುದ್ಧ ಸಂಬಂಧ ಪಟ್ಟ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕಿ. ಮುಂದಿನ ದಿನಗಳಲ್ಲಿ ಈ ಕುರಿತು ಜಿಲ್ಲಾ ಉಸ್ತುವಾರಿ ಗಮನಕ್ಕೆ ತಪ್ಪಿಸ್ತರ ವಿರುದ್ಧ ಕೂಡ ಕ್ರಮಕ್ಕೆ ಒತ್ತಾಯಿಸಲಾಗುವುದು ಹಾಗೂ

ಲೋಕಾಯುಕ್ತಕ್ಕೆ ಸಹ ದೂರು ನೀಡಲಾಗುವುದು

ಎಂದು ತಿಳಿಸಿದ್ದಾರೆ.

# ಬಿಐಇಟಿಯಲ್ಲಿ ಪಿಯುಸಿ ವಿದ್ಯಾರ್ಥಿಗಳಿಗೆ ಕಾರ್ಯಾಗಾರ




**ದಾವಣಗೆರೆ:** ಬಾಪೂಜಿ ಇಂಜಿನಿಯರಿಂಗ್ ಕಾಲೇಜು ಮತ್ತು ಬಾಪೂಜಿ ಇನ್ಸಿಟ್ಯೂಟ್ ಆಫ್ ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ಇಂಜಿನಿಯರ್ಸ್ ಹಾಗೂ ವಿದ್ಯಾರ್ಥಿ ಶಾಖೆಯ ಇನ್ಸಿಟ್ಯೂಟ್ ಆಫ್ ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ಕಂಪ್ಯೂಟರ್ ಸೊಸೈಟಿ ಬೆಂಗಳೂರು ಇವರ ಸಹಯೋಗದೊಂದಿಗೆ 'ನಾಳೆಯ ನಾವೀನ್ಯಕಾರರ ರಚನೆ' ಎಂಬ ಶೀರ್ಷಿಕೆಯ ಒಂದು ದಿನದ ಕಾರ್ಯಾಗಾರವನ್ನು ಪಿಯುಸಿ ವಿದ್ಯಾರ್ಥಿಗಳಿಗಾಗಿ ನಗರದ ಬಿಐಇಟಿ ಕಾಲೇಜಿನಲ್ಲಿ ಆಯೋಜಿಸಲಾಗಿತ್ತು.

ಮಂಗಳೂರು ಸಹ್ಯಾದ್ರಿ ಇಂಜಿನಿಯರಿಂಗ್ ಮತ್ತು ಮ್ಯಾನೇಜ್‌ಮೆಂಟ್ ಕಾಲೇಜಿನ ಸಂಶೋಧನ ವಿಭಾಗದ ನಿರ್ದೇಶಕ ಡಾ. ಎಸ್. ಮಂಜಪ್ಪ ಕಾರ್ಯಕ್ರಮವನ್ನು ಉದ್ಘಾಟಿಸಿದರು, ಕಾಲೇಜಿನ ನಿರ್ದೇಶಕ ಪ್ರೊ. ವೈ. ವೃಷಭೇಂದಪ್ಪ, ಪ್ರಾಂಶುಪಾಲರಾದ ಡಾ. ಹೆಚ್. ಬಿ. ಅರವಿಂದ್, ಕಾಲೇಜಿನ ಜೈವಿಕ ತಂತ್ರಜ್ಞಾನ ವಿಭಾಗದ ಮುಖ್ಯಸ್ಥರಾದ ಡಾ.ರಂಗಸ್ವಾಮಿ ಕಾರ್ಯಾಗಾರದ ಸಂಯೋಜಕರಾದ ಡಾ. ಹೆಚ್.ಪಿ ವಿನೂತ, ಉಪಸ್ಥಿತರಿದ್ದರು. ಪ್ರೊ. ಪುನೀತ್ ಸ್ವಾಗತಿಸಿ, ವಂದಿಸಿದರು.

# ಕರ್ನಾಟಕದ ಇತಿಹಾಸದಲ್ಲಿ ಒನಕೆ ಓಬವ್ವನವರ ಹೆಸರು ಚಿರಸ್ಮರಣೀಯ

**ಚನ್ನಗಿರಿ** : ಕರ್ನಾಟಕದ ಇತಿಹಾಸದಲ್ಲಿ ಶೌರ್ಯ ಐರ್ಯ ಮತ್ತು ದೇಶಭಕ್ತಿಯ ಸಂಕೇತವಾಗಿ ನಿಂತ ಮಹಿಳೆಯರ ಸಾಲಿನಲ್ಲಿ ಒನಕೆ ಓಬವ್ವನವರ ಹೆಸರು ಚಿರಸ್ಮರಣೀಯವಾಗಿದೆ ಎಂದು ಛಲವಾದಿ ಸಮಾಜದ ಜಿಲ್ಲಾ ಉಪಾಧ್ಯಕ್ಷ ಸಿ.ನಾಗರಾಜ್ ಹೇಳಿದರು.



ಮಂಗಳವಾರ ತಾಲೂಕು ಅಡಳಿತದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಒನಕೆ ಒಬವ್ವ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ನವೆಂಬರ್ 11 ರಂದು ಅವರ ಸಾಹಸವನ್ನು ಸ್ಮರಿಸುವಂತಹ ದಿನವಾಗಿದೆ. 17 ನೇ ಸತಮಾನದ ವೇಳೆಗೆ ಮದಕರಿ ನಾಯಕರ ಸೇನೆಯ ದಾಳಿಯಿಂದ ಚಿತ್ರದುರ್ಗದ ಕೋಟೆಯು ಅಪಾಯದ ಸ್ಥಿತಿಯಲ್ಲಿ ಇದ್ದು ಕೋಟೆಯ ರಕ್ಷಕರು ಜಾಗೃತಿಯಲ್ಲಿ ಇದ್ದರೂ ಗೂಡ ಮಾರ್ಗದ ಕಿಂಡಿಯ ಮೂಲಕ ಕೋಟೆಯನ್ನು ಪ್ರವೇಶಿಸಲು ಮುಂದಾಗಿದ್ದು ಆ ವೇಳೆ ತನ್ನ ಗಂಡನಿಗೆ ಊಟವನ್ನು ಬಡಿಸಿದ ಒನಕೆ ಓಬವ್ವನವರು ತನ್ನ ಓನಕೆಯಿಂದ ಶತ್ರುಗಳ ರುಂಡವನ್ನು ಚಂಡಾಡಿಸಿದ್ದು ಒಬ್ಬ ಮಹಿಳೆಯ ದೇಶಭಕ್ತಿ ಮತ್ತು ದೇಶ ರಕ್ಷಣೆ ಮಾಡಬಹುದು ಎಂದು ತೊರಿಸಿಕೊಟ್ಟಿದ್ದಾರೆ ಎಂದರು. ಈ ಸಂದರ್ಭದಲ್ಲಿ ತಹಶೀಲ್ದಾರ್ ಎನ್.ಜೆ.ನಾಗರಾಜ್, ಚನ್ನಗಿರಿ ತಾಲೂಕು ಅಧ್ಯಕ್ಷ ಧರಣೇಂದ್ರ,ಮಹಿಳಾ ಘಟಕದ ಅಧ್ಯಕ್ಷೆ ಶಶಿಕಲಾ ನಾಗರಾಜ್, ಬಿ.ಸಿ.ಎಂ.ಇಲಾಖೆಯ ಸಹಾಯಕ ನಿರ್ದೇಶಕ ರವೀಂದ್ರಕುಮಾರ್ ಅಥರ್ಗ, ಅರೋಗ್ಯ ನಿರೀಕ್ಷಕ ಲೋಕೇಶ್ ಇತರರು ಹಾಜರಿದ್ದರು.

## ಜಿಲ್ಲಾ ಮಟ್ಟದ ಮಕ್ಕಳ ದಿನಾಚರಣೆ ಅಂಗವಾಗಿ ಜಿಲ್ಲಾ ಮಟ್ಟದ ಕಲಾಶ್ರೀ ಆಯ್ಕೆಗೆ ಸ್ಪರ್ಧೆ

**ದಾವಣಗೆರೆ :** ರಾಜ್ಯ ಭಾಲಭವನ ಸೊಸೈಟಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಬಾಲಭವನ ಸಮಿತಿ, ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು ಇವರುಗಳ ಸಂಯುಕ್ತಾಶ್ರಯದಲ್ಲಿ ನವಂಬರ್ 12 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜೆ.ಹೆಚ್ ಪಟೇಲ್ ಬಡಾವಣೆಯ ಜಿಲ್ಲಾ ಬಾಲಭವನದಲ್ಲಿ ಜಿಲ್ಲಾ ಮಟ್ಟದ ಮಕ್ಕಳ ದಿನಾಚರಣೆಯ ಅಂಗವಾಗಿ ಜಿಲ್ಲಾ ಮಟ್ಟದ ಕಲಾಶ್ರೀ ಶಿಬಿರ ಆಯ್ಕೆಯ ಸ್ಪರ್ಧಾ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

## ಜಿಲ್ಲಾ ಯೋಜನಾ ಸಮಿತಿ ಚುನಾವಣೆ ವೇಳಾಪಟ್ಟಿ

**ದಾವಣಗೆರೆ:** ಕರ್ನಾಟಕ ಪಂಚಾಯತ್ ರಾಜ್ (ಜಿಲ್ಲಾ ಯೋಜನಾ ಸಮಿತಿ ಸದಸ್ಯರುಗಳ ಚುನಾವಣೆ) ನಿಯಮಗಳ ಮೇರೆಗೆ ಪುರಸಭಾ, ಪಟ್ಟಣ ಪಂಚಾಯಿತಿ ಮತ ಕ್ಷೇತ್ರದಿಂದ ಜಿಲ್ಲೆಯ ಜಿಲ್ಲಾ ಯೋಜನಾ ಸಮಿತಿಗೆ ಸದಸ್ಯರ ಸ್ಥಾನಗಳಿಗೆ ಚುನಾವಣೆ ನಡೆಸಲು ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮತ್ತು ಜಿಲ್ಲಾ ಯೋಜನಾ ಸಮಿತಿಯ ಪದನಿಮಿತ್ತ ಚುನಾವಣಾಧಿಕಾರಿ ಗಿತ್ತೆ ಮಾಧವ್ ವಿಠ್ಠಲರಾವ್ ವೇಳಾಪಟ್ಟಿಯನ್ನು ಹೊರಡಿಸಿರುತ್ತಾರೆ.

ನವಂಬರ್ 10 ರಿಂದ 17 ರವರೆಗೆ ಜಿಲ್ಲಾ ಪಂಚಾಯತ್ ಯೋಜನಾ ವಿಭಾಗದಲ್ಲಿ ಬೆಳಿಗ್ಗೆ 11 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ನಾಮಪತ್ರ ಸಲ್ಲಿಸ ಸಬೇಕು. ನ.17 ರಂದು ನಾಮಪತ್ರ ಪರಿಶೀಲಿಸುವ ದಿನ. ನ.19 ಉಮೇದಾರಿಕೆಯನ್ನು ಹಿಂತೆಗೆದುಕೊಳ್ಳುವ ದಿನ. ನ.29 ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ಜಿಲ್ಲಾ ಪಂಚಾಯತ್‌ಯಲ್ಲಿ ಮತದಾನ ಅವಶ್ಯವಿದ್ದರೆ ಮತದಾನ ನಡೆಸಿ ಅದೇ ದಿನ ಸಂಜೆ 5 ಗಂಟೆಗೆ ಮತ ಎಣಿಕೆ ಮಾಡಲಾಗುತ್ತದೆ. ಚುನಾಯಿಸಬೇಕಾದ ಸ್ಥಾನ 2, ಪುರಸಭೆ ಸದಸ್ಯರ ಒಟ್ಟು ಸಂಖ್ಯೆ 23 ಇರುತ್ತದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರಚಲಿತ್ ಎನ್.ಸಿ ಅವರಿಗೆ ಪಿಎಚ್.ಡಿ ಪ್ರದಾನ



**ಬಳ್ಳಾರಿ:** ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಭೌತಶಾಸ್ತ್ರ ಅಧ್ಯಯನ ವಿಭಾಗದ ಪಿಎಚ್.ಡಿ ವಿದ್ಯಾರ್ಥಿ ಪ್ರಚಲಿತ್ ಎನ್.ಸಿ ಅವರಿಗೆ ಪಿಎಚ್‌ಡಿ ಪದವಿ ಲಭಿಸಿದೆ.

ವಿಶ್ವವಿದ್ಯಾಲಯದ ಭೌತಶಾಸ್ತ್ರ ಅಧ್ಯಯನ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ.ಖಿಡ್ಡೆ ಉದಯಕುಮಾರ್ ಅವರ ಮಾರ್ಗದರ್ಶನದಲ್ಲಿ 'ಸ್ಟಡಿ ಆಫ್ ಫೋಟೊಫಿಸಿಕಲ್ ಸ್ಟ್ರಕ್ಚರಲ್ ಪ್ರಾಪರ್ಟಿಸ್ ಆಫ್ ಸಮ್ ಆರ್ಗ್ಯಾನಿಕ್ ಆಂಡ್ ಕಾಂಪೌಂಡ್ಸ್' ಎಂಬ ಪ್ರೌಢ ಪ್ರಬಂಧ ಮಂಡಿಸಿದ್ದಕ್ಕಾಗಿ ವಿಶ್ವವಿದ್ಯಾಲಯವು ಪಿಎಚ್.ಡಿ ಪದವಿ ಪ್ರದಾನ ಮಾಡಿದೆ ಎಂದು ವಿವಿ ಪ್ರಕಟಣೆ ತಿಳಿಸಿದೆ.

## ಕುರೇಕುಪ್ಪ ಪುರಸಭೆ: ಲ್ಯಾಪ್‌ಟಾಪ್ ಪಡೆಯಲು ಅರ್ಜಿ ಆಹ್ವಾನ

**ಬಳ್ಳಾರಿ:** ಕುರೇಕುಪ್ಪ ಪುರಸಭೆ ಕಾರ್ಯಾಲಯದಿಂದ 2024–25 ನೇ ಸಾಲಿನ ಎಸ್.ಎಫ್.ಸಿ ಅನುದಾನದ ಖರ್ಚಾಗದೇ ಉಳಿದ ಮುಕ್ತ ನಿಧಿಯ ಶೇ.24.10 ಎಸ್‌ಸಿಎಸ್‌ಪಿ ಯೋಜನೆಯಡಿ ಬಿಇ ಮತ್ತು ಎಂಬಿಬಿಎಸ್(ಮೆಡಿಕಲ್) ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ವಿತರಣೆ ಮಾಡಲು ಉದ್ದೇಶಿಸಲಾಗಿದ್ದು, ಅರ್ಹ ಪರಿಶಿಷ್ಟ ಜಾತಿ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ನಿಗಧಿತ ನಮೂನೆ ಅರ್ಜಿ, ಮತದಾರರ ಗುರುತಿನ ಚೀಟಿ, ಆಧಾರ್ ಕಾರ್ಡ್, ಪಡಿತರ ಚೀಟಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಇತ್ತೀಚಿನ ಭಾವ ಚಿತ್ರ, ಪ್ರಸ್ತಕ ಸಾಲಿನ ಅಂಕ ಪಟ್ಟಿ, ವಿದ್ಯಾಭ್ಯಾಸ ಪ್ರಮಾಣ ಪತ್ರ, ಕಾಲೇಜು ಐಡಿ ಕಾರ್ಡ್ ಲಗತ್ತಿಸಿಬೇಕು. ಅರ್ಜಿ ಸಲ್ಲಿಸಲು ನವೆಂಬರ್ 17 ಕೊನೆಯ ದಿನ.

ಹೆಚ್ಚಿನ ಮಾಹಿತಿಗಾಗಿ ಕುರೇಕುಪ್ಪ ಪುರಸಭೆ ಕಚೇರಿಗೆ ಸಂಪರ್ಕಿಸಬಹುದು ಎಂದು ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅತಿರುದ್ರ ಮಹಾಯಜ್ಞ ಸಮಿತಿಯಿಂದ ಐತಿಹಾಸಿಕ ಕುಂಭಮೇಳ

# ಸಾವಿರಾರು ವರ್ಷಗಳಿಂದ ಹಿಂದೂ ಧರ್ಮವನ್ನು ಒಡೆಯುವ ಪ್ರಯತ್ನ

**ಗದಗ :** ಗುರುವನ್ನು ಒಲಿಸಿಕೊಳ್ಳಲು ಭಕ್ತಿ ಮಾರ್ಗ ಮುಖ್ಯವಾಗಿದೆ. ನಾಗಾಸಾಧುಗಳಿಗೆ ದೇವಾನುದೇವತೆಗಳು ಒಲಿಸಿಕೊಳ್ಳಲು ಶಕ್ತಿಯಿದೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಅವರು ಹೇಳಿದರು.

ನಗರದ ವಿದ್ಯಾದಾನ ಸಮಿತಿಯ ಮೈದಾನದಲ್ಲಿ ಮಂಗಳವಾರದಿಂದ ಎಂಟು ದಿನಗಳ ವರೆಗೆ ನಡೆಯುತ್ತಿರುವ ಅತಿರುದ್ರಯಾಗ ಮಹಾಯಜ್ಞ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿ, ಸತ್ಯಯುಗದಲ್ಲಿ ಏಕಾತ್ಮ, ದ್ವಾಪರಯುಗದಲ್ಲಿ ಆತ್ಮ ಮತ್ತು ಪರಮಾತ್ಮ, ತ್ರೇತಾಯುಗದಲ್ಲಿ ಯಜ್ಞ ಯಾಗಗಳು ಆರಂಭವಾದವು ಸುರ ಮತ್ತು ಅಸುರರ ಸಂಘರ್ಷದಲ್ಲಿ ದೈವಶಕ್ತಿಯಿಂದ ಸತ್ಯ ಮತ್ತು ನ್ಯಾಯಕ್ಕೆ ಜಯ ತಂದುಕೊಟ್ಟಿದ್ದಾರೆ. ಇದಕ್ಕೆ ಶಕ್ತಿ ತುಂಬಲು ಮಹದೇವನ ಹೆಸರಿನಲ್ಲಿ ಯಜ್ಞಗಳು ನಡೆಯುತ್ತಿದ್ದವು ಅಂತಹ ಮಹಾನ ಯಜ್ಞವು ಗದುಗಿನಲ್ಲಿ ನಡೆದಯುತ್ತಿರುವುದು ಇಲ್ಲಿನ ಜನತೆಯ ಪುಣ್ಯವಾಗಿದೆ. ಭಕ್ತಿ ಎಂದರೆ ಉರಿಯುವ ಪ್ರೀತಿ ಅಂತಹ ಪ್ರೀತಿ ಕರಗಿ ಲೀನವಾದಾಗ ಗುರುವಿನ ಆಶೀರ್ವಾದ ಸಿಗುತ್ತದೆ ಎಂದು ಹೇಳಿದರು.

ಹಿಂದೂ ಧರ್ಮವನ್ನು ಒಡೆಯಲು ಸಾವಿರಾರು ವರ್ಷಗಳಿಂದ ಪ್ರಯತ್ನ ನಡೆಯುತ್ತಿದ್ದರೂ ಇವರೆಗೆ ಅದು ಸಾದ್ಯವಾಗಿಲ್ಲ ಹಿಂದೂಗಳು ಒಗ್ಗಟ್ಟಾಗಿ ದೈವ ಆರಾಧನೆಯಿಂದ ಶಕ್ತಿ ಪಡೆದು ಅದನ್ನು ಪರೋಪಕಾರ ಕೆಲಸಕ್ಕಾಗಿ ಬಳಸಿಕೊಳ್ಳಬೇಕು. ಗದುಗಿನಲ್ಲಿ ಲೋಕ ಕಲ್ಯಾಣಕ್ಕಾಗಿ ನಡೆಯುತ್ತಿರುವ ಈ ಮಹಾಯಜ್ಞದಿಂದ ಜಗತ್ತಿಗೆ ಒಳ್ಳೆಯದಾಗಲಿ ಎಂದು ಸಂಸದ



ಬಸವರಾಜ ಬೊಮ್ಮಾಯಿ ಅವರು ಹೇಳಿದರು.

ಅತಿರುದ್ರ ಮಹಾಯಜ್ಞ ಸಮಿತಿಯ ಗೌರವಾಧ್ಯಕ್ಷರು ಹಾಗೂ ಶಾಸಕ ಸಿ.ಸಿ.ಪಾಟೀಲ ಅವರು ಮಾತನಾಡಿ, ಮನುಕುಲದ ಒಳಿತಾಗಿ ಈ ಮಹಾಯಜ್ಞ ನಡೆಯುತ್ತಿದೆ. 11 ಸಾವಿರಕ್ಕೂ ಹೆಚ್ಚು ಮಹಿಳೆಯರಿಂದ ನಡೆದ ಕುಂಭಮೇಳದಿಂದ ಗದಗ ನಗರ ಪಾವನವಾಗಿದೆ. ಎಂಟು ದಿನಗಳ ವರೆಗೆ ನಡೆಯುವ ಈ ಯಜ್ಞದಲ್ಲಿ ಎಲ್ಲರೂ ಪಾಲ್ಗೊಂಡು ಈ ಮಹಾನ ಕಾರ್ಯವನ್ನು ಯಶಸ್ವಿಗೊಳಿಸೋಣ ಎಂದು ಹೇಳಿದರು.

ಮಹಾಯಜ್ಞದ ನೇತೃತ್ವವಹಿಸಿದ್ದ ನಾಗಾಸಾಧು ಶ್ರೀ ಸಹದೇವಾನಂದ ಗಿರಿಜಿ ಮಹಾರಾಜ ಅವರು ಮಾತನಾಡಿ, ದೇಶಾದ್ಯಾಂತ ನೂರಾರು ನಾಗಾಸಾಧುಗಳು ಗದಗ ನಗರಕ್ಕೆ ಆಗಮಿಸಿದ್ದಾರೆ ಅವರೆಲ್ಲರ ತಪಸ್ಸಿನಿಂದ ಜನತೆಗೆ ಆರ್ಶಿವಾದ ದೊರೆಯಲಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ವಿರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿ ಪೂಜ್ಯಶ್ರೀ ಕಲ್ಲಯ್ಯಜ್ಜನವರು ಸಾನಿಧ್ಯವಹಿಸಿದ್ದರು. ಯಜ್ಞ ಸಮಿತಿಯ ಗೌರಾಧ್ಯಕ್ಷರಾದ ಡಿ.ಆರ್. ಪಾಟೀಲ, ಅಧ್ಯಕ್ಷ ಕಿರಣ ಭೂಮಾ, ಉಪಾಧ್ಯಕ್ಷರಾದ ಎಸ್.ಎಚ್. ಶಿವನಗೌಡ್ರ, ರವಿ ದಂಡಿನ, ಬಿ.ಬಿ.ಅಸೂಟಿ, ರಾಜು ಕುರಡಗಿ, ಬಸವರಾಜ ಬಿಂಗಿ, ಉಮೇಶಗೌಡ್ರ ಪಾಟೀಲ, ರವಿ ಗುಂಜೀಕರ, ಸದು ಮದರಿಮಠ, ವೆಂಕಟೇಶ ಕುಲಕರ್ಣಿ,ರಾಜಣ್ಣ ಗುಡಿಮನಿ, ರಮೇಶ ಸಜ್ಜಗಾರ, ವಿಜಯಲಕ್ಷ್ಮೀ ಮಾನ್ವಿ,ಪ್ರೀತಿ ಹೊನ್ನಗುಡಿ, ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

ಇದಕ್ಕೂ ಮುನ್ನ ನಗರದ ತ್ರಿಕೂಟೇಶ್ವರ ದೇವಸ್ಥಾನದಿಂದ ಸಾವಿರಾರು ಮಹಿಳೆಯರಿಂದ ಆರಂಭಗೊಂಡ ಭವ್ಯ ಕುಂಭಮೇಳ ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ವಿದ್ಯಾದಾನ ಸಮಿತಿಯ ಮೈದಾನ ತಲುಪಿತು. ಈ ಮೆರವಣಿಗೆಯಲ್ಲಿ ವಿವಿಧ ಕಲಾತಂಡಗಳು ಪಾಲ್ಗೊಂಡಿದ್ದವು.

# ಪ್ರತಿಭೆ ಗುರುತಿಸಲು ಕಾರಂಜಿ ವೇದಿಕೆ.

## ಪಾಪಿನಾಯಕನಹಳ್ಳಿ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ, ಕಲೋತ್ಸವ



**ದಾವಣಗೆರೆ :** ಶಾಲಾ ಮಕ್ಕಳ ಸರ್ವತೋಮುಖ ಅಭಿವೃದ್ಧಿಗೆ ಮತ್ತು ಅವರ ಪ್ರತಿಭೆ ಹೊರ ಹಾಕುವ ನಿಟ್ಟಿನಲ್ಲಿ ಪ್ರತಿಭಾಕಾರಂಜಿ ಹಾಗೂ ಕಲೋತ್ಸವದಂತಹ ಕಾರ್ಯಕ್ರಮಗಳು ಸಹಕಾರಿಯಾಗಿವೆ ಎಂದು ಕಾಕುಬಾಳಿನ ಪೂಜ್ಯಶ್ರೀ ಷಡಕ್ಷರಯ್ಯಸ್ವಾಮಿಗಳು ಹೇಳಿದರು. ಪಾಪಿನಾಯಕನಹಳ್ಳಿ ಕ್ಲಸ್ಟರ್ ಮಟ್ಟದ ಪ್ರತಿಭಾಕಾರಂಜಿಯು ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಕಾಕುಬಾಳು ಶಾಲಾ ಆವರಣದಲ್ಲಿ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಪ್ರತಿಯೊಂದು ಮಕ್ಕಳಲ್ಲಿ ಒಂದೊಂದು ಪ್ರತಿಭೆಯು ಅಡಗಿದ್ದು, ಅವುಗಳನ್ನು ಗುರುತಿಸಿ ಸೂಕ್ತ ವೇದಿಕೆ ಕಲ್ಪಿಸಿ ಅವರನ್ನು ಪ್ರೋತ್ಸಾಹಿಸುವ ಕೆಲಸ ಶಿಕ್ಷಕರು ಹಾಗೂ ಪೋಷಕರು ಮಾಡಬೇಕು. ಮಕ್ಕಳಿಗೆ ಪಠ್ಯದ ಜತೆಗೆ ಪಠ್ಯೇತರ ಚಟುವಟಿಕೆಗಳೇ ಒತ್ತು ನೀಡುವ ಕೆಲಸವನ್ನು ಮಾಡಬೇಕು ಎಂದರು.

ಕ್ಷೇತ್ರ ಸಮನ್ವಯಾಧಿಕಾರಿಗಳಾದ ಶಿವಕುಮಾರ್‌ರವರು ಮಾತನಾಡಿ ಮಕ್ಕಳ ಕಲೆ ಮತ್ತು ಸಾಂಸ್ಕೃತಿಕ ಮೌಲ್ಯಗಳನ್ನು ಅಳೆದು ಪ್ರೋತ್ಸಾಹಿಸಲು ಉತ್ತಮ ಅವಕಾಶವನ್ನು ಇಲಾಖೆ ಒದಗಿಸಿದೆ. ಕ್ಲಸ್ಟರ್ ಹಂತದಿಂದ ವಿಜೇತರಾದ ವಿದ್ಯಾರ್ಥಿಗಳು ತಾಲೂಕು ಮಟ್ಟದ ಸ್ಪರ್ಧೆಯಲ್ಲಿ ಉತ್ತಮ ಪ್ರದರ್ಶನ ನೀಡಿ ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಬೇಕು ಎಂದರು. ವೇದಿಕೆ ಅಧ್ಯಕ್ಷತೆಯನ್ನು ಗುರುಬಸವರಾಜ್ ಅಧ್ಯಕ್ಷರು ಎಸ್.ಡಿ.ಎಂ.ಸಿ. ವಹಿಸಿದ್ದು, ಗ್ರಾಮ ಪಂಚಾಯಿತಿ ಸದಸ್ಯರು, ಎಸ್.ಡಿ.ಎಂ.ಸಿ. ಸದಸ್ಯರು ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಶ್ರೀ ಜಿ.ಮಲ್ಲಿಕಾರ್ಜುನಗೌಡರವರು ಹಾಗೂ ಬಸವರಾಜ.ಕೆ. ರಾಜ್ಯ ಸಂಘಟನಾ ಕಾರ್ಯದರ್ಶಿ, ಡಯಟ್ ಉಪನ್ಯಾಸಕರಾದ ಎ.ಎನ್.ಸುಧಾಕರ್, ಶಿಕ್ಷಣ ಸಂಯೋಜಕರಾದ ರಾಜು ಮತ್ತು ಪಾಲಕ ಪೋಷಕರು ಮತ್ತು ವಿದ್ಯಾರ್ಥಿಗಳು ಹಾಗೂ ಕ್ಲಸ್ಟರ್‌ನ ಸಂಪನ್ಮೂಲ ವ್ಯಕ್ತಿಗಳಾದ ಯಾಸ್ಮೀನ್ ತಾಜ್, ಶಾಲೆಯ ಮುಖ್ಯಗುರುಗಳು ಹಾಗೂ ಸಹ ಶಿಕ್ಷರು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿ ಕಾರ್ಯಕ್ರಮ ಸಮರ್ಪಣೆ ಮಾಡಿದರು.

ಕಾರ್ಯಕ್ರಮದ ನಿರೂಪಣೆಯನ್ನು ಶಿಕ್ಷಕಿ ಶ್ರೀಮತಿ ಹನುಮಂತಮ್ಮ, ಸ್ವಾಗತವನ್ನು ಶ್ರೀಮತಿ ಜರೀನಾಬೇಗಂ, ಪ್ರಾಸ್ತಾವಿಕ ನುಡಿ ಶ್ರೀಮತಿ ಯಾಸ್ಮಿನ್‌ತಾಜ್, ಪ್ರಾರ್ಥನೆಯನ್ನು ಶಾಲಾ ವಿದ್ಯಾರ್ಥಿಗಳಾದ ನಿರೀಕ್ಷಾ ಮತ್ತು ತಂಡ, ಕೊನೆಯಲ್ಲಿ ವಂದನಾರ್ಪಣೆಯನ್ನು ಶಿಕ್ಷಕರಾದ ಪವನ್ ಕುಮಾರ್‌ರವರು ನೆರವೇರಿಸಿದರು.

# ಪರ್ಪಲ್ ಫೆಸ್ಟ್ ಕಾರ್ಯಕ್ರಮದ ರಾಯಭಾರಿಗೆ ಅರ್ಜಿ ಆಹ್ವಾನ

**ಶಿವಮೊಗ್ಗ:** ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ವತಿಯಿಂದ ಡಿ.5 ರಿಂದ 7 ವರೆಗೆ ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ನಡೆಯಲಿರುವ ರಾಷ್ಟ್ರ ಮಟ್ಟದ ಪರ್ಪಲ್ ಫೆಸ್ಟ್ ಕಾರ್ಯಕ್ರಮದ ರಾಯಭಾರಿ ಆಯ್ಕೆಗೆ ಜಿಲ್ಲೆಯಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದಿರುವ ವಿಕಲಚೇತನ ವ್ಯಕ್ತಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ನಮೂನೆ ಹಾಗೂ ರಾಯಭಾರಿಯಾಗಿ ಆಯ್ಕೆಯಾಗಲು ಅಗತ್ಯವಿರುವ ಮಾರ್ಗಸೂಚಿಯ ಪ್ರತಿಯನ್ನು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣಾಧಿಕಾರಿಗಳ ಕಚೇರಿ, ಶಿವಮೊಗ್ಗ ಕಚೇರಿ ಇಲ್ಲಿ ನೀಡಲಾಗುವುದು.

ಭರ್ತಿ ಮಾಡಿದ ಅರ್ಜಿಯನ್ನು ನ.16 ರೊಳಗೆ ಗೂಗಲ್ ಫಾರ್ಮ್ https://forms.gle/7pMqcgCySATEvNVm6 ಮೂಲಕ ಅಥವಾ ಆಯುಕ್ತರು ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ ಕಚೇರಿಗೆ ಖುದ್ದಾಗಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 08182-251676 ಗೆ ಸಂಪರ್ಕಿಸಬಹುದೆಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರ್ಕಾರಿ ನಿವೃತ್ತ ನೌಕರರಿಗೆ ಪ್ರಬಂಧ ಸ್ಪರ್ಧೆ

**ಶಿವಮೊಗ್ಗ:** ಜಿಲ್ಲಾ ಸರ್ಕಾರಿ ನಿವೃತ್ತ ನೌಕರರ ಸಂಘದ ವತಿಯಿಂದ ಕನ್ನಡ ರಾಜ್ಯೋತ್ಸವದ ಅಂಗವಾಗಿ ಸಂಘದ ನೊಂದಾಯಿತ ತಾಲ್ಲೂಕು ಮತ್ತು ಜಿಲ್ಲಾ ಸದಸ್ಯರಿಗೆ ಪ್ರಬಂಧ ಸ್ಪರ್ಧೆಯನ್ನು ಆಯೋಜಿಸಲಾಗಿದೆ.

ಪ್ರಬಂಧ ಸ್ಪರ್ಧೆ "ನಿವೃತ್ತರ ಅಪಾರ ಅನುಭವದ ಸೇವೆಯನ್ನು ಸಮಾಜದ ಒಳಿತಾಗಿ ಹೇಗೆ ಬಳಸಿಕೊಳ್ಳಬಹುದು" ಎಂಬ ವಿಷಯವನ್ನು ಒಳಗೊಂಡಿದೆ. ಪ್ರಬಂಧ ಎರಡು ಪುಟಗಳು ಅಂದರೆ 400 ಪದಗಳನ್ನು ಮೀರದಂತೆ ಕೈ ಬರಹ ಅಥವಾ ಪ್ರಬಂಧ ಸ್ಪರ್ಧೆ "ನಿವೃತ್ತರ ಅಪಾರ ಅನುಭವದ ಸೇವೆಯನ್ನು ಸಮಾಜದ ಒಳಿತಾಗಿ ಹೇಗೆ ಬಳಸಿಕೊಳ್ಳಬಹುದು" ಎಂಬ ವಿಷಯವನ್ನು ಒಳಗೊಂಡಿದೆ. ಪ್ರಬಂಧ ಎರಡು ಪುಟಗಳು ಅಂದರೆ 400 ಪದಗಳನ್ನು ಮೀರದಂತೆ ಕೈ ಬರಹ ಅಥವಾ ಡಿಟಿಪಿ ಮೂಲಕ ಬರೆದು ತಮ್ಮ ಸಂಪೂರ್ಣ ಅಂಚೆ ವಿಳಾಸ ಮತ್ತು ಮೊಬೈಲ್ ಸಂಖ್ಯೆಯೊಂದಿಗೆ ಡಾ. ವಿ.ಕೆ.ಮಂಜುನಾಥ, ವೆಂಕಟೇಶ್ವರ ಟಾಕೀಸ್ ಪಕ್ಕ, ರಾಘವೇಂದ್ರ ಬಡಾವಣೆ ತೀರ್ಥಹಳ್ಳಿ -57743 ಈ ವಿಳಾಸಕ್ಕೆ ಕಳಿಸಬೇಕು.

ಪ್ರಬಂಧ ಕಳಿಸಲು ನ.20 ಕೊನೆಯ ದಿನಾಂಕವಾಗಿದ್ದು, ಉತ್ತಮ ಮೂರು ಪ್ರಬಂಧಗಳಿಗೆ ನಗದು ಬಹುಮಾನ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ:9448403640 ಗೆ ಸಂಪರ್ಕಿಸಬಹುದೆಂದು ಸಂಘದ ಜಿಲ್ಲಾ ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು ಒಂದು ದಿನದ ಜಾಗೃತಿ ಕಾರ್ಯಾಗಾರ

**ಬಳ್ಳಾರಿ:** ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರ ವತಿಯಿಂದ ಆರ್‌ಎಎಂಪಿ ಯೋಜನೆಯಡಿ ಉದ್ಯಮಶೀಲತಾ ಚಟುವಟಿಕೆಗಳನ್ನು ಬೆಂಬಲಿಸಲು ಮತ್ತು ಪೋಷಿಸಲು ಹಾಗೂ ಸ್ಥಳೀಯ ಮಟ್ಟದ ಎಂಎಸ್‌ಎಂಇ ಕಾರ್ಯಕ್ಷಮತೆ ಹೆಚ್ಚಿಸಲು ನ.13 ರಂದು ಮಧ್ಯಾಹ್ನ 03 ಗಂಟೆಗೆ ಸಿರುಗುಪ್ಪದ ತಾಲ್ಲೂಕು ಪಂಚಾಯತ್ ಸಭಾಂಗಣದಲ್ಲಿ ವ್ಯಾಪಾರ ಅಭಿವೃದ್ಧಿ ಸೇವಾ ಪೂರೈಕೆದಾರರು (ಬಿಡಿಎಸ್‌ಪಿ) ಕುರಿತು ಒಂದು ದಿನದ ಜಾಗೃತಿ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ.

ಕಾರ್ಯಾಗಾರದಲ್ಲಿ ಉದ್ಯಮಿದಾರರಿಗೆ ವ್ಯಾಪರ ಅವಕಾಶಗಳ ಕುರಿತು ಮಾರ್ಗದರ್ಶನ, ವ್ಯವಹಾರ ಯೋಜನೆ ಸಿದ್ಧತೆಗೆ ಸಹಕಾರ, ತಂತ್ರಜ್ಞಾನದ ಉನ್ನತೀಕರಣ ಮತ್ತು ಗುಣಮಟ್ಟದ ಪ್ರಮಾಣೀಕರಣಕ್ಕೆ ಬೆಂಬಲ, ವಿಳಂಬಿತ ಪಾವತಿಗಳ ಸಮಸ್ಯೆಗಳ ಬಗ್ಗೆ ಹಾಗೂ ಬ್ರಾಂಡಿಂಗ್ ಮತ್ತು ರಫ್ತು ಪ್ರಚಾರದ ಕುರಿತು ಜಾಗೃತಿ ಮೂಡಿಸಲಾಗುತ್ತದೆ.ಕಾರ್ಯಾಗಾರದಲ್ಲಿ ಆಸಕ್ತಿಯುಳ್ಳ ಉದ್ದಿಮೆದಾರರು ಭಾಗವಹಿಸಿ ಇದರ ಸದುಪಯೋಗಪಡೆದುಕೊಳ್ಳಬೇಕು ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಸೋಮಶೇಖರ್.ಬಿ ಅವರು ತಿಳಿಸಿದ್ದಾರೆ.

# ಚೆನ್ನೈ ಕರಾಟೆ ಪಂದ್ಯಾವಳಿಯಲ್ಲಿ ಜಿಲ್ಲೆಯ ಕ್ರೀಡಾಪಟುಗಳಿಗೆ ಪ್ರಶಸ್ತಿ



**ಶಿವಮೊಗ್ಗ :** ನಂಬರ್ 9ರಂದು ಚೆನ್ನೈನ ಅಣ್ಣನಗರದ ಎಸಿಎಫ್ ಶಾಲೆಯಲ್ಲಿ ನಡೆದ ರಾಷ್ಟ್ರೀಯ ಮುಕ್ತ ಕರಾಟೆ ಪಂದ್ಯಾವಳಿಯಲ್ಲಿ ಶಿವಮೊಗ್ಗ ಸಿಟಿ ಕರಾಟೆ ಅಸೋಸಿಯೇಷನ್ ಕ್ರೀಡಾಪಟುಗಳಾದ ದಿಗಂತ್ ಕಾವ್ಯ ಪ್ರೀತಿ ಶ್ರೀ ಮತ್ತು ಶ್ರಾವ್ಯ ಭಾಗವಹಿಸಿ ಪ್ರಶಸ್ತಿ ಪಡೆದಿದ್ದು ವಿಜೇತ ಕ್ರೀಡಾಪಟುಗಳಿಗೆ ಶಿವಮೊಗ್ಗ ಸಿಟಿ ಕರಾಟೆ ಅಸೋಸಿಯೇಷನ್ ಪದಾಧಿಕಾರಿಗಳು ಶುಭ ಕೋರಿದ್ದಾರೆ

# ಬ್ಯಾಂಕ್‌ನ ವೇತನ ಪ್ಯಾಕೇಜ್ ವಿಮೆ

## ಅಪಘಾತದಲ್ಲಿ ಮೃತ ಕುಟುಂಬಕ್ಕೆ ರೂ. 1 ಕೋಟಿ ಪರಿಹಾರ ಚೆಕ್ ವಿತರಣೆ

**ದಾವಣಗೆರೆ ;** ಚನ್ನಗಿರಿ ತಾಲ್ಲೂಕಿನ ಎಕ್ಕೆಗೊಂದಿ ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕ ಕೆ.ಬಿ.ತಿಪ್ಪಣ್ಣ ಅಪಘಾತದಲ್ಲಿ ಮೃತರಾದಗಿದ್ದು, ಕೆನರಾ ಬ್ಯಾಂಕ್ ಸಹಯೋಗದಲ್ಲಿ ಅವರ ಅವಲಂಬಿತ ಕುಟುಂಬಕ್ಕೆ ಅಪಘಾತ ವಿಮೆ ಪಾಲಿಸಿಯಡಿ ಮಂಗಳವಾರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ರೂ.1 ಕೋಟಿ ಪರಿಹಾರ ಮೊತ್ತ ನೀಡಲಾಯಿತು.

ಈ ವೇಳೆ ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಪರಿಹಾರ ಚೆಕ್ ವಿತರಿಸಿ ಮಾತನಾಡಿ, ಸರ್ಕಾರವು ಹಲವಾರು ಯೋಜನೆಗಳನ್ನು ಜಾರಿಗೆ ತಂದಿದೆ. ಆದರೆ ಅವುಗಳನ್ನು ಸರಿಯಾದ ರೀತಿಯಲ್ಲಿ ಸದುಪಯೋಗ ಪಡೆದುಕೊಳ್ಳುತ್ತಿಲ್ಲ. ಕಷ್ಟದ ಸಂದರ್ಭಗಳಲ್ಲಿ ಹಲವಾರು ಕುಟುಂಬಗಳು ಆರ್ಥಿಕ ಸಂಕಷ್ಟಕ್ಕೆ ಸಿಲುಕಿಕೊಳ್ಳುತ್ತವೆ. ಆದ್ದರಿಂದ ಪ್ರತಿಯೊಬ್ಬ ಸರ್ಕಾರಿ ನೌಕರ ವೇತನ ಪ್ಯಾಕೇಜ್ ಖಾತೆ ಮಾಡಿಕೊಳ್ಳಬೇಕು. ಯಾವುದೇ ಒಬ್ಬ ವ್ಯಕ್ತಿ ಆಕಸ್ಮಿಕವಾಗಿ ಮರಣ ಹೊಂದಿದಲ್ಲಿ ಅಪಘಾತ ಅಥವಾ ವಿವಿಧ ರೀತಿಯ ವೈಯಕ್ತಿಕ ಅಪಘಾತ ಹಾಗೂ ವೈಮಾನಿಕ ಅಪಘಾತ ವಿಮೆ ಸೇವೆಗಳಡಿ ರೂ.50 ಲಕ್ಷದಿಂದ ರೂ.1 ಕೋಟಿ ವರೆಗೆ ಪರಿಹಾರವನ್ನು ಅವಲಂಬಿತ ಕುಟುಂಬಗಳಿಗೆ ನೀಡಲಾಗುತ್ತದೆ.

ಈ ಯೋಜನೆಯೂ ಕೇವಲ ಸರ್ಕಾರಿ ನೌಕರರಿಗೆ ಅಲ್ಲದೇ ಅರೆ ಸರ್ಕಾರಿ ನೌಕರರಿಗೂ ಸಹ ವಿವಿಧ ಪ್ಯಾಕೇಜ್ ಗಳಲ್ಲಿ ಸೇವೆ ಲಭ್ಯವಿದೆ. ಪ್ರತಿಯೊಬ್ಬರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು. ಅದಲ್ಲದೇ ಕೇಂದ್ರ ಸರ್ಕಾರವೂ ಸಹ ಪ್ರಧಾನ ಮಂತ್ರಿ ಭೀಮಾ ಯೋಜನೆ, ಪ್ರಧಾನ ಮಂತ್ರಿ ಸುರಕ್ಷಾ ಯೋಜನೆ ಜಾರಿ ಮಾಡಿದೆ. ಜೀವ ವಿಮಾ ನೋಂದಣಿಯೊಂದಿಗೆ ವಾರ್ಷಿಕ ರೂ.430 ಪಾವತಿಸಿದಲ್ಲಿ ರೂ.1 ಲಕ್ಷದಿಂದ 5 ಲಕ್ಷದವರೆಗೆ ವಿಮೆ ಪಾವತಿ ಮಾಡಲಾಗುತ್ತದೆ. ಪ್ರಧಾನ ಮಂತ್ರಿ ಸುರಕ್ಷಾ ಯೋಜನೆ ಜಾರಿ ಮಾಡಿದೆ. ಆದ್ದರಿಂದ ಕಷ್ಟದ ಸುಳಿಗೆ ಸಿಲುಕಿಕೊಳ್ಳುವ ಬದಲಾಗಿ. ಇಂತಹ ಯೋಜನೆಗಳ ನೊಂದಣಿ ಮಾಡಿಸಿಕೊಳುವ ಮೂಲಕ ಭವಿಷ್ಯದಲ್ಲಿ ಎದುರಾಗುವ ಸಂಕಷ್ಟಗಳಿಂದ ಮುಕ್ತರಾಗಿ ಎಂದರು.

ಈ ಸಂದರ್ಭದಲ್ಲಿ ಶಾಸಕರಾದ ಕೆ.ಎಸ್.ಬಸವಂತಪ್ಪ, ಲೀಡ್ ಬ್ಯಾಂಕ್ ವ್ಯವಸ್ಥಾಪಕ ಪಡದಯ್ಯ ಹಿರೇಮಠ್, ಡಿಜಿಎಂ ತನ್ಮಯ್ ದಾಸ್, ಡಿಡಿಪಿಐ ಕೊಟ್ರೇಶ್ ಸೇರಿದಂತೆ ಮತ್ತಿತರರು ಇದ್ದರು.

# ನ.26 ರಿಂದ ಶಾಮನೂರು ಡೈಮಂಡ್, ಶಿವಗಂಗಾ ಕಪ್-2025 ಕ್ರಿಕೆಟ್ ಟೂರ್ನಿ

**ದಾವಣಗೆರೆ:** ದಾವಣಗೆರೆ ಇಲೆವೆನ್ಸ್ ಕ್ರಿಕೆಟ್ ಕ್ಲಬ್ ಹಾಗೂ ಜಿಲ್ಲಾ ಕ್ರೀಡಾಪಟುಗಳ ಸಂಘದ ಆಶ್ರಯದಲ್ಲಿ ನ.26ರಿಂದ 30ರ ವರೆಗೆ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಶಾಮನೂರು ಡೈಮಂಡ್, ಶಿವಗಂಗಾ ಕಪ್-2025 ಆಯೋಜಿಸಲಾಗಿದೆ ಎಂದು ಕ್ಲಬ್ ಅಧ್ಯಕ್ಷ ದಿನೇಶ್ ಕೆ.ಶೆಟ್ಟಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದಿ.ಪಾರ್ವತಮ್ಮ ಶಾಮನೂರು ಶಿವಶಂಕರಪ್ಪ ಅವರ ಸವಿನೆನಪಿಗಾಗಿ 18ನೇ ಬಾರಿಗೆ ರಾಷ್ಟ್ರಮಟ್ಟದ ಹೊನಲು ಬೆಳಕಿನ ಲೀಗ್ ಕಮ್ ನಾಕೌಟ್ ಟೆನ್ನಿಸ್ ಬಾಲ್ ಕ್ರಿಕೆಟ್ ಟೂರ್ನಿ ಶಾಮನೂರು ಡೈಮಂಡ್, ಶಿವಗಂಗಾ ಕಪ್-2025 ಆಯೋಜಿಸಲಾಗಿದ್ದು, ಹೊರದೇಶದ ಶ್ರೀಲಂಕಾ ಮತ್ತು ನೇಪಾಳ ತಂಡಗಳು ಹಾಗೂ ಹೊರ ರಾಜ್ಯಗಳಾದ ಗುಜರಾತ್, ತಮಿಳುನಾಡು, ಮಹಾರಾಷ್ಟ್ರ ಹಾಗೂ ಕರ್ನಾಟಕ ರಾಜ್ಯದ ಬೆಂಗಳೂರು, ಮೈಸೂರು. ಮಂಗಳೂರು, ಉಡುಪಿ, ತುಮಕೂರು, ಶಿವಮೊಗ್ಗ, ಹುಬ್ಬಳ್ಳಿ ಸೇರಿದಂತೆ ಒಟ್ಟು 52 ತಂಡಗಳು ಭಾಗವಹಿಸಿವೆ. ಒಟ್ಟು 850 ಆಟಗಾರರಿಗೆ ಟೀ ಶರ್ಟ್ ನೀಡವುದರ ಜೊತೆಗೆ ಊಟ ಮತ್ತು ವಸತಿಯನ್ನು ನೀಡಲಾಗುತ್ತದೆ ಎಂದರು.ಈ ಟೂರ್ನಿಯ ವಿಜೇತರಿಗೆ ಪ್ರಥಮ ಸ್ಥಾನ ರೂ. 5,55,555 ರೂ. ಶಾಮನೂರು ಡೈಮಂಡ್ ಕಪ್, ದ್ವಿತೀಯ ಸ್ಥಾನಕ್ಕೆ 3,55,555 ರೂ. ಹಾಗೂ ಶಿವಗಂಗಾ ಕಪ್, ತೃತೀಯ ಬಹುಮಾನ ರೂ. 1,55,555 ಹಾಗೂ ಆಕರ್ಷಕ ಟ್ರೋಫಿ ನೀಡಲಾಗುವುದು. ಅದೇ ರೀತಿ ವೈಯಕ್ತಿಕ ಉತ್ತಮ ಆಲ್‌ರೌಂಡರ್‌ಗೆ ಹೀರೋ ಹೊಂಡಾ ಬೈಕ್‌ನ್ನು ನೀಡಲಾಗುವುದು. ವಿಶೇಷವಾಗಿ ಪಂದ್ಯವನ್ನು ವೀಕ್ಷಿಸಲು ಕ್ರೀಡಾಭಿಮಾನಿಗಳಿಗೆ ಕುಳಿತುಕೊಂಡು ನೋಡಲು ಮೈದಾನದಲ್ಲಿ ಗ್ಯಾಲರಿಯ ವ್ಯವಸ್ಥೆ ಮಾಡಲಾಗುವುದು. ಈ ಟೂರ್ನಿಯಲ್ಲಿ ಮೂರನೇ ತೀರ್ಪುಗಾರರ ವ್ಯವಸ್ಥೆಯನ್ನು ಮಾಡಲಾಗಿದ್ದು ಹಾಗೂ ಪಂದ್ಯಾವಳಿಗಳನ್ನು ಯೂಟ್ಯೂಬ್‌ನಲ್ಲಿ ನೇರ ಪ್ರಸಾರ ಮಾಡಲಾಗುವುದು ಎಂದು ಮಾಹಿತಿ ನೀಡಿದರು.ಈ ಟೂರ್ನಿಯ ಅಂದಾಜು ವೆಚ್ಚ 35 ರಿಂದ 40 ಲಕ್ಷ ಇರುತ್ತದೆ.

ಈ ಟೂರ್ನಿಯಲ್ಲಿ ವಿಶೇಷವಾಗಿ ಪೊಲೀಸ್ ತಂಡ, ಪತ್ರಕರ್ತರತಂಡ, ವರ್ತಕರ ತಂಡ, ಜಿಲ್ಲಾಧಿಕಾರಿಗಳ ತಂಡ, ಮಹಾನಗರ ಪಾಲಿಕೆ ಸದಸ್ಯರ ತಂಡ, ವಕೀಲರ ತಂಡ ಒಟ್ಟು 8 ತಂಡಗಳುಳ್ಳ ಅಫೀಶಿಯಲ್ ಕಪ್ ಪಂದ್ಯಾವಳಿಗಳು ನ.25 ರಂದು ಸಂಜೆ 7.30ಕ್ಕೆ ನಡೆಯಲಿದ್ದು ಈ ಪಂದ್ಯಾವಳಿಗೆ ಅಂದು ಶಾಮಾನೂರು ಶಿವಶಂಕರಪ್ಪ ಚಾಲನೆ ನೀಡಲಿದ್ದಾರೆ. ಜಿಲ್ಲಾ ಮಂತ್ರಿ ಎಸ್.ಎಸ್. ಮಲ್ಲಿಕಾರ್ಜುನ್ ಉದ್ಯಮಿಗಳಾದ ಅಥಣಿ ವೀರಣ್ಣ ಸೇರಿದಂತೆ ಅನೇಕ ಗಣ್ಯರು ಆಗಮಿಸಲಿದ್ದಾರೆ ಎಂದು ಹೇಳಿದರು.ಸುದ್ದಿಗೋಷ್ಠಿಯಲ್ಲಿ ಕ್ಲಬ್‌ನ ಪದಾಧಿಕಾರಿಗಳಾದ ಶ್ರೀನಿವಾಸ್ ಶಿವಗಂಗಾ, ಜಯಪ್ರಕಾಶ್ ಗೌಡ, ರಂಗಸ್ವಾಮಿ, ಸುರೇಶ್, ಚಂದ್ರು, ಹಾಲಪ್ಪ, ಬಸವನಗೌಡ, ಶಾಂತಕುಮಾರ್ ಇತರರು ಇದ್ದರು.



ಚನ್ನಗಿರಿಯ ಹುಂಡೈ ಶೋರೂಂನಲ್ಲಿ ನೂತನವಾಗಿ ಬಂದಿರುವ ಹುಂಡೈ ವೆನು ಎಚ್.ಎಕ್ಸ್. ಕಾರನ್ನು ತಹಶೀಲ್ದಾರ್ ಎನ್.ಜೆ.ನಾಗರಾಜ್ ಬಿಡುಗಡೆಗೊಳಿಸಿದರು. ಸಂಸ್ಥೆಯ ಅಧ್ಯಕ್ಷ ಜಾವೀದ್ ಸಾಬ್, ನಿರ್ದೇಶಕರಾದ ಅಫಾಕ್ ರಜ್ವಿ, ಗೌಡ್ರು ಮಂಜಣ್ಣ, ಸಂಜು ಪಾಟೀಲ್, ರಮೇಶ್ ಸರ್ಜ, ರಿಯಾನ್, ಬಿ.ಇ.ಓ. ಜಯ್ಯಪ್ಪ ಹಾಜರಿದ್ದರು.

## ಒನಕೆ ಓಬವ್ವ ಜಯಂತಿಯಲ್ಲಿ ಶಾಸಕ ಕೆ.ಎಸ್.ಬಸವಂತಪ್ಪ ಅಭಿಮತ

# ಓಬವ್ವನ ಶೌರ್ಯ, ತ್ಯಾಗ ಪ್ರತಿಯೊಬ್ಬರಿಗೂ ಸ್ಫೂರ್ತಿ

**ದಾವಣಗೆರೆ:** ವೀರ ವನಿತೆ ಒನಕೆ ಓಬವ್ವಳ ಧೈರ್ಯ, ಶೌರ್ಯ ಹಾಗೂ ತ್ಯಾಗ ಮನೋಭಾವ ಇಂದಿನ ಮಹಿಳೆಯರಿಗೆ ಸ್ಫೂರ್ತಿ ಎಂದು ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ ಅಭಿಪ್ರಾಯ ವ್ಯಕ್ತಪಡಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಒನಕೆ ಓಬವ್ವ ಜಯಂತಿ ಕಾರ್ಯಕ್ರಮದಲ್ಲಿ ಒನಕೆ ಓಬವ್ವ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಅವರು ಮಾತನಾಡಿದರು.

ಒನಕೆ ಓಬವ್ವ ನಡೆದು ಬಂದ ದಾರಿ ಪ್ರತಿಯೊಬ್ಬರಿಗೂ ಸ್ಫೂರ್ತಿ. ಅತ್ಯಂತ ಹಿಂದುಳಿದ ವರ್ಗದ ಮಹಿಳೆಯಾದರೂ ತನ್ನದೇ ಆದ ಸೇವಾ ಮನೋಭಾವ ಬೆಳೆಸಿಕೊಂಡಿದ್ದರು. ಅವರಂತೆ ಪ್ರತಿಯೊಬ್ಬರೂ ಸೇವಾ ಮನೋಭಾವ, ಶೌರ್ಯ, ಧೈರ್ಯ ಮನೋಭಾವ ರೂಢಿಸಿಕೊಳ್ಳಬೇಕು ಎಂದು ತಿಳಿಸಿ ಓಬವ್ವನ ಸಹಾಸ ಪರಿಗಣಿಸಿ ರಾಜ್ಯದಲ್ಲಿ ಒನಕೆ ಓಬವ್ವ ಅಧ್ಯಯನ ಪೀಠ ಸ್ಥಾಪಿಸಲು ಸರ್ಕಾರದ ಗಮನ ಸೆಳೆಯಲಾಗುತ್ತದೆ ಎಂದರು.

ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರವಾಸ್ವಾಮಿ



ಮಾತನಾಡಿ, ದೇಶ ಹಾಗೂ ಸಮಾಜಕ್ಕೆ ಅಗಾದ ನಿಸ್ವಾರ್ಥ ಸೇವೆ ಮಾಡಿದ ರಾಣಿ ಚನ್ನಮ್ಮ, ಒನಕೆ ಓಬವ್ವ, ಬುದ್ಧ, ಬಸವ ಅಂಬೇಡ್ಕರ್ ಅವರನ್ನು ಸ್ಮರಿಸುತ್ತೇವೆ. ಅಂತೆಯೇ ದುರ್ಗದ ಏಳು ಸುತ್ತಿನ ಕೋಟೆ ಸಣ್ಣ ಪ್ರಾಂತ್ಯವಾಗಿದ್ದರೂ ತನ್ನ ಜೀವದ ಹಂಗು ತೊರೆದು ಸಮಯ ಪ್ರಜ್ಞೆಯಿಂದ ಏಕಾಂಗಿಯಾಗಿ ಹೋರಾಡಿದ ದಿಟ್ಟ ಮಹಿಳೆಯ ಧೈರ್ಯ, ಸಾಹಸ, ಶೌರ್ಯ, ದೇಶ ಭಕ್ತಿಯನ್ನು ಸ್ಮರಿಸಲಾಗುತ್ತಿದೆ. ಈ ನಿಟ್ಟಿನಲ್ಲಿ ಭವಿಷ್ಯದ ಪೀಳಿಗೆಗೆ ಸಾಮಾಜಿಕ ಪ್ರಜ್ಞೆ, ರಾಷ್ಟ್ರೀಯತೆ, ಸೌಹಾರ್ದತೆ, ಶೌರ್ಯ ಅದೆಲ್ಲದಕ್ಕಿಂತ ಹೆಚ್ಚಾಗಿ ತ್ಯಾಗದ ಕುರಿತು ತಿಳಿಸಬೇಕಿದೆ. ಭವಿಷ್ಯದ ಪೀಳಿಗೆಯನ್ನು ವಿಘಟಿತರಾಗಿಸದೇ, ಸಂಘಟಿರಾಗಿ ಸುಸಂಸ್ಕೃತ ದಾರಿಯಲ್ಲಿ ಸಾಗಬೇಕಾದರೆ ಇಂತಹ ಮಹನೀಯರ ಕೊಡುಗೆ, ರಾಷ್ಟ್ರಭಕ್ತಿ ಬಗ್ಗೆ ಅರಿವು ಮೂಡಿಸಿದಾಗ ಮಾತ್ರ ಸಮಾಜ ಸರಿದಾರಿಯಲ್ಲಿ ಸಾಗಲು ಸಾಧ್ಯ ಎಂದರು.

ದೂಡಾ ಅಧ್ಯಕ್ಷ ದಿನೇಶ್ ಕೆ.ಶೆಟ್ಟಿ ಮಾತನಾಡಿ, ಒಬ್ಬ ಸಾಮಾನ್ಯ ಗೃಹಿಣಿಯಾಗಿ, ಕಾವಲುಗಾರನ ಹೆಂಡತಿಯಾಗಿ ಸಮಯ ಪ್ರಜ್ಞೆಯಿಂದ ಕೋಟೆ ರಕ್ಷಣೆಗೆ ಮುಂದಾಗಿದ್ದು ಅವಿಸ್ಮರಣೀಯ. ಈ ಮೂಲಕ ಅಪಾರ ಮೆಚ್ಚುಗೆ ಗುರಿಯಾದವರು ಒನಕೆ ಓಬವ್ವ. ಇಂತಹ ಮಹನೀಯರ ಸಾಧನೆ, ಸಾಹಸ ಕೇವಲ ಯಾವುದೇ ಒಂದು ಸಮುದಾಯಕ್ಕೆ ಸೀಮಿತವಾಗದೇ ಪ್ರತಿಯೊಬ್ಬರೂ ಅವರ ಆಲೋಚನೆಗಳ ಮೈಗೂಡಿಸಿಕೊಳ್ಳಬೇಕು. ಅಲ್ಲದೇ ಪ್ರತಿ ಶಾಲಾ, ಕಾಲೇಜುಗಳಲ್ಲಿ ಜಯಂತಿ ಆಚರಣೆ ಮಾಡುವ ಮುಖೇನ ಅವರ ಸಾಹಸ, ಶೌರ್ಯ ತ್ಯಾಗದ ಬಗ್ಗೆ ವಿದ್ಯಾರ್ಥಿಗಳಿಗೆ ತಿಳಿಸುವ ಅಗತ್ಯವಿದೆ ಎಂದರು.

ಸುಮತಿ ಜಯಪ್ಪ ಒನಕೆ ಓಬವ್ವ ಕುರಿತ ಉಪನ್ಯಾಸ ನೀಡಿದರು. ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಹಾಂತೇಶ್, ಪರಿಶಿಷ್ಟ ಪಂಗಡ ಇಲಾಖೆ ಅಧಿಕಾರಿ ನವೀನ್ ಮಠದ್, ಅಬಕಾರಿ ಇಲಾಖೆಯ ಉಪ ಆಯುಕ್ತ ಜುನೈದ್, ಛಲವಾದಿ ಸಮುದಾಯದ ಅಧ್ಯಕ್ಷ ರುದ್ರಮುನಿ, ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಸಮಾಜದ ಮುಖಂಡರು ಉಪಸ್ಥಿತರಿದ್ದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ ಸ್ವಾಗತಿಸಿದರು.

## ಶ್ರೀಕ್ಷೇತ್ರ ಶ್ರವಣ ಬೆಳಗೊಳದಲ್ಲಿ ಚಾತುರ್ಮಾಸ್ಯ ನಿರತರಾಗಿದ್ದ ಪೂಜ್ಯ ತ್ಯಾಗಿಗಳ ಮಂಗಲ ವಿಹಾರ



**ಶ್ರವಣಬೆಳಗೊಳ:** ಶ್ರೀಕ್ಷೇತ ಶ್ರವಣಬೆಳಗೊಳದಲ್ಲಿ ಈ ವರ್ಷ ನಡೆದ ವರ್ಷಾಯೋಗ ಚಾತುರ್ಮಾಸ್ಯದಲ್ಲಿ ಪಾವನ ಸಾನಿಧ್ಯ ವಹಿಸಿದ್ದ ಆಚಾರ್ಯಶ್ರೀ ವರ್ಧಮಾನಸಾಗರ ಮಹಾರಾಜರು (ದಕ್ಷಿಣ ಭಾರತ), ನಿರ್ಯಾಪಕ ಶ್ರಮಣಶ್ರೀ ಧರ್ಮಸಾಗರ ಮಹಾರಾಜರು, ಮುನಿಶ್ರೀ ಗುಣಸಾಗರ ಮಹಾರಾಜರು, ಮುನಿಶ್ರೀ ನಿರ್ಭಯಸಾಗರ ಮಹಾರಾಜರು, ಮುನಿಶ್ರೀ ವೃಷಭಸಾಗರ ಮಹಾರಾಜರು, ಮುನಿಶ್ರೀ ನಿರ್ಲೋಭಸಾಗರ ಮಹಾರಾಜರು, ಮುನಿಶ್ರೀ ಸಿದ್ಧಸಾಗರ ಮಹಾರಾಜರು, ಮುನಿಶ್ರೀ ಸುಖಸಾಗರ ಮಹಾರಾಜರು, ಮುನಿಶ್ರೀ ಅನೇಕಾಂತಸಾಗರ ಮಹಾರಾಜರು, ಮುನಿಶ್ರೀ ಸಂಯಕ್‌ಸಾಗರ ಮಹಾರಾಜರು, ಮುನಿಶ್ರೀ ಪಾರ್ಶ್ವಸಾಗರ ಮಹಾರಾಜರು ಹಾಗೂ ಸಂಘಸ್ಥ ತ್ಯಾಗಿಗಳು ಮಂಗಳವಾರ ಮಹಾರಾಷ್ಟ್ರ ಭಾಗಕ್ಕೆ ಮಂಗಲ ವಿಹಾರ ಮಾಡಿದರು.

ಪೂಜ್ಯ ತ್ಯಾಗಿಗಳನ್ನು ಕ್ಷೇತ್ರದ ಪೀಠಾಧ್ಯಕ್ಷರಾದ ಸ್ವಸ್ತಿಶ್ರೀ ಚಾರುಕೀರ್ತಿ ಪಂಡಿತಾಚಾರ್ಯವರ್ಯ ಭಟ್ಟಾರಕ ಮಹಾ ಸ್ವಾಮಿಗಳವರು ಹಾಗೂ ನೂರಾರು ಶ್ರಾವಕ–ಶ್ರಾವಕಿಯರು ಪೂರ್ಣಕುಂಭ, ಮಂಗಳ ವಾದ್ಯಗಳೊಂದಿಗೆ ಬೀಳ್ಕೊಟ್ಟರು.

## ಜಿಲ್ಲಾ ಮಟ್ಟದ ಕ್ರೀಡಾಕೂಟ ಹಾಗೂ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ



**ಹಾವೇರಿ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರ ಕಚೇರಿ ಸಹಯೋಗದಲ್ಲಿ ಜಿಲ್ಲಾ ಮಟ್ಟದ 14 ಮತ್ತು 17ರ ವಯೋಮಾನದ ವಿದ್ಯಾರ್ಥಿಗಳ ಕ್ರೀಡಾಕೂಟ ಹಾಗೂ ಪ್ರಾಥಮಿಕ–ಪ್ರೌಢಶಾಲೆಗಳ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ ಕಾರ್ಯಕ್ರಮದ ಉದ್ಘಾಟನಾ ಸಮಾರಂಭ ನವೆಂಬರ್ 12 ರಂದು ಬೆಳಿಗ್ಗೆ 9 ಗಂಟೆಗೆ ಹಾವೇರಿ ನಗರದ ಹೊಸಮನಿ ಸಿದ್ದಪ್ಪ ಜಿಲ್ಲಾ ಕ್ರೀಡಾಂಗಣದಲ್ಲಿ ಜರುಗಲಿದೆ.

ಕೇಂದ್ರ ಗ್ರಾಹಕರ ವ್ಯವಹಾರಗಳ ಆಹಾರ ಮತ್ತು ಸಾರ್ವಜನಿಕ ವಿತರಣಾ ಹಾಗೂ ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವರಾದ ಪ್ರಹ್ಲಾದ ಜೋಶಿ ಹಾಗೂ ವಿಧಾನ ಪರಿಷತ್ ಸಭಾಪತಿಗಳಾದ ಬಸವರಾಜ ಹೊರಟ್ಟಿ ಅವರ ಗೌರವಾನ್ವಿತ ಉಪಸ್ಥಿತಿಯಲ್ಲಿ, ಜವಳಿ, ಕಬ್ಬು ಅಭಿವೃದ್ಧಿ ಸಕ್ಕರೆ ಮತ್ತು ಕೃಷಿ ಮಾರುಕಟ್ಟೆ ಹಾಗೂ ಹಾವೇರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವಾನಂದ ಪಾಟೀಲ ಅವರು ಉದ್ಘಾಟನೆ ನೆರವೇರಿಸಲಿದ್ದಾರೆ.

ಮಾಜಿ ಮುಖ್ಯ ಮಂತ್ರಿಗಳು ಹಾಗೂ ಸಂಸದರಾದ ಬಸವರಾಜ ಬೊಮ್ಮಾಯಿ ಅವರ ಗೌರವ ಉಪಸ್ಥಿತಿಯಲ್ಲಿ, ಶಾಸಕರು ಹಾಗೂ ವಿಧಾನಸಭೆ ಉಪ ಸಭಾಧ್ಯಕ್ಷರಾದ ರುದ್ರಪ್ಪ ಮಾನಪ್ಪ ಲಮಾಣಿ ಅವರು ಅಧ್ಯಕ್ಷತೆ ವಹಿಸಲಿದ್ದಾರೆ.

ಗೌರವಾನ್ವಿತ ಅತಿಥಿಗಳಾಗಿ ವಿಧಾನ ಪರಿಷತ್ ಮುಖ್ಯ ಸಚೇತಕ ಸಲೀಂ ಅಹ್ಮದ್, ಬ್ಯಾಡಗಿ ಶಾಸಕರು ಹಾಗೂ ಕರ್ನಾಟಕ ರಾಜ್ಯ ಅರಣ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಸವರಾಜ ಶಿವಣ್ಣನವರ, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಉಪಾಧ್ಯಕ್ಷ ಎಸ್.ಆರ್.ಪಾಟೀಲ, ವಿಧಾನ ಪರಿಷತ್ ಶಾಸಕರಾದ ಪ್ರೊ.ಎಸ್.ವಿ.ಸಂಕನೂರ, ಪ್ರದೀಪ ಶೆಟ್ಟರ, ಶಾಸಕರಾದ ಶ್ರೀನಿವಾಸ ಮಾನೆ, ಯು.ಬಿ.ಬಣಕಾರ, ಪ್ರಕಾಶ ಕೋಳಿವಾಡ, ಯಾಸೀರ ಅಹ್ಮದಖಾನ್ ಪಠಾಣ, ಕರ್ನಾಟಕ ಗಡಿ ಪ್ರದೇಶದ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸೋಮಣ್ಣ ಬೇವಿನಮರದ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಎಂ.ಎಂ.ಹಿರೇಮಠ, ನಗರಸಭೆ ಅಧ್ಯಕ್ಷೆ ಶ್ರೀಮತಿ ಶಶಿಕಲಾ ರಾಮು ಮಾಳಗಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಸ್.ಎಫ್.ಎನ್.ಗಾಜಿಗೌಡ್ರ, ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಂ.ಎಂ.ಮೈದೂರ, ನಗರಸಭೆ ಉಪಾಧ್ಯಕ್ಷ ಮಲ್ಲಿಕಾರ್ಜುನ ಸಾತೇನಹಳ್ಳಿ ಅವರು ಭಾಗವಹಿಸಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ, ಜಿ.ಪಂ. ಕಾರ್ಯನಿರ್ವಾಹಣಾಧಿಕಾರಿ ಶ್ರೀಮತಿ ರುಚಿ ಬಿಂದಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀಮತಿ ಯಶೋಧಾ ವಂಟಗೋಡಿ ಹಾಗೂ ಕ.ರಾ.ಸ.ನೌ.ಸಂ. ಹಾವೇರಿ ಜಿಲ್ಲಾ ಘಟಕದ ಅಧ್ಯಕ್ಷ ಮಲ್ಲೇಶ ಕರಿಗಾರ ಅವರು ಪಾಲ್ಗೊಳ್ಳಲಿದ್ದಾರೆ.

ಅಥ್ಲೆಟಿಕ್ಸ್: ದಿನಾಂಕ 12–11–2025 ರಂದು 14ರ ವಯೋಮಾನದ ಬಾಲಕ ಮತ್ತು ಬಾಲಕಿಯರಿಗೆ ಹಾಗೂ 17ರ ವಯೋಮಾನದ ಬಾಲಕ ಮತ್ತು ಬಾಲಕಿಯರಿಗೆ ದಿನಾಂಕ 13–11–2025 ರಂದು ಅಥ್ಲೆಟಿಕ್ಸ್ ಕ್ರೀಡಾಕೂಟ ನಡೆಯಲಿದೆ.

## ಹಿಂಗಾರು, ಬೇಸಿಗೆ ಹಂಗಾಮಿನ ವಿವಿಧ ಬೆಳೆಗಳ ವಿಮೆ ನೋಂದಣಿಗೆ ಆಹ್ವಾನ

**ಬಳ್ಳಾರಿ:** ಪ್ರಸಕ್ತ ಸಾಲಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬೀಮಾ ಯೋಜನೆಯ ಹಿಂಗಾರು ಹಾಗೂ ಬೇಸಿಗೆ ಹಂಗಾಮಿನ ಬೆಳೆಗಳ ಬೆಳೆ ವಿಮೆಗೆ ನೋಂದಾಯಿಸಲು ಬೆಳೆ ಸಾಲ ಪಡೆದ ಹಾಗೂ ಬೆಳೆ ಸಾಲ ಪಡೆಯದ ರೈತರು ತಮ್ಮ ಬೆಳೆಗಳಿಗೆ ಬ್ಯಾಂಕುಗಳಲ್ಲಿ ವಿಮೆಗೆ ನೋಂದಾಯಿಸಿಕೊಳ್ಳಬೇಕು ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

ಹಿಂಗಾರು ಹಂಗಾಮಿನ ಗ್ರಾಮ ಪಂಚಾಯಿತಿ ಮಟ್ಟದ ನೀರಾವರಿ ಬೆಳೆಗಳಾದ ಜೋಳ, ಕಡಲೆ ಹಾಗೂ ಬೇಸಿಗೆ ಹಂಗಾಮಿನ ಗ್ರಾಮ ಪಂಚಾಯಿತಿ ಮಟ್ಟದ ನೀರಾವರಿ ಬೆಳೆಗಳಾದ ಶೇಂಗಾ, ಭತ್ತ ಹಾಗೂ ಹೋಬಳಿ ಮಟ್ಟದ ಹಿಂಗಾರು ಹಂಗಾಮಿನ ಬೆಳೆಗಳಾದ ಮುಸುಕಿನ ಜೋಳ, ಸೂರ್ಯಕಾಂತಿ, ಮಳೆಯಾಶ್ರಿತ ಬೆಳೆ ಕುಸುಬೆ, ಈರುಳ್ಳಿ ಮತ್ತು ಬೇಸಿಗೆ ಹಂಗಾಮಿನ ಸೂರ್ಯಕಾಂತಿ, ಈರುಳ್ಳಿ ಬೆಳೆಗಳು ಜಿಲ್ಲೆಯ ಬೆಳೆಗಳಾಗಿವೆ.

*ವಿಮೆಗೆ ಕೊನೆಯ ದಿನ:*

ಹಿಂಗಾರು ಹಂಗಾಮಿನ ಬೆಳೆಗಳಾದ ಜೋಳ, ಮುಸುಕಿನ ಜೋಳ ಬೆಳೆಗಳಿಗೆ ಡಿ.15. ಸೂರ್ಯಕಾಂತಿ, ಕುಸುಮೆ ಬೆಳೆಗಳಿಗೆ ಡಿ.15 ಮತ್ತು ಕಡಲೆ ಬೆಳೆಗೆ ಡಿ.31.

ಬೇಸಿಗೆ ಬೆಳೆಗಳಾದ ಭತ್ತ, ನೆಲಗಡಲೆ, ಸೂರ್ಯಕಾಂತಿ ಬೆಳೆಗಳಿಗೆ ಡಿ.27 ಮತ್ತು ಈರುಳ್ಳಿ ಬೆಳೆಗೆ 2026 ರ ಫೆ.27 ರ ವರೆಗೆ ಅವಕಾಶ ಕಲ್ಪಿಸಲಾಗಿದೆ.

ಈ ಯೋಜನೆಯ ಲಾಭ ಪಡೆಯಲು ಯಾವುದೇ ಸ್ಥಳೀಯ ಬ್ಯಾಂಕ್‌ಗಳು ಅಥವಾ ಸಾರ್ವಜನಿಕ ಸೇವಾ ಕೇಂದ್ರಗಳನ್ನು ಸಂಪರ್ಕಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರ, ಸಹಾಯಕ ಕೃಷಿ ನಿರ್ದೇಶಕರ ಕಚೇರಿ ಅಥವಾ ಜಂಟಿ ಕೃಷಿ ನಿರ್ದೇಶಕರ ಕಚೇರಿಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉಚಿತ ಕಣ್ಣಿನ ತಪಾಸಣೆ ಶಿಬಿರ

ಶಿವಮೊಗ್ಗ: ವಿಶ್ವ ಮಧುಮೇಹ ದಿನಾಚರಣೆಯ ಪ್ರಯುಕ್ತ ನಗರದ ರಾಜೇಂದ್ರ ನಗರ 100ಅಡಿ ರಸ್ತೆಯಲ್ಲಿರುವ ಆಶೀರ್ವಾದ ಕಣ್ಣಿಯ ಆಸ್ಪತ್ರೆಯಲ್ಲಿ ನ.14ರ ಶುಕ್ರವಾರ ಬೆಳಗ್ಗೆ 10ರಿಂದ ಸಂಜೆ 6ರವರೆಗೆ ಮಧುಮೇಹ ರೋಗಿಗಳಿಗೆ ಹಾಗೂ ಕಣ್ಣಿನ ಸಮಸ್ಯೆಯಿಂದ ಬಳಲುತ್ತಿರುವ ಸಾರ್ವಜನಿಕರಿಗೆ ಉಚಿತ ಕಣ್ಣಿನ ತಪಾಸಣೆಯ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ.

ಮಧುಮೇಹವು ಕಣ್ಣಿನ ರೆಟಿನಾ ಭಾಗವನ್ನು ಹಾನಿಮಾಡುತ್ತಾ ಹೋಗುತ್ತದೆ. ಇದರಿಂದ ನಿಧನವಾಗಿ ದೃಷ್ಟಿನಾಶವಾಗಬಹುದು. ಆರಂಭಿಕ ಹಂತದಲ್ಲೇ ತಪಾಸಣೆ ಮಾಡುವುದರಿಂದ ದೃಷ್ಟಿನಾಶವಾಗುವುದನ್ನು ತಡೆಗಟ್ಟಬಹುದೆಂದು ಆಸ್ಪತ್ರೆ ತಜ್ಞ ವೈದ್ಯರು ತಿಳಿಸಿದ್ದಾರೆ.

ಶಿಬಿರದಲ್ಲಿ ಕಣ್ಣಿನ ಪೊರೆ ಹಾಗೂ ಕಣ್ಣಿಗೆ ಸಂಬಂಧಿಸಿದ ಶಸ್ತ್ರ ಚಿಕಿತ್ಸೆ ಹಾಗೂ ಸ್ಕ್ಯಾನಿಂಗ್ ಮೇಲೆ 15% ರಿಯಾಯಿತಿ ಇರುತ್ತದೆ. ಹೆಚ್ಚಿನ ಮಾಹಿತಿಗಾಗಿ 90080 19005, 9481988550 ಗೆ ಸಂಪರ್ಕಿಸಬಹುದೆಂದು ಪತ್ರಿಕಾ ಪ್ರಕಟಣೆ ಯಲ್ಲಿ ತಿಳಿಸಿದ್ದಾರೆ.

## ಕಲಾ ಪ್ರತಿಭೋತ್ಸವ ಸ್ಪರ್ಧೆಗೆ ಅರ್ಜಿ ಆಹ್ವಾನ

**ಗದಗ:** ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಮಕ್ಕಳು ಮತ್ತು ಯುವ ಜನರ ಕಲಾಪ್ರತಿಭೆಯನ್ನು ಗುರುತಿಸಿ ಅವರಿಗೆ ಉತ್ತೇಜನ ನೀಡಲು ಹಾಗೂ ಪ್ರೋತ್ಸಾಹಿಸಲು ಕಲಾ ಪ್ರತಿಭೋತ್ಸವ ಸ್ಪರ್ಧೆಗೆ ಅರ್ಜಿ ಆಹ್ವಾನಿಸಲಾಗಿದೆ.

ಏಕ ವ್ಯಕ್ತಿ ಸ್ಪರ್ಧೆಗಳು: ಬಾಲ ಪ್ರತಿಭೆ ಸ್ಪರ್ಧೆಗೆ 08 ರಿಂದ 14 ವರ್ಷದೊಳಗಿನ ಹಾಗೂ ಕಿಶೋರ ಪ್ರತಿಭೆಗೆ 14 ರಿಂದ 18 ವರ್ಷದೊಳಗಿನ ಮಕ್ಕಳು ಭಾಗವಹಿಸಬಹುದು. ಶಾಸ್ತ್ರೀಯ ನೃತ್ಯ, ಸುಗಮ ಸಂಗೀತ, ಚಿತ್ರಕಲೆ, ಜಾನಪದ ಗೀತೆ, ಹಿಂದೂಸ್ತಾನಿ/ ಕರ್ನಾಟಕ ವಾದ್ಯ ಸಂಗೀತ ಹಾಗೂ ಹಿಂದೂಸ್ತಾನಿ/ ಕರ್ನಾಟಕ ಶಾಸ್ತ್ರೀಯ ಸಂಗೀತ ಕಲಾಪ್ರಕಾರ ಜರುಗಲಿವೆ.

ಯುವ ಪ್ರತಿಭೆ ಸ್ಪರ್ಧೆಗೆ 18 ರಿಂದ 30 ವರ್ಷದೊಳಗಿನವರು ಭಾಗವಹಿಸಬಹುದು, ನನ್ನ ನೆಚ್ಚಿನ ಸಾಹಿತಿ (ಆಶುಭಾಷಣ), ಶಾಸ್ತ್ರೀಯ ನೃತ್ಯ, ಸುಗಮ ಸಂಗೀತ, ಹಿಂದೂಸ್ತಾನಿ/ ಕರ್ನಾಟಕ ಶಾಸ್ತ್ರೀಯ ಸಂಗೀತ, ಚಿತ್ರಕಲೆ ಹಾಗೂ ಹಿಂದೂಸ್ತಾನಿ/ಕರ್ನಾಟಕ ವಾದ್ಯ ಸಂಗೀತ ಕಲಾಪ್ರಕಾರಗಳಿಗೆ ಸ್ಪರ್ಧೆ ಜರುಗಲಿದೆ.

ಸಮೂಹ ಸ್ಪರ್ಧೆ : ಸಮೂಹ ಸ್ಪರ್ಧೆಯಲ್ಲಿ ನಾಟಕ ಪ್ರದರ್ಶಿಸಬಹುದು, 10 ರಿಂದ 15 ಜನ ತಂಡದ ಸದಸ್ಯರು ಭಾಗವಹಿಸಬಹುದು.ಸ್ಪರ್ಧಿಗಳು ಸ್ವ ವಿವರದ ಅರ್ಜಿ ಸಲ್ಲಿಸಲು ಕೊನೆಯ ದಿನ ನವೆಂಬರ್ 24 ಆಗಿದ್ದು, ಸ್ಪರ್ಧೆಗಳಲ್ಲಿ ಭಾಗವಹಿಸುವ ಪ್ರತಿಯೊಬ್ಬ ಅಭ್ಯರ್ಥಿಯು ವಯೋಮಿತಿಯ ದೃಢೀಕರಣಕ್ಕಾಗಿ ಶಾಲೆಯಿಂದ/ ಕಾಲೇಜಿನಿಂದ ಪಡೆದ ಪ್ರಮಾಣ ಪತ್ರವನ್ನು ಸಲ್ಲಿಸಬೇಕು.

ಶಾಲೆಯಿಂದ ಬಂದ ಅಭ್ಯರ್ಥಿಯಲ್ಲದಿದ್ದಲ್ಲಿ ಅವರ ವಯಸ್ಸಿನ ಬಗ್ಗೆ ಪಂಚಾಯತಿ, ನಗರಸಭೆ, ಪುರಸಭೆ/ ಪಾಲಿಕೆ ಕಚೇರಿಯಿಂದ ದೃಢೀಕರಣ ಪತ್ರ ಪಡೆದು ಸಲ್ಲಿಸಬೇಕು. ಸ್ಪರ್ಧೆಯ ಸಂಭವನೀಯ ದಿನಾಂಕ 28–11–2025 ಮತ್ತು 29–11–2025 ಆಗಿರುತ್ತದೆ. ಜಿಲ್ಲಾ ಮಟ್ಟದ ಸ್ಪರ್ಧೆಯಲ್ಲಿ ಪ್ರಥಮ/ ದ್ವಿತೀಯ ಸ್ಥಾನ ಪಡೆದ ಅಭ್ಯರ್ಥಿಗಳು / ತಂಡವನ್ನು

ವಲಯ ಮಟ್ಟದ ಸ್ಪರ್ಧೆಗೆ ಹಾಗೂ ವಲಯ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದವರನ್ನು ರಾಜ್ಯ ಮಟ್ಟದ ಸ್ಪರ್ಧೆಗಳಿಗೆ ಆಯ್ಕೆ ಮಾಡಲಾಗುವುದು. ರಾಜ್ಯ ಮಟ್ಟದಲ್ಲಿ ಪ್ರಥಮ , ದ್ವಿತೀಯ ಮತ್ತು ತೃತೀಯ ಸ್ಥಾನದಲ್ಲಿ ವಿಜೇತರಾದವರಿಗೆ ನಗದು ಬಹುಮಾನ ನೀಡಲಾಗುವುದು. ತೀರ್ಪುಗಾರರ ತೀರ್ಮಾನವೇ ಅಂತಿಮ ತೀರ್ಮಾನ. ಸ್ಪರ್ಧೆಗೆ ಬೇಕಾಗುವ ವಾದ್ಯ ಪರಿಕರಗಳನ್ನು ಸ್ಪರ್ಧಾಗಳುಗಳೇ ತರುವುದು. ಒಬ್ಬ ಸ್ಪರ್ಧಿಯು ಒಂದಕ್ಕಿಂತ ಹೆಚ್ಚಿನ ಸ್ಪರ್ಧೆಯಲ್ಲಿ ಭಾಗವಹಿಸಲು ಅವಕಾಶವಿರುವುದಿಲ್ಲ.ಸ್ಪರ್ಧೆಯಲ್ಲಿ ಭಾಗವಹಿಸುವ ಅಭ್ಯರ್ಥಿಗಳು ತಮ್ಮ ವಿವರವನ್ನು ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜಿಲ್ಲಾ ಆಡಳಿತ ಭವನ, ಕೊಠಡಿ ಸಂಖ್ಯೆ 103, ಗದಗ ಈ ಕಚೇರಿಗೆ ಕಚೇರಿ ವೇಳೆಯಲ್ಲಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ 08372–221864 ಸಂಪರ್ಕಿಸಬಹುದು.

### ನ.13 ರಿಂದ 18 ರವರೆಗೆ ಬಳ್ಳಾರಿಯಲ್ಲಿ ಅಗ್ನಿವೀರ್ ಸೇನಾ ನೇಮಕಾತಿ ರ್‍ಯಾಲಿ

### ಅಂತಿಮ ಸಿದ್ಧತೆಗಳ ಪರಿಶೀಲಿಸಿ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಸೂಚನೆ

## ಅಧಿಕಾರಿಗಳು ಕ್ರೀಯಾಶೀಲರಾಗಿ ಕಾರ್ಯನಿರ್ವಹಿಸಿ



**ಬಳ್ಳಾರಿ:** ಇದೇ ನ.13 ರಿಂದ 18 ರ ವರೆಗೆ ಬಳ್ಳಾರಿಯ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯುವ ಅಗ್ನಿವೀರ್ ಸೇನಾ ನೇಮಕಾತಿ ರ್‍ಯಾಲಿ ಯಶಸ್ವಿಗೊಳಿಸಲು, ಎಲ್ಲಾ ಇಲಾಖೆಗಳ ಅಧಿಕಾರಿಗಳು ನಿರಂತರ ಸಂಪರ್ಕದಲ್ಲಿದ್ದುಕೊಂಡು ಕ್ರೀಯಾಶೀಲರಾಗಿ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಹೇಳಿದರು.

ಮಂಗಳವಾರ ನಗರದ ನೂತನ ಜಿಲ್ಲಾಡಳಿತ ಭವನದ ವಿಡಿಯೋ ಸಭಾಂಗಣದಲ್ಲಿ ಅಗ್ನಿವೀರ್ ಸೇನಾ ನೇಮಕಾತಿ ರ್‍ಯಾಲಿಯ ಅಂತಿಮ ಸಿದ್ಧತೆ ಕುರಿತು ಏರ್ಪಡಿಸಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಮ್ಮ ದೇಶದ ಸೈನ್ಯದಲ್ಲಿ ಸೇರಬಯಸುವ ಅಗ್ನಿವೀರರ ಆಯ್ಕೆ ಪ್ರಕ್ರಿಯೆಯು ನಮ್ಮ ಜಿಲ್ಲೆಯಲ್ಲಿ ನಡೆಯುತ್ತಿರುವುದು ಜಿಲ್ಲೆಯ ಹೆಮ್ಮೆಯ ಸಂಗತಿ ಮತ್ತು ನಮಗೆ ದೊರೆತ ಅವಕಾಶವಾಗಿದೆ. ಹಾಗಾಗಿ ಅಧಿಕಾರಿಗಳು ಆಸಕ್ತಿಯಿಂದ ಕೆಲಸ ನಿರ್ವಹಿಸುವ ಮೂಲಕ ಯಾವುದೇ ರೀತಿಯಲ್ಲಿ ಅಡಚಣೆಯಾಗದಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು.

***ಸಹಾಯವಾಣಿ ಕೇಂದ್ರ:***

ನ.13 ರಿಂದ 18 ರ ವರೆಗೆ ನಡೆಯುವ ರ್‍ಯಾಲಿಯಲ್ಲಿ ಅರ್ಹತಾ ಪರೀಕ್ಷೆಯಲ್ಲಿ ಅರ್ಹತೆ ಹೊಂದಿದ ಅಗ್ನಿವೀರರು ರಾಜ್ಯದ ವಿವಿಧೆಡೆಯಿಂದ ಆಗಮಿಸಲಿದ್ದು, ಅವರಿಗೆ ಸೂಕ್ತ ಮಾರ್ಗದರ್ಶನ ಮಾಡಬೇಕು. ನಗರದ ಬಸ್ ನಿಲ್ದಾಣ, ರೈಲು ನಿಲ್ದಾಣದಲ್ಲಿ ನಿರ್ಮಿಸಲಾಗುವ ಸಹಾಯವಾಣಿ ಕೇಂದ್ರಗಳ ಮೂಲಕ ರ್‍ಯಾಲಿ ನಡೆಯುವ ಸ್ಥಳಕ್ಕೆ ತಲುಪಲು ಸ್ಥಳದ ಮಾಹಿತಿ ನೀಡಬೇಕು. ಅಗತ್ಯವಾದಲ್ಲಿ ನಿಯೋಜಿಸಿರುವ ಬಸ್ ಗಳ ಮೂಲಕ ಕರೆತರಬೇಕು. ಯಾವುದೇ ರೀತಿಯಲ್ಲಿ ತೊಂದರೆಯಾಗದಂತೆ ನೋಡಿಕೊಳ್ಳಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

***ತಂಗಲು ವಸತಿ, ಊಟದ ವ್ಯವಸ್ಥೆ:***

ರ್‍ಯಾಲಿಯಲ್ಲಿ ಭಾಗವಹಿಸಲು ದೂರದ ಪ್ರದೇಶಗಳಿಂದ ಆಗಮಿಸುವ ಅರ್ಹತೆ ಪಡೆದ ಅಭ್ಯರ್ಥಿಗಳಿಗೆ ನಗರದ ವಾಲ್ಮೀಕಿ ಭವನ, ಡಾ.ಬಾಬು ಜಗನ್ ಜೀವನ್ ರಾಂ ಭವನ, ಜಿಲ್ಲಾ ಕ್ರೀಡಾಂಗಣ, ಸರ್ಕಾರಿ ಅತಿಥಿ ಗೃಹ ಮತ್ತು ಮಹಾನಗರ ಪಾಲಿಕೆ ವ್ಯಾಪ್ತಿಯ ರಾತ್ರಿ ತಂಗುದಾಣಗಳಲ್ಲಿ ತಂಗಲು ವಸತಿ ಜೊತೆಗೆ ಊಟದ ವ್ಯವಸ್ಥೆ ಮಾಡಲಾಗಿದ್ದು, ಸಂಬಂಧಿಸಿದ ಅಧಿಕಾರಿಗಳು ಬರುವ ಅಭ್ಯರ್ಥಿಗಳಿಗೆ ಸೂಕ್ತ ನಿರ್ದೇಶನ ನೀಡಬೇಕು. ಅವರ ಪ್ರವೇಶ ಪತ್ರ ಪರಿಶೀಲಿಸಿ ವ್ಯವಸ್ಥೆ ಮಾಡಬೇಕು ಎಂದು ತಿಳಿಸಿದ ಜಿಲ್ಲಾಧಿಕಾರಿಯವರು, ಅಭ್ಯರ್ಥಿಗಳು ಬೇರೆಡೆ ಎಲ್ಲಿಯೂ ಹೊರವಲಯದಲ್ಲಿ ವಾಸ್ತವ್ಯ ಮಾಡಬಾರದು. ಅವರ ಜೊತೆಯಾಗಿ ಬರುವ ಪೋಷಕರು, ಸ್ನೇಹಿತರಿಗೆ ಅವಕಾಶ ಇರದಿರುವ ಬಗ್ಗೆ ಮಾಹಿತಿ ನೀಡಬೇಕು. ಯಾವುದೇ ರೀತಿಯಲ್ಲಿ ಲೋಪವಾಗದಂತೆ ನಿರ್ವಹಿಸಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು.

***ಮೇಲ್ವಿಚಾರಣೆಗೆ ಅಧಿಕಾರಿಗಳ ನೇಮಕ:***

ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯುವ 5 ದಿನಗಳ ರ್‍ಯಾಲಿಯಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ಬೆಳಗಿನ ಉಪಾಹಾರ, ಮಧ್ಯಾಹ್ನದ ಭೋಜನ ಅಲ್ಲಿಯೇ ವ್ಯವಸ್ಥೆ ಮಾಡಬೇಕು. ರಾತ್ರಿಯ ಊಟ ಆಯಾ ವಸತಿ ನಿಲಯಗಳಲ್ಲಿಯೇ ವಿತರಣೆ ಮಾಡಬೇಕು. ಅಭ್ಯರ್ಥಿಯು ಭಾಗವಹಿಸುವ ಶಾರೀರಿಕ ಪರೀಕ್ಷೆ ದಿನದಂದು ಮತ್ತು ಮುಂದಿನ ಹಂತಕ್ಕೆ ಅರ್ಹತೆ ಪಡೆದಾಗ ದೈಹಿಕ, ವೈದ್ಯಕೀಯ ಪರೀಕ್ಷೆ ದಿನದಂದು ಊಟೋಪಚಾರ ಕಲ್ಪಿಸಲಾಗುವುದು. ಮೊದಲನೇ ದಿನವೇ ಅನರ್ಹತೆಯಾದಲ್ಲಿ ಹೊರಹೋಗಲಿದ್ದಾರೆ. ಈ ಎಲ್ಲಾ ಪ್ರಕ್ರಿಯೆಯನ್ನು ಮೇಲ್ವಿಚಾರಣೆ ನಡೆಸಲು ಪಾಳಿ ವೇಳೆಯಲ್ಲಿ ನುರಿತ ಅಧಿಕಾರಿಗಳನ್ನು ನೇಮಿಸಬೇಕು ಎಂದು ಹೇಳಿದರು.

***ಸೂಕ್ತ ಬಂದೋಬಸ್ತ್ ಗೆ ನಿರ್ದೇಶನ:***

ರ್‍ಯಾಲಿಯಲ್ಲಿ ಭಾಗವಹಿಸುವ ಅಭ್ಯರ್ಥಿಗಳ ಈಗಾಗಲೇ ಅವರು ಸಾಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ಅರ್ಹತೆ ಪಡೆದ ಪ್ರವೇಶ ಪತ್ರವನ್ನು ಹಾಜರುಪಡಿಸಿದಲ್ಲಿ ಮಾತ್ರ ಅವರಿಗೆ ಜಿಲ್ಲಾ ಕ್ರೀಡಾಂಗಣಕ್ಕೆ ಒಳಪ್ರವೇಶ ನೀಡಬೇಕು. ಅನಧೀಕೃತ ವ್ಯಕ್ತಿಗಳಿಗೆ ಅವಕಾಶವಿರುವುದಿಲ್ಲ. ಸುತ್ತ–ಮುತ್ತಲಿನ ಜಿಲ್ಲೆಗಳಿಂದ ದ್ವಿ–ಚಕ್ರ ವಾಹನಗಳಲ್ಲಿ ಬರುವ ಅಭ್ಯರ್ಥಿಗಳಿಗೆ ನಿಗದಿಪಡಿಸಿದ ಸ್ಥಳದಲ್ಲಿ ವಾಹನ ಪಾರ್ಕ್ ಮಾಡಲು ಸೂಚಿಸಬೇಕು. ಬ್ಯಾರೀಕೇಡ್ ವ್ಯವಸ್ಥೆ ಮಾಡಬೇಕು. ಜಿಲ್ಲಾ ಕ್ರೀಡಾಂಗಣದ ಸುತ್ತಲೂ ಬಿಗಿ ಪೊಲೀಸ್ ಬಂದೋಬಸ್ತ್ ಕಲ್ಪಿಸಬೇಕು. ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ನಿರ್ದೇಶನ ನೀಡಿದರು.

***ಸಿಸಿಟಿವಿ ಆಳವಡಿಕೆ:***

ಅಗ್ನಿವೀರ್ ಸೇನಾ ನೇಮಕಾತಿ ರ್‍ಯಾಲಿಯನ್ನು ಅಚ್ಚುಕಟ್ಟಾಗಿ ನಿರ್ವಹಿಸಲು ಜಿಲ್ಲಾ ಕ್ರೀಡಾಂಗಣ, ವಸತಿ ನಿಲಯ, ಒಳ–ಹೊರ ಪ್ರವೇಶ ಸೇರಿದಂತೆ ಅಗತ್ಯ ಕಡೆ ಇರುವ ಸ್ಥಳಗಳಲ್ಲಿ ಕಡ್ಡಾಯವಾಗಿ ಸಿಸಿಟಿವಿ ಕ್ಯಾಮೆರಾ ಅಳವಡಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದರು.

***ಸ್ವಚ್ಛತಾ ಕ್ರಮ:***

ಜಿಲ್ಲಾ ಕ್ರೀಡಾಂಗಣದ ಸುತ್ತಲೂ ಲೈಟಿಂಗ್ ವ್ಯವಸ್ಥೆ ಮಾಡಬೇಕು. ರ್‍ಯಾಲಿ ನಡೆಯುವ ದಿನಗಳಂದು ಕ್ರೀಡಾಂಗಣ ಮತ್ತು ವಸತಿ ನಿಲಯಗಳಲ್ಲಿ ಸ್ವಚ್ಛತಾ ಕಾರ್ಯಕ್ಕಾಗಿ ಪೌರಕಾರ್ಮಿಕರನ್ನು ನಿಯೋಜಿಸಬೇಕು ಎಂದು ಮಹಾನಗರ ಪಾಲಿಕೆ ಆಯುಕ್ತರಿಗೆ ಸೂಚಿಸಿದರು.

ಜಿಲ್ಲಾ ಕ್ರೀಡಾಂಗಣದ ಬಳಿ ಅಗತ್ಯ ಅಂಬುಲೆನ್ಸ್, ಅಗ್ನಿಶಾಮಕ ವಾಹನ, ಆರೋಗ್ಯ ಸಮಸ್ಯೆಗಳಿಗೆ ನುರಿತ ವೈದ್ಯರು ಹಾಗೂ ಆರೋಗ್ಯ ಸಿಬ್ಬಂದಿ ನಿಯೋಜಿಸಬೇಕು ಎಂದು ಜಿಲ್ಲಾ ಆರೋಗ್ಯಾಧಿಕಾರಿಗಳಿಗೆ ತಿಳಿಸಿದರು.

ನಿರಂತರ ವಿದ್ಯುತ್ ವ್ಯವಸ್ಥೆ, ವಿದ್ಯುತ್ ದೀಪ ಮತ್ತು ಜನರೇಟರ್ ವ್ಯವಸ್ಥೆ, ಬಿಎಸ್‌ಎನ್‌ಎಲ್ ಬ್ರಾಡ್‌ಬ್ಯಾಂಡ್ ಇಂಟರ್ನೆಟ್ ಜೊತೆಗೆ ವೈಫೈ ಮತ್ತು ಎಲ್‌ಎಎನ್ ಸಂಪರ್ಕ, ಟೆಕ್ನಿಕಲ್ ಸಿಬ್ಬಂದಿ ನಿಯೋಜಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಬೆಂಗಳೂರು ಪ್ರಧಾನ ಕಚೇರಿಯ ಆರ್‌ಓ ಮತ್ತು ಸೇನಾ ನೇಮಕಾತಿ ಅಧಿಕಾರಿಯಾದ ಮೇಜರ್ ಕಪಿಲ್.ಕೆ ಅವರು ಮಾತನಾಡಿ, ನ.13 ರಿಂದ 18 ರ ವರೆಗೆ ನಡೆಯಲಿರುವ ರ್‍ಯಾಲಿಯು ಅಂದಿನ ದಿನಗಳಂದು ಬೆಳಿಗ್ಗೆ 05 ಗಂಟೆಯಿಂದಲೇ ಆರಂಭವಾಗಲಿದ್ದು, ಓಟ ಸೇರಿದಂತೆ ದೈಹಿಕ ಪರೀಕ್ಷೆ ಮತ್ತು ವೈದ್ಯಕೀಯ ಪರೀಕ್ಷೆ ಒಳಗೊಂಡು ಸಂಜೆ 06 ಗಂಟೆಯವರೆಗೆ ಆಯ್ಕೆ ಪ್ರಕ್ರಿಯೆ ನಡೆಯಲಿದೆ. 100 ಅಭ್ಯರ್ಥಿಗಳಲ್ಲಿ 10 ರಿಂದ 20 ಅಭ್ಯರ್ಥಿಗಳು ಅನರ್ಹತೆ ಹೊಂದುವ ಅವಕಾಶ ಇರಲಿದೆ ಎಂದು ಸಭೆಗೆ ತಿಳಿಸಿದರು.

ಜಿಲ್ಲೆಯಲ್ಲಿ ನಡೆಯಲಿರುವ ಅಗ್ನಿವೀರ್ ಸೇನಾ ನೇಮಕಾತಿ ರ್‍ಯಾಲಿಯನ್ನು ಯಶಸ್ವಿಗೊಳಿಸಲು ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ವಹಿಸಿದ ಕಾರ್ಯಭಾರವನ್ನು ಆಸಕ್ತಿಯಿಂದ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಅಧಿಕಾರಿಗಳಿಗೆ ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್., ಮಹಾನಗರ ಪಾಲಿಕೆ ಆಯುಕ್ತ ಪಿ.ಎಸ್.ಮಂಜುನಾಥ, ಡಿಎಂಎಫ್ ವಿಶೇಷಾಧಿಕಾರಿ ಲೋಕೇಶ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ವೀರ ವನಿತೆ ಒನಕೆ ಓಬವ್ವ ಅವರ ಧೈರ್ಯ ಸಾಹಸ ಮಹಿಳೆಯರಿಗೆ ಆದರ್ಶ



**ಬಳ್ಳಾರಿ:** ವೀರ ವನಿತೆ ಒನಕೆ ಓಬವ್ವ ಅವರ ಕಾಯಕ ನಿಷ್ಠೆ, ಧೈರ್ಯ, ಸಾಹಸ ನಾಡಿನ ಮಹಿಳೆಯರಿಗೆ ಆದರ್ಶವಾಗಿದೆ ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ.ರಾಜ್ ಕುಮಾರ್ ರಸ್ತೆಯ ಸಾಂಸ್ಕೃತಿಕ ಸಮುಚ್ಚಯದ ಹೊಂಗಿರಣ ಸಭಾಂಗಣದಲ್ಲಿ ಮಂಗಳವಾರ ಆಯೋಜಿಸಿದ್ದ ವೀರ ವನಿತೆ ಒನಕೆ ಓಬವ್ವ ಜಯಂತಿ ಕಾರ್ಯಕ್ರಮವನ್ನು ಒನಕೆ ಓಬವ್ವ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಬಳ್ಳಾರಿಯ ಸಾಹಿತಿ ಎನ್.ಡಿ.ವೆಂಕಮ್ಮ ಅವರು ವಿಶೇಷ ಉಪನ್ಯಾಸದಲ್ಲಿ ಮಾತನಾಡಿ, ಗುಡೇಕೋಟೆ ಪಾಳೆಗಾರರಲ್ಲಿ ಕಹಳೆಯವರಾಗಿ ಸೇವೆ ಸಲ್ಲಿಸುತ್ತಿದ್ದ ತಂದೆ ಚಿನ್ನಪ್ಪ ತಾಯಿ ಚಿನ್ನಮ್ಮ ದಂಪತಿಯ ಸುಪುತ್ರಿಯಾಗಿ ಕ್ರಿ.ಶ.1721 ರ ನ.11 ರಂದು ವಿಜಯನಗರ ಜಿಲ್ಲೆಯ ಕೂಡ್ಲಿಗಿ ತಾಲ್ಲೂಕಿನ

ಗುಡೆಕೋಟೆಯಲ್ಲಿ ಜನಿಸಿದಳು. ಓಬವ್ವಗೆ ಕದುರಪ್ಪ ಮತ್ತು ತಿಮ್ಮಣ್ಣ ಎಂಬ ಅಣ್ಣಂದಿರಿದ್ದರು. 18 ನೇಯ ಶತಮಾನದ ಚಿತ್ರದುರ್ಗದ ಕೋಟೆಯ ಪಾಳೆಗಾರನಾಗಿದ್ದ ಮದಕರಿ ನಾಯಕನ ಕೋಟೆಯ ಕಾವಲುಗಾರ ಕಹಳೆ ಮದ್ದಹನುಮಪ್ಪ ಓಬವ್ವಳ ಪತಿ ನಂಬಿದ ದೊರೆಗೆ ಯಾವುದೇ ಲೋಪ ಮಾಡಿದವನಲ್ಲ. ಅವನ ವ್ಯಕ್ತಿತ್ವಕ್ಕೆ ಸರಿಸಮವಾದ ಸಂಗಾತಿ ಓಬವ್ವ ಎಂದು ಜೀವನದ ಯಶೋಗಾಥೆ ಬಗ್ಗೆ ತಿಳಿಸಿದರು.

ಓಬವ್ವ ಮಾತೆಯ ಸಾಹಸ ಕಾರ್ಯಕ್ಕೆ ರಾಜವೀರ ಮದಕರಿನಾಯಕರು ಅಭಿನಂದಿಸಿ, ಆ ಸಾಹಸ ಕಾರ್ಯದ ನೆನಪಿಗೆ ಇನ್ನೊಂದು ಸುತ್ತು ಕೋಟೆ ಕಟ್ಟಿಸಿ, ಅದರ ಬಾಗಿಲಿಗೆ "ಒನಕೆ ಕಿಂಡಿ ಬಾಗಿಲು" ಎಂದು ಹೆಸರಿಟ್ಟಿದ್ದರು. ಒನಕೆ ಓಬವ್ವನನ್ನು ಕನ್ನಡ ನಾಡಿನ ವೀರವನಿತೆಯರಾದ ಕಿತ್ತೂರು ಚೆನ್ನಮ್ಮ, ರಾಣಿ ಅಬ್ಬಕ್ಕರ ಸಾಲಿನಲ್ಲಿ ಪರಿಗಣಿಸಲಾಗುತ್ತದೆ. ಓಬವ್ವ ಕೇವಲ ವ್ಯಕ್ತಿಯಲ್ಲ, ಒಂದು ಶಕ್ತಿಪುಂಜ. ಮಹಿಳೆಯರು ಅವರ ಆದರ್ಶಗಳನ್ನು ಪಾಲಿಸುವ ಮೂಲಕ ನಾಡಿನ ರಕ್ಷಣೆಗೆ ಪಣತೊಡಬೇಕು ಎಂದರು.

ಕಾರ್ಯಕ್ರಮದಲ್ಲಿ ವಿವಿಧ ಗಣ್ಯರಿಗೆ ಸನ್ಮಾನಿಸಲಾಯಿತು ಹಾಗೂ ಬಳ್ಳಾರಿಯ ಎಸ್.ಲಕ್ಷ್ಮಿ ಪವನ್ ಕುಮಾರ್ ಸಂಗಡಿಗರು ಸುಗಮ ಸಂಗೀತ ಪ್ರಸ್ತುತ ಪಡಿಸಿದರು.

ಈ ಸಂದರ್ಭದಲ್ಲಿ ಛಲವಾದಿ ಮಹಾಸಭಾ ಜಿಲ್ಲಾ ಘಟಕದ ಅಧ್ಯಕ್ಷ ಸಿ.ಶಿವಕುಮಾರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿವೃತ್ತ ಉಪನಿರ್ದೇಶಕ ಚೋರನೂರು ಕೊಟ್ರಪ್ಪ, ಭಾರತೀಯ ಬೌದ್ಧ ಮಹಾಸಭಾ ಬಳ್ಳಾರಿ ಜಿಲ್ಲಾ ಘಟಕದ ಅಧ್ಯಕ್ಷರಾದ ಕಮಲರತ್ನ ಬಂತೇಜಿ, ಸರಳಾದೇವಿ ಕಾಲೇಜಿನ ನಿವೃತ್ತ ಪ್ರಾಂಶುಪಾಲ ಸಿ.ಸೋಮನಾಥ, ದಲಿತ ರಕ್ಷಣಾ ವೇದಿಕೆ ಕಾರ್ಯದರ್ಶಿ ಶಂಕರ್ ನಂದಿಹಾಳ್, ಹಿರಿಯ ಪತ್ರಕರ್ತ ಸಿ.ಮಂಜುನಾಥ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಸೇರಿದಂತೆ ಸಮಾಜದ ಮುಖಂಡರು ಹಾಗೂ ವಿದ್ಯಾರ್ಥಿಗಳು ಇತರರು ಉಪಸ್ಥಿತರಿದ್ದರು.

## ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

**ರಾಮನಗರ** : ಜಿಲ್ಲೆಯ ಕರ್ನಾಟಕ ಕ್ರಿಶ್ಚಿಯನ್ ಸಮುದಾಯ ಅಭಿವೃದ್ಧಿ ನಿಗಮದ (ನಿ) ವತಿಯಿಂದ 2025–26ನೇ ಸಾಲಿಗೆ ಕ್ರಿಶ್ಚಿಯನ್ ಜನಾಂಗದವರಿಗೆ ವಿವಿಧ ಯೋಜನೆಯಡಿ ನಿಗಮದಿಂದ ಸಾಲ ಹಾಗೂ ಸಹಾಯಧನ ಸೌಲಭ್ಯಗಳನ್ನು ನೀಡಲು ಆನ್‌ಲೈನ್‌ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ.

ಸ್ವಾವಲಂಬಿ ಸಾರಥಿ ಯೋಜನೆ, ಶ್ರಮಶಕ್ತಿ ಸಾಲ ಯೋಜನೆ, ವೃತ್ತಿಪ್ರೋತ್ಸಾಹ ಯೋಜನೆ, ನೇರಸಾಲ ಯೋಜನೆ ಹಾಗೂ ವಿದೇಶಿ ವಿದ್ಯಾಭ್ಯಾಸ ಸಾಲ ಯೋಜನೆಗೆ ಅರ್ಜಿ ಸಲ್ಲಿಸಬಹುದು.

ಅರ್ಜಿಯನ್ನು https://kccdclonline.karnataka.gov.in/portal/schmesList ಮೂಲಕ ನ.29ರೊಳಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗೆ ಜಿಲ್ಲಾ ವ್ಯವಸ್ಥಾಪಕರ ಕಚೇರಿ, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ (ನಿ),

ಕೊಠಡಿ ಸಂಖ್ಯೆ: 404, 3ನೇ ಮಹಡಿ, ಜಿಲ್ಲಾಧಿಕಾರಿಗಳ ಕಚೇರಿ ಸಂಕೀರ್ಣ, ಬೆಂಗಳೂರು ದಕ್ಷಿಣ ಜಿಲ್ಲೆ, ರಾಮನಗರ ಈ ಕಚೇರಿಯನ್ನು ಸಂಪರ್ಕಿಸುವಂತೆ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉಪ ಪ್ರಧಾನ ಕಾನೂನು ಅಭಿರಕ್ಷರ ನೇಮಕಕ್ಕೆ ಅರ್ಜಿ ಆಹ್ವಾನ

**ಚಿತ್ರದುರ್ಗ:** ಚಿತ್ರದುರ್ಗ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಕಚೇರಿಯಲ್ಲಿನ 2 ಕಾನೂನು ನೆರವು ಉಪ ಪ್ರಧಾನ ಕಾನೂನು ಅಭಿರಕ್ಷರು (Deputy Legal Aid Defense Counsel) ನೇಮಕಕ್ಕೆ ಅರ್ಜಿ ಆಹ್ವಾನಿಸಲಾಗಿದೆ.ಅರ್ಜಿ ಸಲ್ಲಿಸುವವರು ಅಪರಾಧಿಕ ಕಾನೂನುಗಳ ಬಗ್ಗೆ ಅತ್ಯುತ್ತಮ ಜ್ಞಾನ, ಸಂವಹನ ಕೌಶಲ್ಯ,20 ಕ್ರಿಮಿನಲ್ ಪ್ರಕರಣಗಳ ವಿಚಾರಣೆ ನಡೆಸಿದ ಹಾಗೂ 7 ವರ್ಷ ಸೇವಾ ಅನುಭವ ಹೊಂದಿರಬೇಕು. ಇದರೊಂದಿಗೆ ಕೆಲಸಕ್ಕೆ ಅಗತ್ಯ ಇರುವ ಐಟಿ ಜ್ಞಾನ ಬಲ್ಲವರಾಗಿರಬೇಕು. ಆಯ್ಕೆಯಾದವರಿಗೆ ಮಾಸಿಕ ರೂ.45,000 ಗೌರವಧನ ನೀಡಲಾಗುವುದು.ಆಸಕ್ತರು ನಿಗದಿತ ಅರ್ಜಿ ನಮೂನೆಯಲ್ಲಿ ಸ್ವ ಅಕ್ಷರದಲ್ಲಿ ತಮ್ಮ ವೈಯಕ್ತಿಕ ವಿವರ ಭರ್ತಿ ಮಾಡಿ, ಇದೇ ನವೆಂಬರ್ 20 ಸಂಜೆ 6 ಗಂಟೆಯ ಒಳಗೆ ಜಿಲ್ಲಾ ಕಾನೂನು ಸೇವಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳ ಕಚೇರಿಗೆ ಅರ್ಜಿ ಸಲ್ಲಿಸುವಂತೆ ಪ್ರಕಟಣೆ ತಿಳಿಸಿದೆ.

## ಸಿಪೆಟ್: ವೃತ್ತಿಪರ ತರಬೇತಿಗೆ ಅರ್ಜಿ ಆಹ್ವಾನ

**ಚಿತ್ರದುರ್ಗ:** ಕರ್ನಾಟಕ ಸರ್ಕಾರದ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಕೈಗಾರಿಕಾ ಮತ್ತು ವಾಣಿಜ್ಯ ನಿರ್ದೇಶನಾಲಯ ಹಾಗೂ ಕಾರ್ಪೋರೇಟ್ ಸಾಮಾಜಿಕ ಜವಾಬ್ದಾರಿ ಯೋಜನೆಯಡಿ ಪಾಲಿಮರ್ ಮತ್ತು ಪ್ಲಾಸ್ಟಿಟ್ ಕ್ಷೇತ್ರದಲ್ಲಿ ಉಚಿತ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ. ಭಾರತ ಸರ್ಕಾರದ ಕೇಂದ್ರಿಯ ಪೆಟ್ರೋಕೆಮಿಕಲ್ಸ್ ತಂತ್ರಜ್ಞಾನ ಸಂಸ್ಥೆ ವತಿಯಿಂದ ಮೈಸೂರಿನ ಸಿಪನಲ್ಲಿ ಎಲ್ಲಾ ವರ್ಗದ ಬಡ ನಿರುದ್ಯೋಗಿ ಯುವಕ ಹಾಗೂ ಯುವಕರಿಗೆ ಪಾಲಿಮರ್ ತಂತ್ರಜ್ಞಾನದಲ್ಲಿ 3 ರಿಂದ 6 ತಿಂಗಳ ಉಚಿತ ತರಬೇತಿಗಳನ್ನು ನೀಡಲಾಗುತ್ತಿದೆ. 18 ರಿಂದ 35 ವರ್ಷದೊಳಗಿನ, 2.5 ಲಕ್ಷದೊಳಗಿನ ಕುಟುಂಬ ಆದಾಯ ಹೊಂದಿರುವ 10 ತರಗತಿ ಉತ್ತೀರ್ಣರಾದ ವಿದ್ಯಾರ್ಥಿಗಳು ತರಬೇತಿ ಪಡೆಯಬಹುದಾಗಿದೆ. ಪ್ಲಾಸ್ಟಿಕ್ ಪ್ರೊಸೆಸಿಂ\ನಲ್ಲಿ ಅಸಿಸ್ಟೆಂಟ್ ಮೆಷಿನ್ ಅಪರೇಟರ್, ಮೆಷಿನ್ ಅಪರೇಟರ್ ಇಂಜಕ್ಷನ್ ಮೋಲ್ಡಿಂಗ್, ಮೆಷಿನ್ ಆಪರೇಟರ್ ಮತ್ತು ಪ್ರೋಗ್ರಾಗಳಿಗೆ ಕೌಶಲದ ತರಬೇತಿ ನೀಡಲಾಗುವುದು, ತರಬೇತಿ ನಂತರ ಉದ್ಯೋಗಾವಕಾಶವನ್ನು ಕಲ್ಪಿಸಿ ಕೊಡಲಾಗುವುದು.

# 2013ರಲ್ಲಿ ಸಿದ್ದರಾಮಯ್ಯ ಹುಲಿಯಾ, ಈಗ ಇಲಿಯಾ: ಪ್ರತಾಪ್ ಸಿಂಹ ವ್ಯಂಗ್ಯ



**ಮೈಸೂರು:** ರಾಹುಲ್ ಗಾಂಧಿ ಸಿದ್ದರಾಮಯ್ಯ ಮುಂದೆ ಬಚ್ಚಾ ಆದರೆ, ದೆಹಲಿಯಲ್ಲಿ ಅವರ ಭೇಟಿಗಾಗಿ ಸಿಎಂ ಕಾಯಿತ್ತಿರೋದು ಬೇಸರ ತಂದಿದೆ ಎಂದು ಮಾಜಿ ಸಂಸದ ಪ್ರತಾಪ್ ಸಿಂಹ ಅವರು ಮಾತನಾಡಿದರು. ಜೊತೆಗೆ ದೆಹಲಿಯಲ್ಲಿ ಕಾರು ಸ್ಫೋಟವಾದ ಪ್ರಕರಣದ ಬಗ್ಗೆ ಆಕ್ರೋಶ ವ್ಯಕ್ತಪಡಿಸಿದರು.

ಸಿದ್ದರಾಮಯ್ಯನವರು ದೆಹಲಿಯಲ್ಲಿ ರಾಹುಲ್ ಗಾಂಧಿ ಭೇಟಿಗೆ ಅವಕಾಶ ಸಿಗದೆ ಕಾಯಬೇಕಾದ ಪರಿಸ್ಥಿತಿ ಬಂದಿರುವುದು ಕನ್ನಡಿಗನಾಗಿ, ಮೈಸೂರಿನವನಾಗಿ ನನಗೆ ಬೇಸರ ತರಿಸಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಈ ದೈನೇಸಿ ಸ್ಥಿತಿ ಬರಬಾರದಿತ್ತು ಎಂದು ಅವರು ಮೈಸೂರಿನಲ್ಲಿ ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

2013ರಲ್ಲಿ ಸಿದ್ದರಾಮಯ್ಯ ಹುಲಿಯಾಗಿದ್ದರು. ಈಗ ಇಲಿಯಾಗಿದ್ದಾರೆ. ಹಿಂದೆ ಇಂದಿರಾಗಾಂಧಿ, ಸೋನಿಯಾ ಗಾಂಧಿಯವರನ್ನೇ ಟೀಕಿಸುತ್ತಿದ್ದ ಸಿದ್ದರಾಮಯ್ಯ, ಇಂದು ಅವರ ಮೊಮ್ಮಗನ ಪಾದಪೂಜೆ ಮಾಡಲು ಸಿದ್ಧವಾಗಿರುವುದು ನೋವಿನ ಸಂಗತಿ. ಸಿದ್ದರಾಮಯ್ಯನವರ ಮುಂದೆ ರಾಹುಲ್ ಗಾಂಧಿ ಒಬ್ಬ ಬಚ್ಚಾ. ಅಂಥವನ ಭೇಟಿಗಾಗಿ ಗೇಟ್‌ನಲ್ಲಿ ಕಾಯುತ್ತಿರುವುದು ನಮಗೆ ಬೇಸರ ತರಿಸಿದೆ ಎಂದು ಪ್ರತಾಪ್ ಸಿಂಹ ವ್ಯಂಗ್ಯವಾಡಿದರು.

# ಮತಗಟ್ಟೆ ಏಜೆಂಟರ ನೇಮಕಾತಿ ನಿಯಮಗಳನ್ನು ರಹಸ್ಯವಾಗಿ ತಿದ್ದುಪಡಿ ಮಾಡಿದೆ: ಟಿಎಂಸಿ ಆರೋಪ



**ನವದೆಹಲಿ:** ಪಶ್ಚಿಮ ಬಂಗಾಳದಲ್ಲಿ ನಡೆಯುತ್ತಿರುವ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯ ನಡುವೆಯೇ, ಚುನಾವಣಾ ಆಯೋಗವು ಮತಗಟ್ಟೆ ಮಟ್ಟದ ಏಜೆಂಟರ ನೇಮಕಾತಿ ನಿಯಮಗಳನ್ನು ರಹಸ್ಯವಾಗಿ ತಿದ್ದುಪಡಿ ಮಾಡಿದೆ ಎಂದು ತೃಣಮೂಲ ಕಾಂಗ್ರೆಸ್ ಆರೋಪಿಸಿದೆ. ಈ ಬಗ್ಗೆ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಟಿಎಂಸಿ, ಚುನಾವಣಾ ಆಯೋಗವು ರಹಸ್ಯವಾಗಿ ಮತ್ತು ಕುತಂತ್ರದಿಂದ ಮತಗಟ್ಟೆ ಮಟ್ಟದ ಏಜೆಂಟರ ನೇಮಕಾತಿ ನಿಯಮಗಳನ್ನು ತಿದ್ದುಪಡಿ ಮಾಡಿದೆ" ಎಂದು ಹೇಳಿದೆ.

ಹಿಂದೆ, 2023 ರ ಚುನಾವಣಾ ಆಯೋಗದ ಮಾರ್ಗಸೂಚಿಗಳ ಪ್ರಕಾರ, ಬಿಎಲ್‌ಎ ನೇಮಕಗೊಳ್ಳುವ ಮತಗಟ್ಟೆಯ ಮತದಾರರ ಪಟ್ಟಿಯಲ್ಲಿ ಆ ವ್ಯಕ್ತಿ ನೋಂದಾಯಿತ ಮತದಾರನಾಗಿರಬೇಕು ಎಂದು ಟಿಎಂಸಿ ತಿಳಿಸಿದೆ. ಆದರೆ, ಈಗ ತಿದ್ದುಪಡಿ ಮಾಡಲಾದ ಹೊಸ ಸೂಚನೆಯು, "ಮತದಾರರ ಪಟ್ಟಿಯ ಅದೇ ಭಾಗದಿಂದ ಮತಗಟ್ಟೆ ಮಟ್ಟದ ಏಜೆಂಟರು ಲಭ್ಯವಿಲ್ಲದಿದ್ದರೆ, ಅದೇ ವಿಧಾನಸಭಾ ಕ್ಷೇತ್ರದ ಯಾವುದೇ ನೋಂದಾಯಿತ ಮತದಾರರಿಂದ ಮತಗಟ್ಟೆ ಮಟ್ಟದ ಏಜೆಂಟರನ್ನು ನೇಮಿಸಬಹುದು" ಎಂದು ಹೇಳುತ್ತದೆ.

# ವ್ಯಾನಿಟಿ ಬ್ಯಾಗ್‌ನಲ್ಲಿದ್ದ 1.11 ಲಕ್ಷ ರೂ.ಮೌಲ್ಯದ ಚಿನ್ನಾಭರಣ ಕಳವು

**ಕಲಬುರಗಿ:** ಮಹಿಳೆಯೊಬ್ಬರ ವ್ಯಾನಿಟಿ ಬ್ಯಾಗ್‌ನಲ್ಲಿದ್ದ 1.11 ಲಕ್ಷ ರೂ.ಮೌಲ್ಯದ ಚಿನ್ನಾಭರಣ ಕಳವಾಗಿರುವ ಘಟನೆ ನಗರದ ಸಿಟಿ ಬಸ್ ನಿಲ್ದಾಣದಲ್ಲಿ ನಡೆದಿದೆ.

ನಗರದ ಕೊಠಾರಿ ಭವನ ಹಿಂದುಗಡೆಯ ಮಹಾವೀರ ನಗರದ ಶೋಭಾ ಪಾಟೀಲ ಎಂಬುವವರೆ ಚಿನ್ನಾಭರಣ ಕಳೆದುಕೊಂಡಿದ್ದಾರೆ.

ಇವರು ಸಂಬಂಧಿಕರ ಮದುವೆ ಸಮಾರಂಭಕ್ಕೆಂದು ತಮ್ಮ ಊರಿಗೆ ಹೋಗಲು ಆಟೋದಲ್ಲಿ ರೈಲ್ವೆ ಸಿಟಿ ಬಸ್ ನಿಲ್ದಾಣಕ್ಕೆ ಬಂದಿದ್ದಾರೆ.

# ಯುವಜನತೆ ಮಾದರಿಯಾಗಿ ಬಾಳಬೇಕು : ನ್ಯಾ. ಹನುಮಂತಪ್ಪ



**ಚಿಕ್ಕಮಗಳೂರು:** ಯುವಜನತೆ ತಮ್ಮ ಹೆತ್ತವರು, ಶಿಕ್ಷಕರು ಮತ್ತು ಉಪನ್ಯಾಸಕರನ್ನು ಬದುಕಿನ ಮಾದರಿಯನ್ನಾಗಿ ಮಾಡಿಕೊಳ್ಳಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶ ಹನುಮಂತಪ್ಪ ಸಲಹೆ ಮಾಡಿದರು.

ನಗರದ ಮಲೆನಾಡು ವಿದ್ಯಾಸಂಸ್ಥೆಯ ಎಂ.ಎಸ್.ಪದ್ಮಾವತಮ್ಮ, ಎಂ.ಕೆ.ಸಾಂಬಶಿವ ಶೆಟ್ಟಿ ಪ್ರಥಮದರ್ಜೆ ಕಾಲೇಜಿನಲ್ಲಿ ವಿವಿಧ ವಿದ್ಯಾರ್ಥಿ ಸಂಘಗಳನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇತ್ತೀಚಿನ ವರ್ಷಗಳಲ್ಲಿ ನಮ್ಮ ಯುವಜನತೆ ಸಿನಿಮಾ ನಟರನ್ನು ತಮ್ಮ ಬದುಕಿನ ಮಾದರಿಯನ್ನಾಗಿ ಮಾಡಿಕೊಳ್ಳುತ್ತಿರುವುದು ದುರಾದೃಷ್ಟಕರ ಎಂದ ಅವರು, ಸಿನಿಮಾ ನಟರು ನಿಮ್ಮ ಹೀರೋಗಳಲ್ಲ, ಅವರು ಕೇವಲ ನಟರು ಮಾತ್ರ, ನಿಮ್ಮನ್ನು ತಿದ್ದಿ, ತೀಡಿ, ನಿಮ್ಮ ಭವಿಷ್ಯವನ್ನು ರೂಪಿಸುವ, ನಿಮ್ಮ ಹೆತ್ತವರು, ಶಿಕ್ಷಕರು ಮತ್ತು ಉಪನ್ಯಾಸಕರೇ ನಿಮ್ಮ ನಿಜವಾದ ಹೀರೋಗಳು ಎಂದು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.

ಎಷ್ಟೋ ಸಿನಿಮಾ ನಟರುತಮ್ಮ ನಿಜ ಜೀವನದಲ್ಲಿ ಖಳನಾಯಕರಂತೆ ಬದುಕುತ್ತಿರುವುದು, ಅಪರಾಧಗಳಲ್ಲಿ ಭಾಗಿಯಾಗಿ ಜೈಲು ಸೇರುತ್ತಿರುವುದು ಎಲ್ಲೆಡೆ ಕಂಡುಬರುತ್ತಿರುವುದು ಸಾಮಾನ್ಯ ಸಂಗತಿಯಾಗಿದೆ, ಇದನ್ನು ಯುವಜನತೆ ಅರ್ಥಮಾಡಿಕೊಳ್ಳಬೇಕು. ತಮಗೆ ತಾವೇ ಹೀರೋಗಳಾಗಬೇಕು. ಸಮಾಜಕ್ಕೆ ಮಾದರಿಯಾಗಿ ಬಾಳಬೇಕು ಎಂದು ಸಲಹೆ ಮಾಡಿದರು.

ವಿದ್ಯಾರ್ಥಿ ಸಂಘಗಳ ಪದಾಧಿಕಾರಿಗಳಿಗೆ ವಿದ್ಯಾರ್ಥಿಗಳನ್ನು ಶೈಕ್ಷಣಿಕವಾಗಿ ಮುನ್ನಡೆಸುವ ಜವಾಬ್ದಾರಿ ಇದೆ, ಅದನ್ನು ಅರಿತು ನಡೆಯಬೇಕು, ತಮ್ಮ ಶಾಲೆ, ಕಾಲೇಜುಗಳ ಕೀರ್ತಿಯನ್ನು ಹೆಚ್ಚಿಸುವ ಕೆಲಸ ಮಾಡಬೇಕು ಎಂದು ತಿಳಿಸಿದರು.

ಈ ವೇಳೆ ಕಾನೂನು ಮತ್ತು ಕಾಯ್ದೆಗಳ ಕುರಿತು ವಿದ್ಯಾರ್ಥಿಗಳಿಗೆ ವಿವರಿಸಿದ ನ್ಯಾಯಾಧೀಶರು, ವಿದ್ಯಾರ್ಥಿ ದೆಸೆಯಲ್ಲಿ ಪ್ರೀತಿ, ಪ್ರೇಮ, ಸೇರಿದಂತೆ ಯಾವುದೇ ಆಕರ್ಷಣೆಗಳಿಗೆ ಒಳಗಾಗಿ ಅಡ್ಡದಾರಿಯನ್ನು ಹಿಡಿಯಬಾರದು, ವಿದ್ಯಾರ್ಥಿ ಜೀವನದಲ್ಲಿ ಎಡವಿದರೆ ನಿಮ್ಮ ಬದುಕು ಪ್ರಪಾತದತ್ತ ಸಾಗುತ್ತದೆ, ಭವಿಷ್ಯ ಹಾಳಾಗುತ್ತದೆ ಎಂದು ಎಚ್ಚರಿಸಿದರು.

ಸಂವಿಧಾನದ ಆಶಯಗಳನ್ನು ಈಡೇರಿಸುವ ಮಹತ್ತರವಾದ ಜವಾಬ್ದಾರಿ ಯುವಜನತೆಯ ಮೇಲಿದೆ, ಆ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಚಿಂತನೆ ನಡೆಸಬೇಕು, ಸಂವಿಧಾನದ ಆಶಯಗಳ ಈಡೇರಿ-ಕೆಗೆ ಮುಂದಾಗಬೇಕು ಎಂದು ತಿಳಿಸಿದರು.

ಆಶಾಕಿರಣ ಅಂಧಮಕ್ಕಳ ಶಾಲೆಯ ಅಧ್ಯಕ್ಷ ಡಾ.ಜೆ.ಪಿ. ಕೃಷ್ಣೇಗೌಡ ಮಾತನಾಡಿ, ವಿದ್ಯಾರ್ಥಿಗಳು ಆರೋಗ್ಯದ ಬಗ್ಗೆ ಕಾಳಜಿ ವಹಿಸಬೇಕು, ಶಿಸ್ತು, ಸೇವಾ ಮನೋಭಾವವನ್ನು ಮೈಗೂಡಿಸಿಕೊಳ್ಳಬೇಕು ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಪ್ರಾಂಶುಪಾಲೆ ಪ್ರೊ, ಹಸೀನಾ ಬಾನು ವಿದ್ಯಾರ್ಥಿಗಳಲ್ಲಿ ಶಿಸ್ತು, ಸೇವೆ ಮತ್ತು ನಾಯಕತ್ವ ಗುಣಗಳನ್ನು ಬೆಳೆಸುವ ನಿಟ್ಟಿನಲ್ಲಿ ಕಾಲೇಜಿನಲ್ಲಿ ವಿವಿಧ ವಿದ್ಯಾರ್ಥಿ ಸಂಘಗಳನ್ನು ಸ್ಥಾಪಿಸಲಾಗಿದೆ ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಮಲೆನಾಡು ವಿದ್ಯಾಸಂಸ್ಥೆಯ ಉಪಾಧ್ಯಕ್ಷೆ ರಾಧಾ ಸುಂದರೇಶ್ ವಿದ್ಯಾರ್ಥಿ ಸಂಘಗಳ ಪದಾಧಿಕಾರಿಗಳು ವಿದ್ಯಾರ್ಥಿ ಸಮುದಾಯವನ್ನು ಮುನ್ನಡೆಸುವ ಕೆಲಸ ಮಾಡಬೇಕು, ಕಾಲೇಜಿನ ಕೀರ್ತಿಯನ್ನು ಹೆಚ್ಚಿಸಬೇಕು ಎಂದು ಹೇಳಿದರು.

ವಿವಿಧ ಪರೀಕ್ಷೆಗಳಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಸಮಾರಂಭದಲ್ಲಿ ಪ್ರತಿಭಾ ಪುರಸ್ಕಾರ ಮಾಡಲಾಯಿತು, ಕ್ರೀಡೆಗಳಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ವಿದ್ಯಾರ್ಥಿ ಸಂಘಗಳ ಪದಾಧಿಕಾರಿಗಳಿಗೆ ಪ್ರತಿಜ್ಞಾವಿಧಿ ಭೋದಿಸಲಾಯಿತು, ಮಲೆನಾಡು ವಿದ್ಯಾಸಂಸ್ಥೆಯ ಪದ ನಿಮಿತ್ತ ಸದಸ್ಯ ಎಂ.ಎಂ. ಗೌತಮ್, ಶೈಕ್ಷಣಿಕ ಸಲಹೆಗಾರ ಕೆ.ಎನ್.ಮಂಜುನಾಥ ಭಟ್, ಕಚೇರಿ ವ್ಯವಸ್ಥಾಪಕಿ ಶ್ರೀಲಕ್ಷ್ಮಿ, ಉಪನ್ಯಾಸಕರ ಬಿ.ಆರ್.ವೀರಣ್ಣಗೌಡ ,ರಾಮಿಯಾ ಬರೀನ್, ವಿದ್ಯಾರ್ಥಿಗಳಾದ ಸಿ. ಎಂ. ಪ್ರಜಿತ್ ವಿಭಾ, ಲಾವಣ್ಯ, ಚೇತನ್, ಶ್ರೀನಿಧಿ ಉಪಸ್ಥಿತರಿದ್ದರು.

# ನಿಗದಿತ ಸಮಯದಲ್ಲಿ ಅರ್ಜಿಗಳ ವಿಲೇವಾರಿಗೆ ಕೃಷ್ಣ ಬೈರೇಗೌಡ ಸೂಚನೆ



**ಹಾಸನ:** ಕಾನೂನು ಚೌಕಟ್ಟಿನಲ್ಲಿ ಅರ್ಜಿಗಳನ್ನು ನಿಗದಿತ ಸಮಯದಲ್ಲಿ ವಿಲೇ ವಾರಿ ಮಾಡಲು ಕ್ರಮ ವಹಿಸುವಂತೆ ಕಂದಾಯ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೃಷ್ಣಬೈರೇಗೌಡ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಚನ್ನರಾಯಪಟ್ಟಣ ತಾಲ್ಲೂಕು ಕಚೇರಿಯ ಆವರಣದಲ್ಲಿಂದು ಆಯೋಜಿಸಲಾಗಿದ್ದ ಜನಸ್ಪಂದನಾ ಹಾಗೂ ಸಾರ್ವಜನಿಕ ಕುಂದುಕೊರತೆ ಸಭೆಯಲ್ಲಿ ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಮಾಡಿ ಮಾತನಾಡಿದ ಅವರು ಎಲ್ಲಾ ಅರ್ಜಿಗಳಿಗೂ ಒಂದೇ ರೂಪದಲ್ಲಿ ಪರಿಹಾರ ನೀಡಲು ಸಾಧ್ಯವಿಲ್ಲ ಎಂದ ಸಚಿವರು ಬೋರವೆಲ್‌ಗೆ ಸಂಬಂಧಿಸಿದಂತೆ ಶಾಸಕರ ವ್ಯಾಪ್ತಿಗೆ ಬರುತ್ತದೆ, ಮನೆ ಮಂಜೂರು ಗ್ರಾಮ ಪಂಚಾಯಿತಿ ಸಮಿತಿ ಬರುತ್ತದೆ. ಸ್ವೀಕೃತವಾದ ಇಂತಹ ಅರ್ಜಿಗಳನ್ನು ಸಂಬಂಧಿಸಿದವರಿಗೆ ಕಳುಹಿಸ ಲಾಗುವುದು ಎಂದು ತಿಳಿಸಿದರು.

ಸ್ವೀಕಾರವಾದ ಅರ್ಜಿಗಳಲ್ಲಿ ಸಾಧ್ಯವಿರುವ ಕೆಲವು ಅರ್ಜಿಗಳಿಗೆ ಸ್ಥಳದಲ್ಲಿ ಪರಿಹಾರ ಒದಗಿಸಲಾಗುತ್ತದೆ ಉಳಿದವುಗಳ ವಿಲೇವಾರಿಗೆ ಹೆಚ್ಚಿನ ಆದ್ಯತೆ ನೀಡಿ ಪರಿಹಾರ ಒದಗಿಸಲು ಅಧಿಕಾರಿಗಳಿಗೆ ತಾಕೀತು ಮಾಡಿದರು.

ಅರ್ಜಿಗಳನ್ನು ಸ್ವೀಕರಿಸಿ ಸ್ಥಳೀಯ ಸಮಸ್ಯೆಗಳನ್ನು ಅರ್ಥ ಮಾಡಿಕೊಂಡು ಪರಿಹಾರಕ್ಕೆ ಪ್ರಯತ್ನಿಸಲು ಸಹಕಾರಿ ಆಗುತ್ತದೆ ಎಂದು ಸಚಿವರು ತಿಳಿಸಿದರು.

ಕಾನೂನು ಚೌಕಟ್ಟಿನಲ್ಲಿರು ವುದನ್ನು ಪರಿಹಾರ ಮಾಡಲಾಗುವುದು, ಉಳಿದ ಸಮಸ್ಯೆಗಳನ್ನು ಬಗೆಹರಿಸಲು ಸಮಯ ತೆಗೆದುಕೊಳ್ಳುತ್ತದೆ. ಪರಿಹಾರ ದೊರಕಿಸಲು ಪ್ರಯತ್ನಿಸಲಾಗುವುದು ಎಂದು ತಿಳಿಸಿದರು.

ಹೆಚ್ಚು ಅರ್ಜಿಗಳು ದುರಸ್ತಿಗೆ ಸಂಬಂಧಿಸಿದಂತೆ ಬರುತ್ತವೆ. ಕಳೆದ ಐದು ವರ್ಷಗಳಲ್ಲಿ ಕೇವಲ 500 ಪ್ರಕರಣ ದುರಸ್ತಿ ಮಾಡಲಾಗಿದೆ 2025 ರಲ್ಲಿ 25000 ಪ್ರಕರಣ ದುರಸ್ತಿಗೆ ಕ್ರಮವಹಿಸಿದ್ದು, ಈಗಾಗಲೇ 13-14 ಸಾವಿರ ಪ್ರಕರಣಗಳು ದುರಸ್ತಿ ಮಾಡಲಾಗಿದೆ ಎಂದು ತಿಳಿಸಿದರು.

ನಕಾಶೆಯಲ್ಲಿ ರಸ್ತೆ ಇದ್ದರೆ ಮುಲಾಜಿಲ್ಲದೆ ತೆರವುಗೊಳಿಸಿ ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ದುರಸ್ತಿಯಾದ ನಂತರ ಇಂಡೀಕರಣ ಆಗಬೇಕು ಇದರ ಬಗ್ಗೆ ಅರ್ಜಿಗಳು ಬರುತ್ತಿವೆ. ಇವುಗಳ ಬಗ್ಗೆ ಹೆಚ್ಚಿನ ಗಮನ ಹರಿಸಿ ಪಟ್ಟಿಮಾಡಿ ಎಂದು ಅಧಿಕಾರಿಗಳಿಗೆ ಸೂಚಿಸಿದರು.

ತಾಲ್ಲೂಕು ವಸತಿ ಪ್ರದೇಶಗಳಿಗೆ ಕುರಿತಂತೆ ದಾಖಲೆ ಇರುವುದು ಮತ್ತು ಇಲ್ಲದಿರುವ ಬಗ್ಗೆ ತಹಸೀಲ್ದಾರ್ ಮತ್ತು ಕಾರ್ಯನಿರ್ವಾಹಕ ಅಧಿಕಾರಿಗಳು ಪರಿಶೀಲನೆ ಮಾಡುವಂತೆ ಸೂಚಿಸಿದರು.

ಧಾರ್ಮಿಕ ದತ್ತಿ ಇಲಾಖೆಗೆ ಒಳಪಡುವ ದೇವಸ್ಥಾನದ ಜಾಗ ಬಂದುಬಸ್ತು ಮಾಡಿಸಲು ಕ್ರಮವಹಿಸುವಂತೆ ಸೂಚಿಸಿದರು.

ಸಾರ್ವಜನಿಕರು ಖುದ್ದು ಹಾಜರಾಗಿ ಮನವಿಗಳನ್ನು ನೀಡಲು ತೆರೆಯಲಾದ ಕೌಂಟರ್‌ಗಳಲ್ಲಿ ಅರ್ಜಿಗಳನ್ನು ದಾಖಲಿಸಿಕೊಂಡು ಟೋಕನ್ ನಂಬರ್‌ಗಳನ್ನು ಸ್ವೀಕರಿಸಿ ತಮ್ಮ ಅಹವಾಲನ್ನು ಸಲ್ಲಿಸಿದರು ಒಟ್ಟು 786 ಅರ್ಜಿಗಳನ್ನು ಸ್ವೀಕರಿಸಲಾಯಿತು.

# ಮಲ್ಲಿಕಾರ್ಜುನ ಖರ್ಗೆ ಮನೆ ಮುಂದೆ ನಿಂತು ಡಿಕೆಶಿಗೆ ಸಂದೇಶ ಕೊಟ್ಟ ಜಮೀರ್ ಅಹ್ಮದ್ ಖಾನ್



**ಬೆಂಗಳೂರು:** ರಾಜ್ಯ ಕಾಂಗ್ರೆಸ್‌ನಲ್ಲಿ ನಾಯಕತ್ವ ಬದಲಾವಣೆಯ ಚರ್ಚೆಯ ನಡುವೆ ಸಚಿವ ಜಮೀರ್ ಅಹ್ಮದ್ ಖಾನ್ ನೀಡಿರುವ ಹೇಳಿಕೆ ಸಾಕಷ್ಟು ಚರ್ಚೆಗೆ ಒಳಗಾಗುತ್ತಿದೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮನೆ ಮುಂದೆ ನಿಂತು ಡಿಕೆ ಶಿವಕುಮಾರ್ ಅವರಿಗೆ ಸಚಿವ ಜಮೀರ್ ಅಹ್ಮದ್ ಖಾನ್ ಸಂದೇಶ ನೀಡಿದ್ದಾರೆ. ಜಮೀರ್ ಈ ಮೂಲಕ ಸಿದ್ದರಾಮಯ್ಯ ಅವರ ಪರವಾಗಿ ಭರ್ಜರಿ ಬ್ಯಾಟಿಂಗ್ ಮಾಡದ್ದಾರೆ.

ಬುಧವಾರ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿದ ಜಮೀರ್ ಅಹ್ಮದ್ ಖಾನ್, ರಾಜ್ಯದಲ್ಲಿ ಸಿಎಂ ಖುರ್ಚಿ ಖಾಲಿ ಇಲ್ಲ. ಎಐಸಿಸಿ ಅಧ್ಯಕ್ಷರ ಮನೆ ಮುಂದೆ ನಿಂತು ಹೇಳುತ್ತಿದ್ದೇನೆ, ಸಿಎಂ ಬದಲಾವಣೆ ಇಲ್ಲ. ಐದು ವರ್ಷವೂ ಸಿದ್ದರಾಮಯ್ಯ ಸಿಎಂ ಆಗಿರ್ತಾರೆ ಎಂದರು.

ಸಿಎಂ ಖುರ್ಚಿ ಈಗ ಖಾಲಿ ಇಲ್ಲ ಹಾಗೂ ಕೆಪಿಸಿಸಿ ಅಧ್ಯಕ್ಷ ಸ್ಥಾನವೂ ಖಾಲಿ ಇಲ್ಲ. ಡಿಕೆಶಿವಕುಮಾರ್ ಅಧ್ಯಕ್ಷರಾಗಿದ್ದಾರೆ ಹಾಗಾಗಿ ಆ ಕುರ್ಚಿ ಕೂಡ ಖಾಲಿ ಇಲ್ಲ. ಸಿಎಂ ಆಗಬೇಕು ಎಂಬ ಆಸೆ ಸಹಜ. ಆದರೆ 2028 ರಲ್ಲ ಡಿಕೆ ಶಿವಕುಮಾರ್ ಸಿಎಂ ಆಗಲಿ. ಡಿಕೆ ಶಿವಕುಮಾರ್ ಕಷ್ಟಪಟ್ಟಿದ್ದಾರೆ ಪಕ್ಷಕ್ಕಾಗಿ. ಅವರೂ ಸಿಎಂ ಆಗಬೇಕು ಆದರೆ 2028 ಕ್ಕೆ ಸಿಎಂ ಆಗಲಿ ಎಂದರು.

ಅಲ್ಲಿ ತನಕ ಸಿಎಂ ಸ್ಥಾನ ಖಾಲಿ ಇಲ್ಲ. 2028 ರಲ್ಲೂ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷವೇ ಅಧಿಕಾರಕ್ಕೆ ಬರಲಿದೆ ಎಂದು ಅವರು ಇದೇ ಸಂದರ್ಭದಲ್ಲಿ ವಿಶ್ವಾಸ ವ್ಯಕ್ತಪಡಿಸಿದರು. ಸಿಎಂ ಬದಲಾವಣೆ ಚರ್ಚೆಯ ಸಂದರ್ಭದಲ್ಲಿ ಜಮೀರ್ ನೀಡಿರುವ ಈ ಹೇಳಿಕೆ ಇದೀಗ ಚರ್ಚೆಗೆ ಗ್ರಾಸವಾಗಿದೆ.

2028 ವರೆಗೆ ಸಿದ್ದರಾಮಯ್ಯ ಸಿಎಂ ಎಂಬ ಜಮೀರ್ ಅಹ್ಮದ್ ಹೇಳಿಕೆ ವಿಚಾರವಾಗಿ ಡಿಸಿಎಂ ಡಿಕೆ ಶಿವಕುಮಾರ್ ಅವರು ಪ್ರತಿಕ್ರಿಯೆನೀಡಿದ್ದಾರೆ. ಬೆಂಗಳೂರಿನಲ್ಲಿ ಬುಧವಾರ ಮಾತನಾಡಿದ

## ವನ್ಯಜೀವಿ-ಮಾನವ ಸಂಘರ್ಷ ಶೀಘ್ರವೇ ಸಿಎಂ ನೇತೃತ್ವದಲ್ಲಿ ಸಭೆ

# ಕಾಡಿನೊಳಗಿನ ಜನವಸತಿ ಸ್ಥಳಾಂತರದ ಪರಿಶೀಲನೆ: ಈಶ್ವರ ಖಂಡ್ರೆ



**ಬೆಂಗಳೂರು:** ರಾಜ್ಯದಲ್ಲಿ ವನ್ಯಜೀವಿಗಳ ಸಂಖ್ಯೆಯಲ್ಲಿ ಹೆಚ್ಚಳವಾಗಿದ್ದು, ಕಾಡಿನೊಳಗಿರುವ ಜನವಸತಿಗಳನ್ನು ಸ್ಥಳಾಂತರಿಸುವ ಕುರಿತಂತೆ ಪರಿಶೀಲಿಸಲಾಗುತ್ತಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ.

ಕುದುರೆಮುಖ ರಾಷ್ಟ್ರೀಯ ಉದ್ಯಾನವನದ ಕಾರ್ಕಳ ವ್ಯಾಪ್ತಿಯ ನಿವಾಸಿಗಳ ಪುನರ್ವಸತಿ ಮತ್ತು ಪರಿಹಾರಕ್ಕೆ ಸಂಬಂಧಿಸಿದಂತೆ 2005ರ ಸರ್ಕಾರಿ ಸುತ್ತೋಲೆ ಪುನರ್ ಪರಿಶೀಲಿಸಿ ಮರು ಆದೇಶ ಮಾಡುವಂತೆ ಕೋರಿ ಶಾಸಕ ಟಿ.ಡಿ. ರಾಜೇಗೌಡ ನೇತೃತ್ವದ ನಿಯೋಗದಿಂದ ಮನವಿ ಸ್ವೀಕರಿಸಿ ಅವರು ಮಾತನಾಡಿದರು.

ಹಿಂದೆ ವನ್ಯಜೀವಿಗಳ ಕಳ್ಳಬೇಟೆ ನಡೆ-ಯುತ್ತಿತ್ತು. ಇಲಾಖೆ ಕಟ್ಟುನಿಟ್ಟಿನ ಕ್ರಮ ಕೈಗೊಂಡು ಇದನ್ನು ನಿಯಂತ್ರಿಸಿದ್ದು, ಉತ್ತಮ ಪರಿಸರವಿರುವುದರಿಂದ ವನ್ಯಜೀವಿಗಳ ಸಂಖ್ಯೆಯಲ್ಲಿ ಹೆಚ್ಚಳವಾಗಿದೆ. ಆದರೆ ಹೆಚ್ಚುತ್ತಿರುವ ವನ್ಯಜೀವಿಗಳ ಸಂಖ್ಯೆಗೆ ಅನುಗುಣವಾಗಿ ವನ ಪ್ರದೇಶ ಹೆಚ್ಚುತ್ತಿಲ್ಲ ಇದರಿಂದ ಸಮಸ್ಯೆ ಉಲ್ಬಣಿಸುತ್ತಿದೆ ಎಂದರು.

1972ರಲ್ಲಿ ಬಂಡೀಪುರದಲ್ಲಿ ಕೇವಲ 12 ಇದ್ದ ಹುಲಿಗಳ ಸಂಖ್ಯೆ ಇಂದು 170ಕ್ಕೂ ಹೆಚ್ಚಾಗಿದೆ, ಹೀಗಾಗಿ ದುರ್ಬಲ ಹುಲಿಗಳು ಕಾಡಿನಿಂದ ಹೊರಬರುತ್ತಿವೆ. ಹಗಲು ರಾತ್ರಿ ಇಲಾಖೆ ಶ್ರಮಿಸುತ್ತಿದ್ದರು, ಮಾನವ-ವನ್ಯಜೀವಿ ಸಂಘರ್ಷದ ಘಟನೆಗಳು ನಡೆಯುತ್ತಿವೆ. ಈ ಹಿನ್ನೆಲೆಯಲ್ಲಿ ವಿವಿಧ ಇಲಾಖೆಗಳೊಂದಿಗೆ ಸಮನ್ವಯ ಹೆಚ್ಚಿಸಲು ಮುಖ್ಯಮಂತ್ರಿಗಳ ನೇತೃತ್ವದಲ್ಲಿ ಶೀಘ್ರವೇ ಸಭೆ ನಡೆಯಲಿದೆ ಎಂದೂ ಈಶ್ವರ ಖಂಡ್ರೆ ತಿಳಿಸಿದರು.

ಅರಣ್ಯದೊಳಗಿರುವ ಜನವಸತಿಗಳನ್ನು ಸ್ಥಳಾಂತರದಿಂದ ಅರಣ್ಯವಾಸಿಗಳು ಮತ್ತು ಅವರ ಮಕ್ಕಳು ಸಮಾಜದ ಮುಖ್ಯವಾಹಿನಿಗೆ ಬರುತ್ತಾರೆ. ಜೊತೆಗೆ ಮಾನವ-ವನ್ಯಜೀವಿ ಸಂಘರ್ಷವೂ ಕಡಿಮೆ ಆಗುತ್ತದೆ. ಸ್ಥಳಾಂತರಕ್ಕೆ ಪರಿಹಾರ ನೀಡಬೇಕಾಗುತ್ತದೆ. ಇದನ್ನು ಒಂದೇ ಬಾರಿಗೆ ಮಾಡಲು ಸಾಧ್ಯವಿಲ್ಲ. ಹಂತ ಹಂತವಾಗಿ ಮಾಡಬೇಕಾಗುತ್ತದೆ. ಬಜೆಟ್ ನಲ್ಲಿ ಇದಕ್ಕೆ ಹಣ ಮೀಸಲಿಟ್ಟರೆ ಇದು ಸಾಧ್ಯವಾಗುತ್ತದೆ. ಈ ಬಗ್ಗೆ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಲಾಗುವುದು ಎಂದರು.

# ಅಯೋಧ್ಯೆ-ವಾರಾಣಸಿ ದೇಗುಲ ದಾಳಿಗೂ ಸಂಚು



**ನವದೆಹಲಿ:** ದೆಹಲಿಯ ಕಾರು ಸ್ಫೋಟ ಘಟನೆಯೊಂದಿಗೆ ಸಂಬಂಧ ಹೊಂದಿದ್ದ ಭಯೋತ್ಪಾದಕ ಜಾಲವು ಉತ್ತರ ಪ್ರದೇಶದ ಅಯೋಧ್ಯೆ ಮತ್ತು ವಾರಾಣಸಿಯ ಪವಿತ್ರ ದೇಗುಲಗಳ ಮೇಲೆ ದಾಳಿ ನಡೆಸಲು ಯೋಜಿಸಿತ್ತು ಎಂಬ ಬೃಹತ್ ಮಾಹಿತಿ ಲಭ್ಯವಾಗಿದೆ.

ಆರೋಪಿಗಳು ರಕ್ತದಾನ ಶಿಬಿರಗಳು ಮತ್ತು ಜನಸಂದಣಿಯ ಸ್ಥಳಗಳನ್ನು ಸಹ ತಮ್ಮ ಗುರಿಯಾಗಿರಿಸಿಕೊಂಡಿದ್ದರು. ಆದರೆ, ಅವರು ತಮ್ಮ ಯೋಜನೆಯನ್ನು ಕಾರ್ಯರೂಪಕ್ಕೆ ತರುವ ಮೊದಲೇ ಎಟಿಎಸ್ ಮತ್ತು ಪೊಲೀಸರು ಈ ಜಾಲವನ್ನು ನಾಶಮಾಡಿ ಅನೇಕರನ್ನು ಬಂಧಿಸಿದ್ದಾರೆ.

ವಿಚಾರಣಾ ಸಂಸ್ಥೆಗಳು ಈಗ ದೆಹಲಿಯ ಲಾಲ್ ಕಿಲ್ಲಾ ಸಮೀಪ ಸಂಭವಿಸಿದ ಸ್ಫೋಟ ಈ ಜಾಲದ ಮೂಲ ಯೋಜನೆಯ ಭಾಗವಾಗಿರಲಿಲ್ಲ ಎಂದು ಶಂಕಿಸಲಾಗಿದೆ. ಆರಂಭಿಕ ತನಿಖೆಯಲ್ಲಿ ಬಂದ ವಿವರಗಳ ಪ್ರಕಾರ, ಸ್ಫೋಟಕ ಸಾಧನದಲ್ಲಿ ಟೈಮರ್ ಅಥವಾ ರಿಮೋಟ್ ಟ್ರಿಗರ್ ಇರಲಿಲ್ಲ. ಇದರಿಂದ ಸ್ಫೋಟ ಆಕಸ್ಮಿಕವಾಗಿ ಅಥವಾ ಅವಸರದಲ್ಲಿ ಸಂಭವಿಸಿರಬಹುದು ಎಂದು ನಂಬಲಾಗಿದೆ. ಸದರಿ ಆರೋಪಿಗಳು ಸ್ಫೋಟಕಗಳನ್ನು ಸಾಗಿಸುತ್ತಿದ್ದ ಸಮಯದಲ್ಲಿ ಸಾಧನವು ಅಕಾಲಿಕವಾಗಿ ಸಿಡಿದಿರಬಹುದು ಎಂದು ವರದಿಯಾಗಿದೆ. ಹಲವಾರು ರಾಜ್ಯಗಳಲ್ಲಿ ನಡೆದ ಪೊಲೀಸ್ ಕಾರ್ಯಾಚರಣೆ-ಯ ನಂತರ ಈ ಜಾಲ ಒತ್ತಡದಲ್ಲಿದ್ದು ಗಾಬರಿಗೊಂಡಿತ್ತು ಎಂದು ತನಿಖೆಯಿಂದ ತಿಳಿದುಬಂದಿದೆ. ಶಂಕಾಸ್ಪದರ ವಿಚಾರಣೆಯಲ್ಲಿ, ಗರಿಷ್ಠ ಸಾವುನೋವುಗಳನ್ನು ಉಂಟುಮಾಡಲು ಆಸ್ಪತ್ರೆಗಳು ಮತ್ತು ಇತರ ಜನಸಂದಣಿಯ ಸಾರ್ವಜನಿಕ ಸ್ಥಳಗಳ ಮೇಲೆ ದಾಳಿ ನಡೆಸಲು ಭಯೋತ್ಪಾದಕರ ಜಾಲವು ಯೋಜಿಸಿತ್ತು ಎಂದು ತಿಳಿದುಬಂದಿದೆ.

ಆರೋಪಿಗಳು ಹೆಚ್ಚು ಜನಸಂಚಾರವಿರುವ ಸ್ಥಳಗಳ ಪಟ್ಟಿಯನ್ನು ನಿರ್ವಹಿಸುತ್ತಿದ್ದರು ಎಂದು ತಿಳಿದುಬಂದಿದೆ. ಉತ್ತರ ಭಾರತದಲ್ಲಿ ಸಕ್ರಿಯವಾಗಿರುವ ಇತರ ಭಯೋತ್ಪಾದಕ ಸಂಸ್ಥೆಗಳೊಂದಿಗಿನ ಈ ಜಾಲದ ಸಂಪರ್ಕ ಮತ್ತು ಡಿಜಿಟಲ್ ಮಾರ್ಗಗಳನ್ನು ಭದ್ರತಾ ಸಂಸ್ಥೆಗಳು ಪರಿಶೀಲಿಸುತ್ತಿವೆ.

ಸೋಮವಾರ ಸಂಜೆ ದೆಹಲಿಯ ಲಾಲ್ ಕಿಲ್ಲಾ ಮೆಟ್ರೋ ನಿಲ್ದಾಣದ ಬಳಿ ಪಾರ್ಕ್ ಮಾಡಿದ್ದ ಹುಂಡೈ ಐ20 ಕಾರಿನಲ್ಲಿ ಸಂಭವಿಸಿದ ಹೆಚ್ಚಿನ ತೀವ್ರತೆಯ ಸ್ಫೋಟದಿಂದ ಕನಿಷ್ಠ 12 ಜನರು ಸಾವನ್ನಪ್ಪಿದರು. 20 ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ ಹಾಗೂ ಹಲವಾರು ವಾಹನಗಳು ಸುಟ್ಟುಭಸ್ಮವಾಗಿವೆ.

## ನ.13 ರಿಂದ 18 ರವರೆಗೆ ಬಳ್ಳಾರಿಯಲ್ಲಿ ಅಗ್ನಿವೀರ್ ಸೇನಾ ನೇಮಕಾತಿ ರ್‍ಯಾಲಿ

# ಅಧಿಕಾರಿಗಳು ಕ್ರಿಯಾಶೀಲರಾಗಿ ಕಾರ್ಯನಿರ್ವಹಿಸಿ

## ಅಂತಿಮ ಸಿದ್ಧತೆಗಳ ಪರಿಶೀಲಿಸಿ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಸೂಚನೆ



**ಬಳ್ಳಾರಿ:** ಇದೇ ನ.13 ರಿಂದ 18 ರ ವರೆಗೆ ಬಳ್ಳಾರಿಯ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯುವ ಅಗ್ನಿವೀರ್ ಸೇನಾ ನೇಮಕಾತಿ ರ್‍ಯಾಲಿ ಯಶಸ್ವಿಗೊಳಿಸಲು, ಎಲ್ಲಾ ಇಲಾಖೆಗಳ ಅಧಿಕಾರಿಗಳು ನಿರಂತರ ಸಂಪರ್ಕದಲ್ಲಿದ್ದುಕೊಂಡು ಕ್ರಿಯಾಶೀಲರಾಗಿ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಹೇಳಿದರು.

ಮಂಗಳವಾರ ನಗರದ ನೂತನ ಜಿಲ್ಲಾಡಳಿತ ಭವನದ ವಿಡಿಯೋ ಸಭಾಂಗಣದಲ್ಲಿ ಅಗ್ನಿವೀರ್ ಸೇನಾ ನೇಮಕಾತಿ ರ್‍ಯಾಲಿಯ ಅಂತಿಮ ಸಿದ್ಧತೆ ಕುರಿತು ಏರ್ಪಡಿಸಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಮ್ಮ ದೇಶದ ಸೈನ್ಯದಲ್ಲಿ ಸೇರಬಯಸುವ ಅಗ್ನಿವೀರರ ಆಯ್ಕೆ ಪ್ರಕ್ರಿಯೆಯು ನಮ್ಮ ಜಿಲ್ಲೆಯಲ್ಲಿ ನಡೆಯುತ್ತಿರುವುದು ಜಿಲ್ಲೆಯ ಹೆಮ್ಮೆಯ ಸಂಗತಿ ಮತ್ತು ನಮಗೆ ದೊರೆತ ಅವಕಾಶವಾಗಿದೆ. ಹಾಗಾಗಿ ಅಧಿಕಾರಿಗಳು ಆಸಕ್ತಿಯಿಂದ ಕೆಲಸ ನಿರ್ವಹಿಸುವ ಮೂಲಕ ಯಾವುದೇ ರೀತಿಯಲ್ಲಿ ಅಡಚಣೆಯಾಗದಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು.

**ಸಹಾಯವಾಣಿ ಕೇಂದ್ರ:** ನ.13 ರಿಂದ 18 ರ ವರೆಗೆ ನಡೆಯುವ ರ್‍ಯಾಲಿಯಲ್ಲಿ ಅರ್ಹತಾ ಪರೀಕ್ಷೆಯಲ್ಲಿ ಅರ್ಹತೆ ಹೊಂದಿದ ಅಗ್ನಿವೀರರು ರಾಜ್ಯದ ವಿವಿಧೆಡೆಯಿಂದ ಆಗಮಿಸಲಿದ್ದು, ಅವರಿಗೆ ಸೂಕ್ತ ಮಾರ್ಗದರ್ಶನ ಮಾಡಬೇಕು. ನಗರದ ಬಸ್ ನಿಲ್ದಾಣ, ರೈಲು ನಿಲ್ದಾಣದಲ್ಲಿ ನಿರ್ಮಿಸಲಾಗುವ ಸಹಾಯವಾಣಿ ಕೇಂದ್ರಗಳ ಮೂಲಕ ರ್‍ಯಾಲಿ ನಡೆಯುವ ಸ್ಥಳಕ್ಕೆ ತಲುಪಲು ಸ್ಥಳದ ಮಾಹಿತಿ ನೀಡಬೇಕು. ಅಗತ್ಯವಾದಲ್ಲಿ ನಿಯೋಜಿಸಿರುವ ಬಸ್ ಗಳ ಮೂಲಕ ಕರೆತರಬೇಕು. ಯಾವುದೇ ರೀತಿಯಲ್ಲಿ ತೊಂದರೆಯಾಗದಂತೆ ನೋಡಿಕೊಳ್ಳಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

**ತಂಗಲು ವಸತಿ, ಊಟದ ವ್ಯವಸ್ಥೆ:** ರ್‍ಯಾಲಿಯಲ್ಲಿ ಭಾಗವಹಿಸಲು ದೂರದ ಪ್ರದೇಶಗಳಿಂದ ಆಗಮಿಸುವ ಅರ್ಹತೆ ಪಡೆದ ಅಭ್ಯರ್ಥಿಗಳಿಗೆ ನಗರದ ವಾಲ್ಮೀಕಿ ಭವನ, ಡಾ.ಬಾಬು ಜಗನ್ ಜೀವನ್ ರಾಂ ಭವನ, ಜಿಲ್ಲಾ ಕ್ರೀಡಾಂಗಣ, ಸರ್ಕಾರಿ ಅತಿಥಿ ಗೃಹ ಮತ್ತು ಮಹಾನಗರ ಪಾಲಿಕೆ ವ್ಯಾಪ್ತಿಯ ರಾತ್ರಿ ತಂಗುದಾಣಗಳಲ್ಲಿ ತಂಗಲು ವಸತಿ ಜೊತೆಗೆ ಊಟದ ವ್ಯವಸ್ಥೆ ಮಾಡಲಾಗಿದ್ದು, ಸಂಬಂಧಿಸಿದ ಅಧಿಕಾರಿಗಳು ಬರುವ ಅಭ್ಯರ್ಥಿಗಳಿಗೆ ಸೂಕ್ತ ನಿರ್ದೇಶನ ನೀಡಬೇಕು. ಅವರ ಪ್ರವೇಶ ಪತ್ರ ಪರಿಶೀಲಿಸಿ ವ್ಯವಸ್ಥೆ ಮಾಡಬೇಕು ಎಂದು ತಿಳಿಸಿದ ಜಿಲ್ಲಾಧಿಕಾರಿಯವರು, ಅಭ್ಯರ್ಥಿಗಳು ಬೇ-ರೆಡೆ ಎಲ್ಲಿಯೂ ಹೊರವಲಯದಲ್ಲಿ ವಾಸ್ತವ್ಯ ಮಾಡಬಾರದು. ಅವರ ಜೊತೆಯಾಗಿ ಬರುವ ಪೋಷಕರು, ಸ್ನೇಹಿತರಿಗೆ ಅವಕಾಶ ಇರದಿರುವ ಬಗ್ಗೆ ಮಾಹಿತಿ ನೀಡಬೇಕು. ಯಾವುದೇ ರೀತಿಯಲ್ಲಿ ಲೋಪವಾಗದಂತೆ ನಿರ್ವಹಿಸಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು.

**ಮೇಲ್ವಿಚಾರಣೆಗೆ ಅಧಿಕಾರಿಗಳ ನೇಮಕ:** ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯುವ 5 ದಿನಗಳ ರ್‍ಯಾಲಿಯಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ಬೆಳಗಿನ ಉಪಾಹಾರ, ಮಧ್ಯಾಹ್ನದ ಭೋಜನ ಅಲ್ಲಿಯೇ ವ್ಯವಸ್ಥೆ ಮಾಡಬೇಕು. ರಾತ್ರಿಯ ಊಟ ಆಯಾ ವಸತಿ ನಿಲಯಗಳಲ್ಲಿಯೇ ವಿತರಣೆ ಮಾಡಬೇಕು. ಅಭ್ಯರ್ಥಿಯು ಭಾಗವಹಿಸುವ ಶಾರೀರಿಕ ಪರೀಕ್ಷೆ ದಿನದಂದು ಮತ್ತು ಮುಂದಿನ ಹಂತಕ್ಕೆ ಅರ್ಹತೆ ಪಡೆದಾಗ ದೈಹಿಕ, ವೈದ್ಯಕೀಯ ಪರೀಕ್ಷೆ ದಿನದಂದು ಉಟೋಪಚಾರ ಕಲ್ಪಿಸಲಾಗುವುದು. ಮೊದಲನೇ ದಿನವೇ ಅನರ್ಹತೆಯಾದಲ್ಲಿ ಹೊರಹೋಗಲಿದ್ದಾರೆ. ಈ ಎಲ್ಲಾ ಪ್ರಕ್ರಿಯೆಯನ್ನು ಮೇಲ್ವಿಚಾರಣೆ ನಡೆಸಲು ಪಾಳಿ ವೇಳೆಯಲ್ಲಿ ನುರಿತ ಅಧಿಕಾರಿಗಳನ್ನು ನೇಮಿಸಬೇಕು ಎಂದು ಹೇಳಿದರು.

**ಸೂಕ್ತ ಬಂದೋಬಸ್ತ್ ಗೆ ನಿರ್ದೇಶನ:** ರ್‍ಯಾಲಿಯಲ್ಲಿ ಭಾಗವಹಿಸುವ ಅಭ್ಯರ್ಥಿಗಳ ಈಗಾಗಲೇ ಅವರು ಸಾಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ಅರ್ಹತೆ ಪಡೆದ ಪ್ರವೇಶ ಪತ್ರವನ್ನು ಹಾಜರುಪಡಿಸಿದಲ್ಲಿ ಮಾತ್ರ ಅವರಿಗೆ ಜಿಲ್ಲಾ ಕ್ರೀಡಾಂಗಣಕ್ಕೆ ಒಳಪ್ರವೇಶ ನೀಡಬೇಕು. ಅನಧಿಕೃತ ವ್ಯಕ್ತಿಗಳಿಗೆ ಅವಕಾಶವಿರುವುದಿಲ್ಲ. ಸುತ್ತ-ಮುತ್ತಲಿನ ಜಿಲ್ಲೆಗಳಿಂದ ದ್ವಿ-ಚಕ್ರ ವಾಹನಗಳಲ್ಲಿ ಬರುವ ಅಭ್ಯರ್ಥಿಗಳಿಗೆ ನಿಗದಿಪಡಿಸಿದ ಸ್ಥಳದಲ್ಲಿ ವಾಹನ ಪಾರ್ಕ್ ಮಾಡಲು ಸೂಚಿಸಬೇಕು. ಬ್ಯಾರೀಕೇಡ್ ವ್ಯವಸ್ಥೆ ಮಾಡಬೇಕು. ಜಿಲ್ಲಾ ಕ್ರೀಡಾಂಗಣದ ಸುತ್ತಲೂ ಬಿಗಿ ಪೊಲೀಸ್ ಬಂದೋಬಸ್ತ್ ಕಲ್ಪಿಸಬೇಕು. ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ನಿರ್ದೇಶನ ನೀಡಿದರು.

**ಸಿಸಿಟಿವಿ ಅಳವಡಿಕೆ:** ಅಗ್ನಿವೀರ್ ಸೇನಾ ನೇಮಕಾತಿ ರ್‍ಯಾಲಿಯನ್ನು ಅಚ್ಚುಕಟ್ಟಾಗಿ ನಿರ್ವಹಿಸಲು ಜಿಲ್ಲಾ ಕ್ರೀಡಾಂಗಣ, ವಸತಿ ನಿಲಯ, ಒಳ-ಹೊರ ಪ್ರವೇಶ ಸೇರಿದಂತೆ ಅಗತ್ಯ ಕಡೆ ಇರುವ ಸ್ಥಳಗಳಲ್ಲಿ ಕಡ್ಡಾಯವಾಗಿ ಸಿಸಿಟಿವಿ ಕ್ಯಾಮೆರಾ ಅಳವಡಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದರು.

**ಸ್ವಚ್ಛತಾ ಕ್ರಮ:** ಜಿಲ್ಲಾ ಕ್ರೀಡಾಂಗಣದ ಸುತ್ತಲೂ ಲೈಟಿಂಗ್ ವ್ಯವಸ್ಥೆ ಮಾಡಬೇಕು. ರ್‍ಯಾಲಿ ನಡೆಯುವ ದಿನಗಳಂದು ಕ್ರೀಡಾಂಗಣ ಮತ್ತು ವಸತಿ ನಿಲಯಗಳಲ್ಲಿ ಸ್ವಚ್ಛತಾ ಕಾರ್ಯಕ್ಕಾಗಿ ಪೌರಕಾರ್ಮಿಕರನ್ನು ನಿಯೋಜಿಸಬೇಕು ಎಂದು ಮಹಾನಗರ ಪಾಲಿಕೆ ಆಯುಕ್ತರಿಗೆ ಸೂಚಿಸಿದರು.

ಜಿಲ್ಲಾ ಕ್ರೀಡಾಂಗಣದ ಬಳಿ ಅಗತ್ಯ ಅಂಬುಲೆನ್ಸ್, ಅಗ್ನಿಶಾಮಕ ವಾಹನ, ಆರೋಗ್ಯ ಸಮಸ್ಯೆಗಳಿಗೆ ನುರಿತ ವೈದ್ಯರು ಹಾಗೂ ಆರೋಗ್ಯ ಸಿಬ್ಬಂದಿ ನಿಯೋಜಿಸಬೇಕು ಎಂದು ಜಿಲ್ಲಾ ಆರೋಗ್ಯಾಧಿಕಾರಿಗಳಿಗೆ ತಿಳಿಸಿದರು.

ನಿರಂತರ ವಿದ್ಯುತ್ ವ್ಯವಸ್ಥೆ, ವಿದ್ಯುತ್ ದೀಪ ಮತ್ತು ಜನರೇಟರ್ ವ್ಯವಸ್ಥೆ, ಬಿಎಸ್‌ಎನ್‌ಎಲ್ ಬ್ರಾಡ್‌ಬ್ಯಾಂಡ್ ಇಂಟರ್ನೆಟ್ ಜೊತೆಗೆ ವೈಫೈ ಮತ್ತು ಎಲ್‌ಎಎನ್ ಸಂಪರ್ಕ, ಟೆಕ್ನಿಕಲ್ ಸಿಬ್ಬಂದಿ ನಿಯೋಜಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಬೆಂಗಳೂರು ಪ್ರಧಾನ ಕಚೇರಿಯ ಆರ್‌ಓ ಮತ್ತು ಸೇನಾ ನೇಮಕಾತಿ ಅಧಿಕಾರಿಯಾದ ಮೇಜರ್ ಕಪಿಲ್.ಕೆ ಅವರು ಮಾತನಾಡಿ, ನ.13 ರಿಂದ 18 ರ ವರೆಗೆ ನಡೆಯಲಿರುವ ರ್‍ಯಾಲಿಯು ಅಂದಿನ ದಿನಗಳಂದು ಬೆಳಿಗ್ಗೆ 05 ಗಂಟೆಯಿಂದಲೇ ಆರಂಭವಾಗಲಿದ್ದು, ಓಟ ಸೇರಿದಂತೆ ದೈಹಿಕ ಪರೀಕ್ಷೆ ಮತ್ತು ವೈದ್ಯಕೀಯ ಪರೀಕ್ಷೆ ಒಳಗೊಂಡು ಸಂಜೆ 06 ಗಂಟೆಯವರೆಗೆ ಆಯ್ಕೆ ಪ್ರಕ್ರಿಯೆ ನಡೆಯಲಿದೆ. 100 ಅಭ್ಯರ್ಥಿಗಳಲ್ಲಿ 10 ರಿಂದ 20 ಅಭ್ಯರ್ಥಿಗಳು ಅನರ್ಹತೆ ಹೊಂದುವ ಅವಕಾಶ ಇರಲಿದೆ ಎಂದು ಸಭೆಗೆ ತಿಳಿಸಿದರು.

ಜಿಲ್ಲೆಯಲ್ಲಿ ನಡೆಯಲಿರುವ ಅಗ್ನಿವೀರ್ ಸೇನಾ ನೇಮಕಾತಿ ರ್‍ಯಾಲಿಯನ್ನು ಯಶಸ್ವಿಗೊಳಿಸಲು ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ವಹಿಸಿದ ಕಾರ್ಯಭಾರವನ್ನು ಆಸಕ್ತಿಯಿಂದ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಅಧಿಕಾರಿಗಳಿಗೆ ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್., ಮಹಾನಗರ ಪಾಲಿಕೆ ಆಯುಕ್ತ ಪಿ.ಎಸ್.ಮಂಜುನಾಥ, ಡಿಎಂಎಫ್ ವಿಶೇಷಾಧಿಕಾರಿ ಲೋಕೇಶ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**